ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 166 RNI Number : KNKAN/25/A2770 24-06-2026 Wednesday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :166 ರಾಯಚೂರು 24-06-2026 ಬುಧವಾರ ಪುಟ 04 ಬೆಲೆ ರೂ.2/- ಮೊ:8660146563

ಶೀಘ್ರದಲ್ಲೇ ಕಾಂಗ್ರೆಸ್ ಜಿಲ್ಲಾಧ್ಯಕ್ಷರ ನೇಮಕಾತಿ -ಹರಿಪ್ರಸಾದ್

ಮಂಗಳೂರು: ರಾಜ್ಯ ಕಾಂಗ್ರೆಸ್ ಸಂಘಟನೆಗೆ ಹೊಸ ರೂಪ ನೀಡುವ ನಿಟ್ಟಿನಲ್ಲಿ ಶೀಘ್ರದಲ್ಲೇ ಜಿಲ್ಲಾಧ್ಯಕ್ಷರ ನೇಮಕಾತಿ ಪ್ರಕ್ರಿಯೆ ಆರಂಭವಾಗಲಿದ್ದು, ಈ ಬಾರಿ ಬೇರೆ ರಾಜ್ಯಗಳಿಂದ ಬರುವ ವೀಕ್ಷಣಾಕಾರರು ಜಿಲ್ಲೆಯಲ್ಲೇ ಒಂದು ವಾರ ತಂಗಿ ಕಾರ್ಯಕರ್ತರು ಹಾಗೂ ಮುಖಂಡರ ಅಭಿಪ್ರಾಯ ಸಂಗ್ರಹಿಸಿ ಎಐಸಿಸಿಗೆ ಹೆಸರು ಶಿಫಾರಸು ಮಾಡುವ ಮೂಲಕ ಅಂತಿಮ ಆಯ್ಕೆ ನಡೆಯಲಿದೆ ಎಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ತಿಳಿಸಿದರು.

ಮಂಗಳೂರಿನ ಕಾಂಗ್ರೆಸ್ ಕಚೇರಿಯಲ್ಲಿ ಮಂಗಳವಾರ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಅವರು, ಹಿಂದೆ ಕೆಪಿಸಿಸಿ ಅಧ್ಯಕ್ಷರು ಹಾಗೂ ಕಾಂಗ್ರೆಸ್ ಶಾಸಕಾಂಗ ಪಕ್ಷದ ನಾಯಕರು ಜಿಲ್ಲಾಧ್ಯಕ್ಷರ ಹೆಸರನ್ನು ಎಐಸಿಸಿಗೆ ಶಿಫಾರಸು ಮಾಡುತ್ತಿದ್ದರು. ಆದರೆ, ಈಗ ಎಐಸಿಸಿಯ ಸಂಘಟನ್ ಸರ್ಜನ್ ಅಭಿಯಾನ್ ಅಡಿಯಲ್ಲಿ ಹೊಸ ವ್ಯವಸ್ಥೆ ಜಾರಿಗೆ ಬಂದಿದೆ. ಇದರಂತೆ ಬೇರೆ ರಾಜ್ಯದ ವೀಕ್ಷಕರು ಜಿಲ್ಲೆಗೆ ಆಗಮಿಸಿ ಕನಿಷ್ಠ ಏಳು ದಿನಗಳ ಕಾಲ ಬ್ಲಾಕ್ ಕಾಂಗ್ರೆಸ್ ಸಮಿತಿಗಳ ಸಭೆ ನಡೆಸಿ, ಕಾರ್ಯಕರ್ತರು ಹಾಗೂ ಮುಖಂಡರ ಅಭಿಪ್ರಾಯ ಸಂಗ್ರಹಿಸಲಿದ್ದಾರೆ. ಬಳಿಕ ಕನಿಷ್ಠ ಇಬ್ಬರಿಂದ ಗರಿಷ್ಠ ಆರು ಅಭ್ಯರ್ಥಿಗಳ ಹೆಸರನ್ನು ಎಐಸಿಸಿಗೆ ಸಲ್ಲಿಸಲಿದ್ದು, ಅದರ ಆಧಾರದ ಮೇಲೆ ಜಿಲ್ಲಾಧ್ಯಕ್ಷರನ್ನು ನೇಮಕ ಮಾಡಲಾಗುತ್ತದೆ ಎಂದು ವಿವರಿಸಿದರು.

ಎಸ್‌ಐಆರ್ ವಿರುದ್ಧ ಕಾಂಗ್ರೆಸ್ ಹೋರಾಟ: ಎಸ್‌ಐಆರ್ ( ) ಕುರಿತು ಚುನಾವಣಾ ಆಯೋಗದ ಅಧಿಕಾರಿಗಳೊಂದಿಗೆ ವಿಡಿಯೋ ಕಾನ್ಫರೆನ್ಸ್ ನಡೆಸಲಾಗಿದೆ. ಮತದಾರರ ಪಟ್ಟಿಯಿಂದ ಹೆಸರು ಕೈಬಿಟ್ಟಿರುವ ನೈಜ ಮತದಾರರ ದಾಖಲಾತಿಗೆ ಮತ್ತೊಮ್ಮೆ ವಿಶೇಷ ಅಭಿಯಾನ ನಡೆಸುವಂತೆ ಒತ್ತಾಯಿಸಲಾಗಿದೆ. ನೈಜ ಮತದಾರರನ್ನು ಮತದಾನದ ಹಕ್ಕಿನಿಂದ ವಂಚಿಸಲು ಪ್ರಯತ್ನ ನಡೆಯುತ್ತಿದ್ದು, ಚುನಾವಣಾ ಆಯೋಗ ಬಿಜೆಪಿ ಪರವಾಗಿ ಕೆಲಸ ಮಾಡುತ್ತಿರುವಂತೆ ಕಾಣುತ್ತಿದೆ. ಯಾವುದೇ ನೈಜ ಮತದಾರರು ಮತದಾನದ ಹಕ್ಕು ಕಳೆದುಕೊಳ್ಳದಂತೆ ಕಾಂಗ್ರೆಸ್ ಹೋರಾಟ ನಡೆಸಲಿದೆ ಎಂದು ಅವರು ಹೇಳಿದರು.

ನಗರದ ಪುರಭವನದಲ್ಲಿ ನಡೆದ ಎಸ್‌ಐಆರ್ ಜಾಗೃತಿ ಸಮಾವೇಶವನ್ನು ಉದ್ಘಾಟಿಸಿ ಮಾತನಾಡಿದ ಅವರು, ಬಿಜೆಪಿ ಹಾಗೂ ಆರ್‌ಎಸ್‌ಎಸ್ ಘಟಕ ಎಸ್‌ಐಆರ್ ನೆಪದಲ್ಲಿ ಕಾಂಗ್ರೆಸ್ ಬೆಂಬಲಿಗರನ್ನು ಮತದಾರರ ಪಟ್ಟಿಯಿಂದ ಕೈಬಿಡಲು ಸಂಚು ರೂಪಿಸುತ್ತಿವೆ ಎಂದು ಆರೋಪಿಸಿದರು.

ಫೇಕ್ ಸರ್ಟಿಫಿಕೇಟ್ ಇಟ್ಟುಕೊಂಡ ವ್ಯಕ್ತಿಯೇ ಪ್ರಧಾನಿಯಾಗಬಹುದಾದರೆ, ಎಲ್ಲಾ ನೈಜ ದಾಖಲೆಗಳಿರುವ ಸಾಮಾನ್ಯ ನಾಗರಿಕರಿಗೆ ಮತದಾನದ ಹಕ್ಕು ಇರಬಾರದೇ? ಎಂದು ಪ್ರಶ್ನಿಸಿದ ಹರಿಪ್ರಸಾದ್, ನಕಲಿ ಮತದಾರರನ್ನು ತೆಗೆದುಹಾಕಬೇಕಾದರೆ ಮೊದಲು ಬಿಜೆಪಿ ಹಾಗೂ ಆರ್‌ಎಸ್‌ಎಸ್‌ನಲ್ಲಿರುವ ನಕಲಿ ಮತದಾರರನ್ನು ಗುರುತಿಸಬೇಕು ಎಂದು ವಾಗ್ದಾಳಿ ನಡೆಸಿದರು.

ಪ್ರತಿ ವರ್ಷ ಜನವರಿಯಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ ನಡೆಯಬೇಕಿತ್ತು. ಆದರೆ, 2003-04ರ ಬಳಿಕ ಸಮಗ್ರ ಪರಿಷ್ಕರಣೆ ನಡೆದಿಲ್ಲ. 2014 ಹಾಗೂ 2021ರಲ್ಲೂ ನಡೆಯಬೇಕಿದ್ದ ಪರಿಷ್ಕರಣೆ ನಡೆದಿಲ್ಲ. ಈಗ ಎಸ್‌ಐಆರ್ ಮೂಲಕ ಕಾಂಗ್ರೆಸ್ ಬೆಂಬಲಿಗರ ಹೆಸರುಗಳನ್ನು ಮತಪಟ್ಟಿಯಿಂದ ತೆಗೆದುಹಾಕುವ ಪ್ರಯತ್ನ ನಡೆಯುತ್ತಿದೆ ಎಂದು ಆರೋಪಿಸಿದರು.

ಕಾರ್ಯಕರ್ತರಿಗೆ ಪರಿಶೀಲನೆಗೆ ಕರೆ: ರಾಜ್ಯದಲ್ಲಿ ವಲಸೆ ಕಾರ್ಮಿಕರ ಸಂಖ್ಯೆ ಹೆಚ್ಚಾಗಿದ್ದು, ಅವರು ಎಲ್ಲಿ ವಾಸಿಸುತ್ತಿದ್ದಾರೆ ಎಂಬುದು ದೊಡ್ಡ ಸವಾಲಾಗಿದೆ. ಕಾಂಗ್ರೆಸ್ ಕಾರ್ಯಕರ್ತರು ತಮ್ಮ ಊರು, ಹಳ್ಳಿ ಹಾಗೂ ವಾರ್ಡ್‌ಗಳಲ್ಲಿ ಮನೆಮನೆಗೆ ತೆರಳಿ ಮತದಾರರ ಪಟ್ಟಿಯನ್ನು ಪರಿಶೀಲಿಸಬೇಕು. ನೆರೆಹೊರೆಯವರು ಹಾಗೂ ಸಂಬಂಧಿಕರ ಮಾಹಿತಿಯನ್ನೂ ಪರಿಶೀಲಿಸಬೇಕು. ನಕಲಿ ಮತದಾರರಿದ್ದರೆ ಸೂಕ್ತ ದಾಖಲೆಗಳೊಂದಿಗೆ ಗುರುತಿಸಬೇಕು. ಆದರೆ, ಯಾವುದೇ ಸಂದರ್ಭದಲ್ಲೂ ನೈಜ ಮತದಾರರ ಮತದಾನದ ಹಕ್ಕಿಗೆ ಧಕ್ಕೆ ತರಬಾರದು ಎಂದು ಕರೆ ನೀಡಿದರು.

ರಾಹುಲ್ ಗಾಂಧಿ ಅವರು ಇದನ್ನು ಮತ ಕಳ್ಳತನ ಎಂದು ಕರೆಯುತ್ತಾರೆ. ಪಶ್ಚಿಮ ಬಂಗಾಳದಲ್ಲಿ ರಾಜ್ಯಸಭೆ ಚುನಾವಣೆ ವೇಳೆ ನಡೆದ ಬೆಳವಣಿಗೆಗಳೂ ಮತ ಕಳ್ಳತನವೇ ಎಂದು ಹರಿಪ್ರಸಾದ್ ಆರೋಪಿಸಿದರು.

ಬಿಜೆಪಿ ವಿರುದ್ಧ ವಾಗ್ದಾಳಿ: ಶಾಸಕರ ಕುದುರೆ ವ್ಯಾಪಾರ ಕುರಿತು ಪ್ರತಿಕ್ರಿಯಿಸಿದ ಕೆಪಿಸಿಸಿ ಅಧ್ಯಕ್ಷರು, ಆಪರೇಷನ್ ಕಮಲ ಎಂಬ ಹೆಸರಿನಲ್ಲಿ ಬಿಜೆಪಿ 2008ರಿಂದಲೇ ಶಾಸಕರು ಮತ್ತು ಸಂಸದರನ್ನು ಖರೀದಿ-ಮಾರಾಟ ಮಾಡುತ್ತಿದೆ. ಇತ್ತೀಚೆಗಷ್ಟೇ ಪಶ್ಚಿಮ ಬಂಗಾಳದಲ್ಲಿ ಹಲವು ಶಾಸಕರು ಹಾಗೂ ಸಂಸದರನ್ನು ಸೆಳೆದುಕೊಂಡಿದೆ. ಈ ಮೂಲಕ ದೇಶವನ್ನು ಬನಾನ ಗಣರಾಜ್ಯವನ್ನಾಗಿ ಪರಿವರ್ತಿಸುವ ಕೆಲಸ ನಡೆಯುತ್ತಿದೆ ಎಂದು ಟೀಕಿಸಿದರು.

ಬಿಡದಿ ಟೌನ್‌ಶಿಪ್ ಯೋಜನೆ ಬಿಜೆಪಿ ಅವಧಿಯಲ್ಲೇ ಆರಂಭವಾಗಿದ್ದು, ಅದರ ಕುರಿತು ಈಗ ಆರೋಪ ಮಾಡುವುದು ಸರಿಯಲ್ಲ. ಹೆಚ್ಚಿನ ಸಮಸ್ಯೆಗಳಿದ್ದರೆ ಕಾಂಗ್ರೆಸ್ ನಾಯಕರು ಸ್ಥಳಕ್ಕೆ ತೆರಳಿ ಪರಿಶೀಲನೆ ನಡೆಸಲಿದ್ದಾರೆ ಎಂದರು.

ಅಯೋಧ್ಯೆ ವಿಚಾರದಲ್ಲಿ ಗಂಭೀರ ಆರೋಪ: ಅಯೋಧ್ಯೆಯಲ್ಲಿ ₹200 ಕೋಟಿ ದುರ್ಬಳಕೆ ಅಥವಾ ಕಳವು ನಡೆದಿದೆ ಎಂಬ ವರದಿಗಳ ಕುರಿತು ಪ್ರತಿಕ್ರಿಯಿಸಿದ ಅವರು, ದೇವಸ್ಥಾನ ನಿರ್ಮಾಣದ ಹೆಸರಿನಲ್ಲಿ ಭಕ್ತರಿಂದ ಸಂಗ್ರಹಿಸಲಾದ ಹಣ ದುರುಪಯೋಗ ಆಗಿರುವುದು ಅತ್ಯಂತ ನಾಚಿಕೆಗೇಡಿನ ಸಂಗತಿ ಎಂದರು.

ಈ ಪ್ರಕರಣವನ್ನು ಸಿಬಿಐಗೆ ವಹಿಸಿದರೆ ನ್ಯಾಯ ಸಿಗುವುದಿಲ್ಲ. ಸುಪ್ರೀಂ

3ನೇಯ ಪುಟಕ್ಕೆ

ಸುದ್ದಿಯ ಒತ್ತಡದ ನಡುವೆಯೂ ಕ್ರೀಡೆಗಳಲ್ಲಿ ಭಾಗವಹಿಸಿ ಆರೋಗ್ಯ ಕಾಪಾಡಿಕೊಳ್ಳಿ: ಜಿಲ್ಲಾಧಿಕಾರಿ ಪೂವಿತಾ ಎಸ್

ಪತ್ರಿಕಾ ದಿನಾಚರಣೆ ಅಂಗವಾಗಿ ಪತ್ರಕರ್ತರ ಜಿಲ್ಲಾ ಮಟ್ಟದ ಕ್ರಿಕೆಟ್ ಪಂದ್ಯಾವಳಿಗೆ ಚಾಲನೆ

ರಾಯಚೂರು, ಜೂನ್ 23: ಸುದ್ದಿಯ ಒತ್ತಡದ ನಡುವೆಯೂ ಪತ್ರಕರ್ತರು ಕ್ರಿಕೆಟ್ ಸೇರಿದಂತೆ ವಿವಿಧ ಕ್ರೀಡಾ ಚಟುವಟಿಕೆಗಳಲ್ಲಿ ಭಾಗವಹಿಸುವ ಮೂಲಕ ಮಾನಸಿಕ ಹಾಗೂ ದೈಹಿಕ ಆರೋಗ್ಯ ಕಾಪಾಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಪೂವಿತಾ ಎಸ್ ಕರೆ ನೀಡಿದರು.

ನಗರದ ಮಹಾತ್ಮ ಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕೆಯುಡಬ್ಲ್ಯೂಜೆ) ರಾಯಚೂರು ಜಿಲ್ಲಾ ಘಟಕದ ವತಿಯಿಂದ ಪತ್ರಿಕಾ ದಿನಾಚರಣೆ ಅಂಗವಾಗಿ ಪತ್ರಕರ್ತರಿಗಾಗಿ ಆಯೋಜಿಸಿದ್ದ ಜಿಲ್ಲಾ ಮಟ್ಟದ ಕ್ರಿಕೆಟ್ ಪಂದ್ಯಾವಳಿಗೆ ಚಾಲನೆ ನೀಡಿ ಅವರು ಮಾತನಾಡಿದರು.

ಪ್ರಜಾಪ್ರಭುತ್ವದ ನಾಲ್ಕನೇ ಅಂಗವಾದ ಪತ್ರಿಕೋದ್ಯಮ ಸಮಾಜದಲ್ಲಿ ಜಾಗೃತಿ ಮೂಡಿಸುವ ಮಹತ್ವದ ಹೊಣೆಗಾರಿಕೆಯನ್ನು ನಿರ್ವಹಿಸುತ್ತಿದೆ. ಸಾರ್ವಜನಿಕ ಸಮಸ್ಯೆಗಳನ್ನು ಬೆಳಕಿಗೆ ತಂದು ಜನರಲ್ಲಿ ಅರಿವು ಮೂಡಿಸುವ ಕಾರ್ಯವನ್ನು ಪತ್ರಕರ್ತರು ನಿರಂತರವಾಗಿ ಮುಂದುವರಿಸಬೇಕು ಎಂದು ಹೇಳಿದರು.

ನಿತ್ಯದ ಕೆಲಸದ ಒತ್ತಡದ ನಡುವೆಯೂ ಕ್ರೀಡಾ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವುದು ದೈಹಿಕ ಆರೋಗ್ಯದ ಜೊತೆಗೆ ಮಾನಸಿಕ ನೆಮ್ಮದಿಗೂ ಸಹಕಾರಿಯಾಗುತ್ತದೆ. ಪತ್ರಕರ್ತರು ಕ್ರಿಕೆಟ್ ಆಟದತ್ತ ಆಸಕ್ತಿ ತೋರಿರುವುದು ಶ್ಲಾಘನೀಯ ಎಂದು ಜಿಲ್ಲಾಧಿಕಾರಿ ಅಭಿಪ್ರಾಯಪಟ್ಟರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಶುಗಿರಿ ಮಾತನಾಡಿ, ಪ್ರತಿದಿನ ಸುದ್ದಿಗಳ ಬೆನ್ನತ್ತಿ ಹೆಚ್ಚಿನ ಒತ್ತಡದಲ್ಲಿ ಕಾರ್ಯನಿರ್ವಹಿಸುವ ಪತ್ರಕರ್ತರು ಕ್ರೀಡೆಯ ಮೂಲಕ ಮನರಂಜನೆ ಹಾಗೂ ಆರೋಗ್ಯದತ್ತ ಗಮನ ಹರಿಸುತ್ತಿರುವುದು ಉತ್ತಮ ಬೆಳವಣಿಗೆ ಎಂದು ಹೇಳಿದರು.

ಕೆಲಸದ ಒತ್ತಡದ ಕಾರಣ ಆರೋಗ್ಯವನ್ನು ನಿರ್ಲಕ್ಷಿಸಬಾರದು. ಆರೋಗ್ಯವೇ ಸಂಪತ್ತು ಎಂಬುದನ್ನು ಅರಿತು ದೈಹಿಕ ಕ್ಷೇಮಕ್ಕೆ ಆದ್ಯತೆ ನೀಡಬೇಕು. ಮುಂದಿನ ದಿನಗಳಲ್ಲಿ ಪತ್ರಕರ್ತರು ಹಾಗೂ ಪೊಲೀಸ್ ಸಿಬ್ಬಂದಿ ನಡುವೆ ಸ್ನೇಹಪರ ಕ್ರಿಕೆಟ್ ಪಂದ್ಯಾವಳಿಯನ್ನು ಆಯೋಜಿಸಲಾಗುವುದು ಎಂದು ತಿಳಿಸಿದರು.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರಾದ ಈರೇಶ್ ನಾಯಕ ಮಾತನಾಡಿ, ಪತ್ರಕರ್ತರು ಕೆಲಸದ ಜೊತೆಗೆ ಕ್ರೀಡೆ, ಯೋಗ, ವ್ಯಾಯಾಮದಂತಹ ಚಟುವಟಿಕೆಗಳನ್ನು ಜೀವನದ ಭಾಗವಾಗಿಸಿಕೊಳ್ಳಬೇಕು ಎಂದು ಹೇಳಿದರು.



ಈ ಸಂದರ್ಭದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಆರ್. ಗುರುನಾಥ್, ರಾಜ್ಯ ಸಮಿತಿ ಸದಸ್ಯ ಬಸವರಾಜ ನಾಗಡದಿನ್ನಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಿದ್ದಯ್ಯಸ್ವಾಮಿ ಕುಕನೂರು, ರಾಯಚೂರು ರಿಪೋರ್ಟರ್ಸ್ ಗಿಲ್ಡ್ ಅಧ್ಯಕ್ಷ ವಿಜಯ ಜಾಗಟಗಲ್, ಹಿರಿಯ ಪತ್ರಕರ್ತರಾದ ಶಿವಮೂರ್ತಿ ಹಿರೇಮಠ, ಭೀಮರಾಯ ಹದ್ದಿನಾಳ, ದತ್ತು ಸರ್ಕಿಲ್, ಸಂಘದ ಪದಾಧಿಕಾರಿಗಳಾದ ಶಿವಪ್ಪ ಮಡಿವಾಳ, ಅಶೋಕ್ ಬೆನ್ನೂರು, ಮಹಾನಂದ ನಾಯಕ, ವಿಶ್ವನಾಥ್ ಹೂಗಾರ, ಸೂಗುರೇಶ ಗುಡಿ, ಮಲ್ಲಿಕಾರ್ಜುನಯ್ಯ, ಲಕ್ಷ್ಮಣ್ ಕಪಗಲ್, ಸುರೇಶ ರೆಡ್ಡಿ, ಈಶಪ್ಪ ಬೈಲಮಡಿಚಡ್. ರಂಗಸ್ವಾಮಿ ಕೆ. ಸೇರಿದಂತೆ ವಿವಿಧ ತಾಲೂಕು ಘಟಕಗಳ ಪದಾಧಿಕಾರಿಗಳು ಹಾಗೂ ಜಿಲ್ಲೆಯ ಪತ್ರಕರ್ತರು ಭಾಗವಹಿಸಿದ್ದರು.

ಕೆಂಪೇಗೌಡ ಜಯಂತಿ ಆಚರಣೆಗೆ ಅಗತ್ಯ ಸಿದ್ಧತೆಗೆ ಅಪರ ಜಿಲ್ಲಾಧಿಕಾರಿ ಶಿವಾನಂದ ಸೂಚನೆ

ರಾಯಚೂರು ಜೂ.23-

ರಾಯಚೂರು ಜಿಲ್ಲಾಡಳಿತದಿಂದ ಕೆಂಪೇಗೌಡ ಜಯಂತಿ ಕಾರ್ಯಕ್ರಮ ಆಚರಣೆ ಸಂಬಧ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರ ಅಧ್ಯಕ್ಷತೆಯಲ್ಲಿ ಜೂನ್ 23ರ ಮಂಗಳವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಸಮುದಾಯದ ಮುಖಂಡರು, ವಿವಿಧ ಅಧಿಕಾರಿಗಳೊಂದಿಗೆ ಪೂರ್ವಭಾವಿ ಸಭೆ ನಡೆಯಿತು.

ಇದೇ ವೇಳೆ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಮಾತನಾಡಿ, ನಾಡಿನ ಅಭಿವೃದ್ಧಿಗಾಗಿ ಜನಪರ ಯೋಜನೆಗಳನ್ನು ಜಾರಿಗೊಳಿಸಿದ ಕೆಂಪೇಗೌಡ ಅವರ ಪರಿಶ್ರಮದಿಂದ ಬೆಂಗಳೂರು ಇಂದು ವಿಶ್ವಮಟ್ಟದಲ್ಲಿ ಹೆಸರು ಗಳಿಸಿದೆ. ಸರ್ಕಾರದ ನಿರ್ದೇಶನದಂತೆ ಕೆಂಪೇಗೌಡ ಅವರ ಜೀವನ ಸಾಧನೆಗಳನ್ನು ಸ್ಮರಿಸುವ ಸಲುವಾಗಿ ಇದೇ ಜೂನ್ 27 ರಂದು ನಗರದಲ್ಲಿ ಕೆಂಪೇಗೌಡ ಜಯಂತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.



ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಜೂನ್ 27ರಂದು ನಗರದ ಪಂಡಿತ ಜಂಬಲದಿನ್ನಿ ರಂಗಮಂದಿರದಲ್ಲಿ ನಡೆಯುವ ಕಾರ್ಯಕ್ರಮಕ್ಕೆ ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು. ಶಿಷ್ಠಾಚಾರಂತೆ ಆಹ್ವಾನ ಪತ್ರಿಕೆ ಮುದ್ರಿಸಿ ಗಣ್ಯರಿಗೆ ವಿತರಿಸಬೇಕು. ಅಂದು ರಂಗಮಂದಿರದ ಆವರಣದಲ್ಲಿ ಕುಡಿಯುವ ನೀರು ಸೇರಿದಂತೆ ಎಲ್ಲಾ ಅಗತ್ಯ ಏರ್ಪಾಡು ಮಾಡಬೇಕು. ನಗರದ ಮುಖ್ಯ ರಸ್ತೆಗಳು ಮತ್ತು ಆವರಣದಲ್ಲಿ ಶುಚಿತ್ವ ಕಾಯ್ದುಕೊಳ್ಳಬೇಕು ಎಂದು ಸಂಬಧಿಸಿದ ಇಲಾಖೆಯ ಅಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಕಾರ್ಯಕ್ರಮ ಯಶಸಿಗೆ ಸಕಲ ಸಿದ್ದತೆ ಮಾಡಿಕೊಳ್ಳಲು ಇಲಾಖಾವಾರು ಅಧಿಕಾರಿಗಳಿಗೆ ಜವಾಬ್ದಾರಿ ಹಂಚಿಕೆ ಮಾಡಲಾಗುವುದು. ಯಾವುದೇ ಲೋಪವಾಗದಂತೆ ಅಧಿಕಾರಿಗಳು ಕಾರ್ಯನಿರ್ವಹಿಸಬೇಕು. ಶಾಲಾ ಹಾಗೂ ಕಾಲೇಜ್ ವಿದ್ಯಾರ್ಥಿಗಳಿಗೆ ವಿವಿಧ ಸ್ಪರ್ಧೆಗಳನ್ನು ಹಮ್ಮಿಕೊಂಡು ವಿಜೇತರಿಗೆ ಪ್ರಶಸ್ತಿ ಪ್ರಮಾಣ ಪತ್ರವನ್ನು ನೀಡಬೇಕೆಂದು ಸಂಬಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈ ವೇಳೆ ಸಮಾಜ ಮುಖಂಡರು ಮಾತನಾಡಿ, ವೇದಿಕೆ ಕಾರ್ಯಕ್ರಮವನ್ನು

3ನೇಯ ಪುಟಕ್ಕೆ

ದದ್ದಲ್‌ರಿಂದ ವಿವಿಧ ಕಾಮಗಾರಿಗಳಿಗೆ ಚಾಲನೆ



ರಾಯಚೂರು,ಜೂ.23-

ರಾಯಚೂರು ಗ್ರಾಮೀಣ ಕ್ಷೇತ್ರದ ಜನಪ್ರಿಯ ಶಾಸಕರು ಕರ್ನಾಟಕ ಶ್ರೀ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಶ್ರೀ ಬಸನಗೌಡ ದದ್ದಲ್ ಸರ್ ರವರು ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಉದ್ಘಾಟನೆ ನೆರವೇರಿಸಿದರು.

ಬೈಲ್ ಮರ್ಚೆಡ ಗ್ರಾಮದಲ್ಲಿ ಮೈಕ್ರೋ ಯೋಜನೆಯಡಿ ನಿರ್ಮಿಸಲಾದ ಸಮುದಾಯ ಭವನ ಉದ್ಘಾಟನೆ ಇಲಾಖೆ - ಮೈಕ್ರೋ ಯೋಜನೆಯಡಿ ನಿರ್ಮಿಸಲಾದ ಸ. ಹಿ. ಶಾಲೆಯ 2 ಕೊಠಡಿಗಳು ನಿರ್ಮಾಣ ಇಲಾಖೆ - ರಾಜಲಬಂಡ ಗ್ರಾಮದಲ್ಲಿ ಮೈಕ್ರೋ ಯೋಜನೆಯಡಿ ನಿರ್ಮಿಸಲಾದ ಸ. ಹಿ. ಶಾಲೆಯ 3 ಕೊಠಡಿಗಳು ಉದ್ಘಾಟನೆ ಇಲಾಖೆ - ಯೋಜನೆಯಡಿ ರಾಜಲಬಂಡ-ಹರನಹಳ್ಳಿ ರಸ್ತೆ ನಿರ್ಮಾಣ ಕಾಮಗಾರಿ ವಿಕ್ಷಣೆ ಕಂಬಳನೆತ್ತಿ ಗ್ರಾಮದಲ್ಲಿ ಮೈಕ್ರೋ ಯೋಜನೆಯಡಿ ನಿರ್ಮಿಸಲಾದ ಸಮುದಾಯ ಭವನ ಉದ್ಘಾಟನೆ


ಈ ಸಂದರ್ಭದಲ್ಲಿ ಊರಿನ ಹಿರಿಯ ಮುಖಂಡರುಗಳು, ಸುತ್ತಮುತ್ತಲಿನ ಗ್ರಾಮಗಳ ಮುಖಂಡರುಗಳು, ಗ್ರಾಮಸ್ಥರು, ನಾಮನಿರ್ದೇಶನ ಸದಸ್ಯರುಗಳು, ಅಧಿಕಾರಿಗಳು ಉಪಸ್ಥಿತರಿದ್ದರು.

ಕಾರಿನಲ್ಲೇ ತೆರಳುತ್ತಿರುವಾಗಲೇ ವಿಡಿಯೋ ಕಾನ್ಫರೆನ್ಸ್ ಮಾಡಿ ಅಧಿಕಾರಿಗಳಿಗೆ ಸಚಿವ ಕೃಷ್ಣ ಬೈರೇಗೌಡ ತರಾಟೆ

ಬೆಂಗಳೂರು, ಜೂ.23-

ನಗರದ ರಸ್ತೆಗಳು 20-30 ವರ್ಷ ಬಾಳಿಕೆ ಬರಬೇಕು. ಇನ್ನಾದರೂ ಗುಣಮಟ್ಟದಿಂದ ಕೂಡಿದ ಕಾಮಗಾರಿ ನಡೆಸಿ ಎಂದು ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅಧಿಕಾರಿಗಳಿಗೆ ತಾಕೀತು ಮಾಡಿದ್ದಾರೆ.

ಇಂದು ಬೆಳಿಗ್ಗೆ ತಮ್ಮ ನಿವಾಸದಿಂದ ವಿಧಾನಸೌಧದ ಕಡೆಗೆ ಬರುವಾಗ ಮೊಬೈಲ್ ಮೂಲಕವೇ ಜಿಬಿಎ ಮುಖ್ಯ ಆಯುಕ್ತರು, ವಿಶೇಷ ಆಯುಕ್ತರು, ವಲಯ ಆಯುಕ್ತರು, ಮುಖ್ಯ ಎಂಜಿನಿಯರ್, ಕಾರ್ಯಪಾಲಕ ಎಂಜಿನಿಯರ್‌ಗಳು ಸೇರಿದಂತೆ ಇತರೆ ಅಧಿಕಾರಿಗಳೊಂದಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ



ಕಾರಿನಲ್ಲೇ ಸಭೆ ನಡೆಸಿದ ಕೃಷ್ಣ ಬೈರೇಗೌಡರು, ನಾನು ಸಾವಿರ ಬಾರಿ ನಿಮ ಬಳಿ ರಸ್ತೆ ನಿಯಮಗಳ ಬಗ್ಗೆ ಹೇಳಿದ್ದೇನೆ. ಆದರೆ ಅದರ ಬಗ್ಗೆ ನೀವು ಗಮನವೇ ಹರಿಸಿಲ್ಲ ಎಂದು ಛೇಡಿಸಿದರು.

ರಸ್ತೆಗಳನ್ನು ನಿರ್ಮಿಸುವಾಗ ಲೇನ್‌ಗಳನ್ನು ಸರಿಯಾಗಿ ಬರೆಸಬೇಕು. ಇದರಿಂದ ವಾಹನ ಸವಾರರಿಗೂ ಅದು ಅರ್ಥವಾಗುತ್ತದೆ. ನೀವು ಕೇವಲ ಅಕ್ಕಪಕ್ಕದಲ್ಲಿ ಮಾತ್ರ ಬಿಳಿ-ಕಪ್ಪು ಬಣ್ಣ ಬಳಿಯುತ್ತೀರ. ಆದರೆ ಮಧ್ಯಭಾಗದಲ್ಲಿ ಲೇನ್‌ಗಳನ್ನು ಬರೆಯುವುದನ್ನು ಏಕೆ ಮಾಡುತ್ತಿಲ್ಲ ಎಂದು ಪ್ರಶ್ನಿಸಿದರು.

ಚಿಕ್ಕರಸ್ತೆಗಳನ್ನು ಬಿಡಿ. 40 ಅಡಿ ರಸ್ತೆಗಳಲ್ಲಿ ಕಡ್ಡಾಯವಾಗಿ

3ನೇಯ ಪುಟಕ್ಕೆ

ಪ್ರತಿಯೊಬ್ಬರ ಮತದಾನದ ಸಂವಿಧಾನಿಕ ಹಕ್ಕನ್ನು ಕಾಪಾಡಲು ಮನವಿ

ರಾಯಚೂರು,ಜೂ.23-

ಭಾರತ ಚುನಾವಣಾ ಆಯೋಗವು ದೇಶಾದ್ಯಂತ ವಿಶೇಷ ತೀವ್ರ ಪರಿಷ್ಕರಣೆ (ಎಸ್.ಐ.ಆರ್.) ಹೆಸರಿನಲ್ಲಿ ಮತದಾರರ ಪಟ್ಟಿಯನ್ನು ಸಂಪೂರ್ಣವಾಗಿ ಹೊಸದಾಗಿ ರೂಪಿಸಲು ತೀರ್ಮಾನಿಸಿರುವುದು ತಮಗೆ ತಿಳಿದ ಸಂಗತಿಯಾಗಿದೆ. ಇದರ ಸಾದಕ ಬಾಧಕಗಳ ಕುರಿತು

ಪೌರತ್ವವನ್ನು ಸ್ವಯಂ ಮತದಾರರೇ ನಿರೂಪಿಸಿಕೊಂಡು ಮತದಾರರ ಪಟ್ಟಿಗೆ ಸೇರ್ಪಡೆಗೊಳ್ಳುವ ತೀವ್ರ, ಸಂಕಷ್ಟವಾದ ವಿಧಾನವನ್ನು ಚುನಾವಣಾ ಆಯೋಗ ಅನುಸರಿಸುತ್ತಿದೆ. ಮ್ಯಾಚಿಂಗ್ ಮತ್ತು ಮ್ಯಾಪಿಂಗ್ ಪ್ರಕ್ರಿಯೆಯಲ್ಲಿ ದೊಡ್ಡ ಪ್ರಮಾಣದಲ್ಲಿ ಮತದಾರರು ಮ್ಯಾಪಿಂಗ್ ಆಗದೆ ಹೊರಗುಳಿಯುತ್ತಿದ್ದಾರೆ. ರಾಜ್ಯದಲ್ಲಿ ಜೂನ್ 30 ರಿಂದ ಎಸ್.ಐ.ಆರ್. ಪ್ರಕ್ರಿಯೆ ಆರಂಭವಾಗಲಿದ್ದು ವಾಸ್ತವದಲ್ಲಿ ಸಮಸ್ಯೆಗಳು ಅಲ್ಲಿಂದಲೇ ಹೆಚ್ಚಾಗಲಿವೆ.



ಜನತಾ ಪ್ರಾತಿನಿಧ್ಯ ಕಾಯ್ದೆ 1950 ಮತ್ತು ಮತದಾರರ ನೋಂದಣಿ ನಿಯಮಗಳು 1960 ರ ವಿವಿಧ ಪರಿಚ್ಛೇಧಗಳ ಪ್ರಕಾರವಾಗಿ ಚುನಾವಣಾ ಆಯೋಗಕ್ಕೆ 'ಎಸ್.ಐ. ಆರ್. ನಡೆಸಲು ಅವಕಾಶವಿಲ್ಲ ತಾತ್ವಿಕ ನಿಲುವು. ಚುನಾವಣಾ ಆಯೋಗಕ್ಕೆ ಸಾಮಾನ್ಯ ಪರಿಷ್ಕರಣೆ ಮತ್ತು ತೀವ್ರ ಪರಿಷ್ಕರಣೆ ಮಾಡಲು ಅವಕಾಶವಿದೆ. ಆದರೆ ವಿಶೇಷ ತೀವ್ರ ಪರಿಷ್ಕರಣೆ ಎಂಬುದಕ್ಕೆ ಅವಕಾಶವಿಲ್ಲ. ಇದುವರೆಗೂ ನಡೆದಿದೆ ಎನ್ನಲಾಗುವ ವಿಶೇಷ ಪರಿಷ್ಕರಣೆಗಳಿಗೂ ಈಗಿನ ಪರಿಷ್ಕರಣೆಗೂ ಅಪಾರವಾದ ವ್ಯತ್ಯಾಸವಿದೆ. ಪೌರತ್ವಕ್ಕೆ ಆಧಾರ ಎಂದು ಚುನಾವಣಾ ಆಯೋಗ ಕೇಳುತ್ತಿರುವ ದಾಖಲೆಗಳು ಪೌರತ್ವದ ದಾಖಲೆಗಳಾ ಎಂಬುದನ್ನು ಭಾರತ ಸರ್ಕಾರ ಸ್ಪಷ್ಟಪಡಿಸಿಲ್ಲ. ಆದರೂ ಬಹಳ ದೊಡ್ಡ ಸಂಖ್ಯೆಯ ಜನ ಈ ದಾಖಲೆಗಳನ್ನೂ ಒದಗಿಸಲು ಆಗುತ್ತಿಲ್ಲ.

ಮೃತಪಟ್ಟವರು, ಡೂಪ್ಲಿಕೇಟ್ ಮತದಾರರು, ಶಾಶ್ವತವಾಗಿ ಸ್ಥಳಾಂತರಗೊಂಡವರು ಮತದಾರರ ಪಟ್ಟಿಯಿಂದ ಹೊರಹಾಕುವ ಪ್ರಕ್ರಿಯೆ ಪ್ರತಿವರ್ಷ ನಡೆಯುವುದಾಗಿದೆ. ಆದರೆ ಅದರ ನೆಪದಲ್ಲಿ ಕೋಟ್ಯಾಂತರ ಬಡಜನರು, ಕೂಲಿಕಾರರು, ವಲಸೆ ಕಾರ್ಮಿಕರು, ಮಹಿಳೆಯರು, ದಲಿತರು, ಆದಿವಾಸಿಗಳು, ಅಲ್ಪಸಂಖ್ಯಾತರು ಹಾಗೂ ತಳ ಸಮುದಾಯಗಳ ಜನರ ಮತದಾನದ ಹಕ್ಕನ್ನೇ ಕಸಿಯುವ ಅ ಪಾ ಯ ವ ' ನ ' ್ನ ಉಂಟುಮಾಡುತ್ತಿದೆ. ದೇಶದಲ್ಲಿ ಈಗಾಗಲೇ ಎಸ್.ಐ.ಆರ್. ನಡೆಸಲಾಗಿರುವ ರಾಜ್ಯಗಳಲ್ಲಿ ಸುಮಾರು 6.5. ಕೋಟಿ ಜನ ಮತದಾರರು ಪಟ್ಟಿಯಿಂದ ಹೊರಗುಳಿಯುವಂತಾಗಿದೆ.

ಇದುವರೆಗಿನ ಎಸ್.ಐ.ಆರ್.

3ನೇಯ ಪುಟಕ್ಕೆ

ಜೂ.25 ರಂದು ಜಿಲ್ಲೆಯಲ್ಲಿ ಮಾನ್ಯ ಮುಖ್ಯಮಂತ್ರಿಗಳ ಕಾರ್ಯಕ್ರಮ: ಪೂರ್ವಭಾವಿ ಸಭೆ

ಸಮಿತಿಯಲ್ಲಿ ಹಂಚಿಕೆ ಮಾಡಿದ ಪ್ರಕಾರ ಅಧಿಕಾರಿಗಳು ಜವಾಬ್ದಾರಿಯಿಂದ ಕರ್ತವ್ಯ ನಿರ್ವಹಿಸಿ: ಡಾ.ಸುರೇಶ ಬಿ.ಇಟ್ನಾಳ



ಕೊಪ್ಪಳ ಜೂ.23

ಜೂನ್ 25 ರಂದು ಜಿಲ್ಲೆಯಲ್ಲಿ ನಡೆಯುವ ಮಾನ್ಯ ಮುಖ್ಯಮಂತ್ರಿಗಳ ಕಾರ್ಯಕ್ರಮಕ್ಕೆ ಅಚ್ಚುಕಟ್ಟು ವ್ಯವಸ್ಥೆ ಮಾಡಲು ಸಮಿತಿಗಳನ್ನು ರಚಿಸಿ ಕರ್ತವ್ಯ ಹಂಚಿಕೆ ಮಾಡಲಾಗಿದ್ದು, ಅದರನ್ವಯ ಅಧಿಕಾರಿಗಳು ಜವಾಬ್ದಾರಿ ಹಾಗೂ ಎಚ್ಚರಿಕೆಯಿಂದ ಕಾರ್ಯ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಡಾ.ಸುರೇಶ ಬಿ.ಇಟ್ನಾಳ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಜೂನ್ 25 ರಂದು ಕೊಪ್ಪಳ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ತುಂಗಭದ್ರಾ ಜಲಾಶಯಕ್ಕೆ ನೂತನವಾಗಿ ಅಳವಡಿಸಿರುವ 33 ಸ್ವಿಲ್‌ವೇ ಗೇಟುಗಳ ಲೋಕಾರ್ಪಣೆ ಕಾರ್ಯಕ್ರಮಕ್ಕೆ ರಾಜ್ಯದ ಮುಖ್ಯಮಂತ್ರಿಗಳು ಹಾಗೂ ಬೇರೆ ರಾಜ್ಯಗಳ ಮುಖ್ಯಮಂತ್ರಿಗಳು, ಕೇಂದ್ರ ಸರ್ಕಾರದ ಸಚಿವರುಗಳು ಹಾಗೂ ಮೂರು ರಾಜ್ಯಗಳಿಗೆ ಸಂಬಂಧಪಟ್ಟ ಇಲಾಖೆ ಸಚಿವರುಗಳು ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ಅಚ್ಚುಕಟ್ಟು ವ್ಯವಸ್ಥೆ ಹಾಗೂ ಕರ್ತವ್ಯ ನಿರ್ವಹಣೆಗಾಗಿ ಸಂಬಂಧಿಸಿದ ಅಧಿಕಾರಿಗಳೊಂದಿಗೆ ಸೋಮವಾರದಂದು ಮುನಿರಾಬಾದ್‌ನ ಇಂಡಿಯಾ ರಿಸರ್ವ್ ಬಟಾಲಿಯನ್‌ನ ಆಡಿಟೋರಿಯಂ ಸಭಾಂಗಣದಲ್ಲಿ ಆಯೋಜಿಸಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅಂದು ಮಾನ್ಯ ಮುಖ್ಯಮಂತ್ರಿಗಳು ಸೇರಿದಂತೆ ಆಂಧ್ರಪ್ರದೇಶ ಮತ್ತು ತೆಲಂಗಾಣ ರಾಜ್ಯಗಳ ಮುಖ್ಯಮಂತ್ರಿಗಳು, ಸಚಿವರು ಜಿಲ್ಲೆಗೆ ಆಗಮಿಸಲಿದ್ದು, ತುಂಗಭದ್ರಾ ಜಲಾಶಯದ ನೂತನ ಸ್ವಿಲ್‌ವೇ ಗೇಟುಗಳನ್ನು ಲೋಕಾರ್ಪಣೆಗೊಳಿಸಿ, ನಂತರ ಐಆರ್‌ಬಿಯ ಆಡಿಟೋರಿಯಂ ಸಭಾಂಗಣದಲ್ಲಿ ಪ್ರಮುಖ ಸಮಾನಾಂತರ ಜಲಾಶಯಗಳು ಹಾಗೂ ಪ್ರಮುಖ ನೀರಾವರಿ ಯೋಜನೆಗಳ ಬಗ್ಗೆ ಚರ್ಚೆ ನಡೆಸುವರು. ನಂತರ ಮುನಿರಾಬಾದ್‌ನ ಸರ್ಕಾರಿ ಶಾಲಾ ಆವರಣದಲ್ಲಿ ವೇದಿಕೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಆದ್ದರಿಂದ ಈ ಉದ್ದೇಶಕ್ಕಾಗಿ ನಿರ್ಮಿಸಲಾದ ಹೆಲಿಪ್ಯಾಡ್, ವೇದಿಕೆ ಕಾರ್ಯಕ್ರಮ ಸೇರಿದಂತೆ ಪ್ರತಿಯೊಂದು ವಿಷಯಗಳ ಬಗ್ಗೆ ಅಧಿಕಾರಿಗಳು ಹೆಚ್ಚಿನ ಎಚ್ಚರಿಕೆ ವಹಿಸಿ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಹೆಲಿಪ್ಯಾಡ್, ವೇದಿಕೆ ಕಾರ್ಯಕ್ರಮದ ಸ್ಥಳ, ಐಆರ್‌ಬಿ ಗಳಲ್ಲಿ ಆರೋಗ್ಯ ಇಲಾಖೆಯಿಂದ ಅಂಬ್ಯುಲೆನ್ಸ್‌ಗಳನ್ನು ಒದಗಿಸಬೇಕು. ಅಗ್ನಿಶಾಮಕ ದಳದಿಂದ ಸುಸಜ್ಜಿತ ವಾಹನ ಹಾಗೂ ಸೂಕ್ತ ರಕ್ಷಣಾ ಕ್ರಮಗಳನ್ನು ಕೈಗೊಳ್ಳಬೇಕು. ಕಾರ್ಯಕ್ರಮದ ಅಂಗವಾಗಿ ಪಾಲ್ಗೊಳ್ಳುವ ಮುಖ್ಯಮಂತ್ರಿಗಳು, ಸಚಿವರು, ಪೈಲಟ್‌ಗಳು ಹಾಗೂ ಸಾರ್ವಜನಿಕರು ಸೇವಿಸುವ ಪ್ರತಿಯೊಂದು ಆಹಾರವನ್ನು ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯಿಂದ ಕಡ್ಡಾಯವಾಗಿ ಪರೀಕ್ಷೆಗೊಳಪಡಿಸಬೇಕು. ಪೊಲೀಸ್ ಇಲಾಖೆಯಿಂದ ಸೂಕ್ತ ಭದ್ರತಾ ವ್ಯವಸ್ಥೆ ಕಲ್ಪಿಸಬೇಕು. ನೀರಾವರಿ ಇಲಾಖೆಯಿಂದ ಕರ್ತವ್ಯ ಹಂಚಿಕೆ ಮಾಡಿ ನಿರ್ದಿಷ್ಟ ಸ್ಥಳಗಳಲ್ಲಿ ಸೂಕ್ತ ಮಾಹಿತಿಯೊಂದಿಗೆ ಅಧಿಕಾರಿಗಳನ್ನು ನಿಯೋಜಿಸಬೇಕು. ಲೋಕೋಪಯೋಗಿ ಇಲಾಖೆಯಿಂದ ಹೆಲಿಪ್ಯಾಡ್ ನಿರ್ಮಾಣ, ಇಲಾಖಾ ವ್ಯಾಪ್ತಿಯ ರಸ್ತೆಗಳ ದುರಸ್ಥಿಯನ್ನು ಕೈಗೊಳ್ಳಬೇಕು. ಅಬಕಾರಿ ಇಲಾಖೆಯು ಹೆಲಿಕ್ಯಾಪ್ಟರ್ ಪೈಲಟ್‌ಗಳ ಜವಾಬ್ದಾರಿ ನಿರ್ವಹಿಸಬೇಕು ಎಂದು ಹಂಚಿಕೆ ಮಾಡಲಾದ ಕರ್ತವ್ಯಗಳ ಬಗ್ಗೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕನಕಗಿರಿ ವಿಧಾನ ಸಭಾ ಕ್ಷೇತ್ರದ ಶಾಸಕರಾದ ಶಿವರಾಜ ತಂಗಡಗಿ ಅವರು ಮಾತನಾಡಿ, ವೇದಿಕೆ ಕಾರ್ಯಕ್ರಮದಲ್ಲಿ ಶಿಷ್ಟಾಚಾರ ಪಾಲನೆ ಕಡ್ಡಾಯ. ಈ ಬಗ್ಗೆ ನಿರ್ದಿಷ್ಟ ಅಧಿಕಾರಿಗಳಿಗೆ ಜವಾಬ್ದಾರಿ ಹಂಚಿಕೆ ಮಾಡಲಾಗುತ್ತದೆ. ವೇದಿಕೆ ಮೇಲೆ ಯಾರಿಗೂ ಅಗೌರವ ಉಂಟಾಗದತೆ ಹಾಗೂ ಗೊಂದಲಕ್ಕೆ ಆಸ್ಪದವಿಲ್ಲದಂತೆ ಶಿಷ್ಟಾಚಾರದಂತೆ ಆಸನಗಳ ವ್ಯವಸ್ಥೆ ಕಲ್ಪಿಸಬೇಕು. ಸಮಾನಾಂತರ ಜಲಾಶಯ ಹಾಗೂ ಪ್ರಮುಖ ನೀರಾವರಿ ಯೋಜನೆಗಳ ಬಗ್ಗೆ ವಿವರವಾದ ಮಾಹಿತಿಯೊಂದಿಗೆ ಅಧಿಕಾರಿಗಳು ಚರ್ಚೆಯಲ್ಲಿ ಭಾಗವಹಿಸಬೇಕು. ತುಂಗಭದ್ರಾ ನದಿಯು ಮೂರು ರಾಜ್ಯಗಳ ಜೀವನಾಡಿಯಾಗಿದ್ದು, ನೂತನವಾಗಿ ಅಳವಡಿಸಿದ ಸ್ವಿಲ್‌ಗೇಟುಗಳು ತಾಂತ್ರಿಕವಾಗಿ ಹೆಮ್ಮೆಯ ಪ್ರತೀಕವಾಗಿವೆ. ಕಡಿಮೆ ಅವಧಿಯಲ್ಲಿ ಗುಣಮಟ್ಟದ ಹಾಗೂ ಆಧುನಿಕ ಗೇಟುಗಳನ್ನು ಅಳವಡಿಸಿದ ತಂತ್ರಜ್ಞರು, ಕಾರ್ಮಿಕರಿಗೆ ಅಂದು ಸನ್ಮಾನಿಸಲಾಗುವುದು. ಆದ್ದರಿಂದ ಜವಾಬ್ದಾರಿ ಹಂಚಿಕೆಯಾದ ಅಧಿಕಾರಿಗಳು ನಿಮ್ಮ ಕರ್ತವ್ಯವನ್ನು ಸರಿಯಾಗಿ ನಿರ್ವಹಿಸಿ ಎಂದು ಅಧಿಕಾರಿಗಳಿಗೆ ತಿಳಿಸಿದರು.

ಕೊಪ್ಪಳ ವಿಧಾನಸಭಾ ಕ್ಷೇತ್ರದ ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ ಅವರು ಮಾತನಾಡಿ, ಮೂರು ರಾಜ್ಯಗಳ ಮುಖ್ಯಮಂತ್ರಿಗಳು, ಉಪಮುಖ್ಯಮಂತ್ರಿಗಳು, ಸಚಿವರು, ಕೇಂದ್ರ ಜಲಶಕ್ತಿ ಸಚಿವರು ಭಾಗವಹಿಸಲಿದ್ದು, ಅವರ ಭದ್ರತೆ ಹಾಗೂ ಶಿಷ್ಟಾಚಾರ ಪಾಲನೆಯಲ್ಲಿ ಯಾವುದೇ ವ್ಯತ್ಯಯವಾಗದಂತೆ ಕರ್ತವ್ಯ ನಿರ್ವಹಿಸಿ ಎಂದು ಹೇಳಿದರು.

ಕೊಪ್ಪಳ ಲೋಕಸಭಾ ಕ್ಷೇತ್ರದ ಸಂಸದರಾದ ಕೆ.ರಾಜಶೇಖರ ಹಿಟ್ನಾಳ ಅವರು ಮಾತನಾಡಿ, ತುಂಗಭದ್ರಾ ನದಿ ಮೂರು ರಾಜ್ಯಗಳಿಗೆ ಸಂಬಧಿಸಿದ್ದಾದರೂ, ಅದರ ಜಲಾಶಯವಿರುವುದು ನಮ್ಮ ರಾಜ್ಯ ಹಾಗೂ ನಮ್ಮ ದೇ ಜಿಲ್ಲೆಯಲ್ಲಿ. ಹಾಗಾಗಿ ನಮ್ಮ ಜಿಲ್ಲೆ ಅಂದು ಆಕರ್ಷಣೆಯ ಕೇಂದ್ರ ಬಿಂದುವಾಗಲಿದ್ದು, ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಿ ಎಂದು ಅಧಿಕಾರಿಗಳಿಗೆ ತಿಳಿಸಿದರು.

ಸಭೆಯಲ್ಲಿ ಮಾಜಿ ಸಚಿವರಾದ ಅಮರೇಗೌಡ ಪಾಟೀಲ ಬಯ್ಯಾಪೂರ, ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ರಾಮ್ ಎಲ್.ಅರಸಿದ್ದಿ, ಕರ್ನಾಟಕ ನೀರಾವರಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ರಾಜೇಶ ಅಮ್ಮಿನಬಾವಿ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಉಪವಿಭಾಗಾಧಿಕಾರಿ ಕ್ಯಾ.ಮಹೇಶ ಮಾಲಗಿತ್ತಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಹೇಮಂತ್‌ಕುಮಾರ, ತುಂಗಭದ್ರಾ ಯೋಜನಾ ವೃತ್ತ ಮುನಿರಾಬಾದ್‌ನ ಅಧೀಕ್ಷಕ ಅಭಿಯಂತರರು ಎಸ್.ಬಿ ಮಲ್ಲಿಗೆವಾಡ, ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ಪೊಲೀಸ್ ಅಧಿಕಾರಿಗಳು ಉಪಸ್ಥಿತರಿದ್ದರು.



ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ಜಾಗೃತಿ ಜಾಥಾಗೆ ಚಾಲನೆ

ಕಲಬುರಗಿ,

ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್.ಐ.ಆರ್.)-2026 ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಜಿಲ್ಲಾಡಳಿತ ಹಾಗೂ ಜಿಲ್ಲಾ ಸ್ವೀಪ್ () ಸಮಿತಿ ವತಿಯಿಂದ ಸೋಮವಾರ ನಗರದಲ್ಲಿ ಬೃಹತ್ ಜಾಗೃತಿ ಜಾಥಾ ಹಮ್ಮಿಕೊಳ್ಳಲಾಯಿತು.

ನಗರದ ಜಗತ್ ವೃತ್ತದಲ್ಲಿ ಚುನಾವಣಾ ಆಯೋಗ, ಕರ್ನಾಟಕ ರಾಜ್ಯ ಮುಖ್ಯ ಚುನಾವಣಾಧಿಕಾರಿಗಳ ಕಚೇರಿ, ಜಿಲ್ಲಾಡಳಿತ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಕಲಬುರಗಿ ಇವರ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ಜಾಥಾಕ್ಕೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷ ರಾಹುಲ್ ಸಂಕನೂರ ಚಾಲನೆ ನೀಡಿದರು.

ಬಳಿಕ ಮಾತನಾಡಿದ ಅವರು, ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಜೂನ್ 30ರಿಂದ ಜುಲೈ 29ರವರೆಗೆ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯಕ್ರಮ ನಡೆಯಲಿದ್ದು,

ಪ್ರತಿಯೊಬ್ಬ ಅರ್ಹ ನಾಗರಿಕರ ಹೆಸರನ್ನು ಮತದಾರರ ಪಟ್ಟಿಯಲ್ಲಿ ಸೇರಿಸುವುದು ಹಾಗೂ ದೋಷರಹಿತ ಮತದಾರರ ಪಟ್ಟಿ ಸಿದ್ಧಪಡಿಸುವುದು ಇದರ ಮುಖ್ಯ ಉದ್ದೇಶವಾಗಿದೆ ಎಂದು ತಿಳಿಸಿದರು.

ಪರಿಷ್ಕರಣೆ ಅವಧಿಯಲ್ಲಿ ಮತಗಟ್ಟೆ ಮಟ್ಟದ ಅಧಿಕಾರಿಗಳು (ಬಿಎಲ್‌ಒಗಳು) ಮನೆ ಮನೆಗೆ ಭೇಟಿ ನೀಡಿ ಗಣತಿದಾರರ ನಮೂನೆ ( ) ಹಾಗೂ ಘೋಷಣಾ ಪತ್ರ ( ) ವಿತರಿಸಲಿದ್ದಾರೆ. ಸಾರ್ವಜನಿಕರು ಈ ಪ್ರಕ್ರಿಯೆಯಲ್ಲಿ ಸಕ್ರಿಯವಾಗಿ ಭಾಗವಹಿಸಿ ತಮ್ಮ ಹೆಸರುಗಳನ್ನು ಪರಿಶೀಲಿಸಿ, ಅಗತ್ಯವಿದ್ದಲ್ಲಿ ತಿದ್ದುಪಡಿ ಮಾಡಿಸಿಕೊಳ್ಳಬೇಕು ಎಂದು ಮನವಿ ಮಾಡಿದರು.

ಮತದಾರರ ಪಟ್ಟಿಯ ಪರಿಷ್ಕರಣೆ ಕುರಿತು ಸಾಮಾಜಿಕ ಜಾಲತಾಣಗಳಲ್ಲಿ ಹರಡುತ್ತಿರುವ ತಪ್ಪು ಮಾಹಿತಿಗಳಿಗೆ ಸಾರ್ವಜನಿಕರು ಕಿವಿಗೊಡಬಾರದು. ಪ್ರತಿಯೊಬ್ಬ ಅರ್ಹ ನಾಗರಿಕರು ಮತದಾರರ ಪಟ್ಟಿಯಲ್ಲಿ ಹೆಸರು ಹೊಂದಿರುವುದು ಪ್ರಜಾಪ್ರಭುತ್ವವನ್ನು ಬಲಪಡಿಸುವ ಮಹತ್ವದ ಅಂಶವಾಗಿದೆ ಎಂದು ಹೇಳಿದರು.

ಜಗತ್ ವೃತ್ತದಿಂದ ಆರಂಭವಾದ ಜಾಗೃತಿ ಜಾಥಾ ಅನ್ನಪೂರ್ಣ ಕ್ರಾಸ್, ಲಾಹೋಟಿ ಪೆಟ್ರೋಲ್ ಬಂಕ್ ಮಾರ್ಗವಾಗಿ ಜಿಲ್ಲಾಧಿಕಾರಿ ಕಚೇರಿವರೆಗೆ ಸಾಗಿತು. ಜಾಥಾದಲ್ಲಿ ವಿದ್ಯಾರ್ಥಿಗಳು ಮತದಾರರ ನೋಂದಣಿ ಮತ್ತು ಮತದಾರರ ಪಟ್ಟಿಯ ಪರಿಷ್ಕರಣೆ ಕುರಿತು ಜಾಗೃತಿ ಫಲಕಗಳನ್ನು ಹಿಡಿದು ಘೋಷಣೆಗಳನ್ನು ಕೂಗುವ ಮೂಲಕ ಸಾರ್ವಜನಿಕರಲ್ಲಿ ಅರಿವು ಮೂಡಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಸ್ವೀಪ್ ನೋಡಲ್ ಅಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕ ಜಗದೇವಪ್ಪ, ಕಾಲೇಜು ಶಿಕ್ಷಣ ಇಲಾಖೆಯ ಪ್ರಾದೇಶಿಕ ಜಂಟಿ ನಿರ್ದೇಶಕ ಸೂರ್ಯಕಾಂತ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಸುರೇಶ್ ಅಕ್ಕಣ್ಣ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಚೆನ್ನಪ್ಪ, ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಮಾನಪ್ಪ ಕಟ್ಟಿಮನಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ಜಾಗೃತಿ ಅಭಿಯಾನದಲ್ಲಿ ಸ್ವಸಹಾಯ ಸಂಘಗಳ ಮಹಿಳೆಯರು, ರಾಷ್ಟ್ರೀಯ ಸೇವಾ ಯೋಜನೆ (ಎನ್‌ಎಸ್‌ಎಸ್) ಸ್ವಯಂಸೇವಕರು, ಮತಗಟ್ಟೆ ಮಟ್ಟದ ಅಧಿಕಾರಿಗಳು (ಬಿಎಲ್‌ಒಗಳು), ವಿವಿಧ ಕಾಲೇಜುಗಳ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.



ಗ್ರಾಮೀಣ ವಿದ್ಯುತ್ ಸಮಸ್ಯೆ ಪರಿಹಾರಕ್ಕೆ ಕ್ರಮ ಕೈಗೊಳ್ಳುವಂತೆ ಜೆಸ್ಕಾಂ ಎಂಡಿಗೆ ಶಾಸಕ ಡಾ. ಅವಿನಾಶ್ ಜಾಧವ್ ಮನವಿ

ಕಲಬುರಗಿ:,

ಗ್ರಾಮೀಣ ಪ್ರದೇಶಗಳಲ್ಲಿ ರೈತರು ಎದುರಿಸುತ್ತಿರುವ ವಿದ್ಯುತ್ ಸಮಸ್ಯೆಗಳನ್ನು ತ್ವರಿತವಾಗಿ ಬಗೆಹರಿಸುವಂತೆ ಒತ್ತಾಯಿಸಿ ಚಿಂಚೋಳಿ ವಿಧಾನಸಭಾ ಕ್ಷೇತ್ರದ ಶಾಸಕ ಡಾ. ಅವಿನಾಶ್ ಜಾಧವ್ ಅವರ ನೇತೃತ್ವದಲ್ಲಿ ಜೆಸ್ಕಾಂ ವ್ಯವಸ್ಥಾಪಕ ನಿರ್ದೇಶಕರಿಗೆ (ಎಂಡಿ) ಸೋಮವಾರ ಮನವಿ ಸಲ್ಲಿಸಲಾಯಿತು.

ಗ್ರಾಮೀಣ ಭಾಗಗಳಲ್ಲಿ ಇತ್ತೀಚಿನ ದಿನಗಳಲ್ಲಿ ಸಮರ್ಪಕ ವಿದ್ಯುತ್ ಸರಬರಾಜು ಆಗದ ಕಾರಣ ರೈತರು ತೀವ್ರ ಸಂಕಷ್ಟ ಅನುಭವಿಸುತ್ತಿದ್ದಾರೆ. ಪಂಪ್‌ಸೆಟ್‌ಗಳಿಗೆ ಅಗತ್ಯ ಪ್ರಮಾಣದ ಹಾಗೂ ಗುಣಮಟ್ಟದ ವಿದ್ಯುತ್ ಪೂರೈಕೆ ಇಲ್ಲದಿರುವುದರಿಂದ ಬೆಳೆಗಳಿಗೆ ನೀರುಣಿಸಲು ತೊಂದರೆಯಾಗುತ್ತಿದ್ದು, ಕೃಷಿ ಚಟುವಟಿಕೆಗಳ ಮೇಲೆ ದುಷ್ಪರಿಣಾಮ ಉಂಟಾಗಿದೆ. ಅಲ್ಲದೆ, ಗ್ರಾಮೀಣ ಜನರ ದೈನಂದಿನ ಬದುಕಿನ ಮೇಲೂ ವಿದ್ಯುತ್ ಸಮಸ್ಯೆ ಪರಿಣಾಮ ಬೀರುತ್ತಿದೆ ಎಂದು ಶಾಸಕರು ಜೆಸ್ಕಾಂ ಅಧಿಕಾರಿಗಳ ಗಮನಕ್ಕೆ ತಂದರು.

ರೈತರ ಹಿತದೃಷ್ಟಿಯಿಂದ ಕೆಲವು ಪ್ರಮುಖ ಬೇಡಿಕೆಗಳನ್ನು ಮುಂದಿರಿಸಲಾಯಿತು. ರೈತರ ಪಂಪ್‌ಸೆಟ್‌ಗಳಿಗೆ ನಿಗದಿತ ವೇಳಾಪಟ್ಟಿಯಂತೆ

ನಿರಂತರ ತ್ರೀ- ಫೇಸ್ ವಿದ್ಯುತ್ ಪೂರೈಕೆ ಮಾಡ ಬೇಕು ಹಾಗೂ ಸುಟ್ಟು ಹೋಗಿರುವ ಟ್ರಾನ್ಸ್ ಫಾರ್ಮರ್‌ಗಳನ್ನು ವಿಳಂಬವಿಲ್ಲದೆ 24 ಗಂಟೆಗಳೊಳಗೆ ಬದಲಾಯಿಸಿ ವಿದ್ಯುತ್ ಸಂಪರ್ಕ ಪುನಃಸ್ಥಾಪಿಸಬೇಕು ಎಂದು ಒತ್ತಾಯಿಸಲಾಯಿತು.

ಮನವಿ ಸ್ವೀಕರಿಸಿದ ಜೆಸ್ಕಾಂ ವ್ಯವಸ್ಥಾಪಕ ನಿರ್ದೇಶಕರು, ಗ್ರಾಮೀಣ ಭಾಗದ ವಿದ್ಯುತ್ ಸಮಸ್ಯೆಗಳನ್ನು ಆದ್ಯತೆಯ ಮೇರೆಗೆ ಪರಿಶೀಲಿಸಿ, ಶೀಘ್ರದಲ್ಲೇ ಸೂಕ್ತ ಕ್ರಮ ಕೈಗೊಂಡು ರೈತರ ಸಮಸ್ಯೆಗಳಿಗೆ ಪರಿಹಾರ ಒದಗಿಸಲಾಗುವುದು ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ವಿಜಯಕುಮಾರ್ ಚೇಂಗಟಿ, ರಾಮರೆಡ್ಡಿ ಪಾಟೀಲ್, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ರೇವಣಸಿದ್ದಪ್ಪ ಬಡಾ, ಚಂದ್ರಕಾಂತ ಚೌಕ, ಸಂಜೀವ್ ಕುಮಾರ್ ಪಡಶೆಟ್ಟಿ, ದೇವಿದಾಸ ಜಾಧವ್, ರವಿಕಾಂತ್ ಬುಳ್ಳ, ಸಿದ್ದಪ್ಪ ಜವಳಗಿ, ಶರಣಬಸಪ್ಪ ಗಡ್ಡಿ ಸೇರಿದಂತೆ ಹಲವು ಮುಖಂಡರು ಹಾಗೂ ರೈತರು ಉಪಸ್ಥಿತರಿದ್ದರು.

ಗಿಣಿಗೇರಾ ಗ್ರಾಮದ ಅಮೃತ ಸರೋವರ ದಡದಲ್ಲಿ ಅಂತರಾಷ್ಟ್ರೀಯ ಯೋಗ ದಿನಾಚರಣೆ



ಕೊಪ್ಪಳ ಜೂ.23

ಅಂತರಾಷ್ಟ್ರೀಯ ಯೋಗ ದಿನ ಪ್ರಯುಕ್ತ ಗಿಣಿಗೇರಾ ಗ್ರಾಮ ಪಂಚಾಯತಿ ಹಾಗೂ ಕೆರೆ ಅಭಿವೃದ್ಧಿ ಸಮಿತಿ ವತಿಯಿಂದ ಗಿಣಿಗೇರಾ ಗ್ರಾಮದ ಅಮೃತ ಸರೋವರ ದಡದಲ್ಲಿ ಭಾನುವಾರ (ಜೂ. 21ರಂದು) ಯೋಗಭ್ಯಾಸ ಮತ್ತು ಪ್ರಾಣಾಯಮ ಅಭ್ಯಾಸಗಳನ್ನು ಆಯೋಜಿಸಲಾಗಿತ್ತು.

ಕಾರ್ಯಕ್ರಮದ ಕುರಿತು ಗಿಣಿಗೇರಿ ಪಂಚಾಯತ ಅಭಿವೃದ್ಧಿ ಅಧಿಕಾರಿ ಮಂಜುಳಾದೇವಿ ಹೂಗಾರ ಅವರು ಮಾತನಾಡಿ, ಪ್ರಸ್ತುತ ದಿನದಲ್ಲಿ ಆಹಾರ ಪದ್ದತಿ ಬಹು ಮುಖ್ಯವಾದದು. ಆಹಾರ ಪದ್ದತಿಯನ್ನು ನಾವು ಬದಲಾವಣೆ ಮಾಡಿಕೊಳ್ಳುವದು ಸೂಕ್ತ. ಬದಲಾವಣೆ ಮಾಡಿಕೊಳ್ಳದೇ ಇದ್ದಲ್ಲಿ ಮುಂದಿನ ದಿನಗಳಲ್ಲಿ ಆರೋಗ್ಯದ ಮೇಲೆ ಪರಿಣಾಮ ಬೀರುವದು ಖಂಡಿತವೆದರು.

ಆಧುನಿಕ ಜಗತ್ತಿನಲ್ಲಿರುವ ನಾವುಗಳು ಪ್ರತಿನಿತ್ಯ ಬದುಕಿನಲ್ಲಿ ಒತ್ತಡ ಜೀವನ ಸಾಗಿಸುತ್ತಿದ್ದೆವೆ. ಪ್ರತಿ ದಿನ ನಾವುಗಳು ಆರೋಗ್ಯದಿಂದ ಇರಬೇಕಾದ ದಿನದ 24 ಗಂಟೆಗಳಲ್ಲಿ 01 ಗಂಟೆಯಾದರು ಯೋಗ ಮತ್ತು ಪ್ರಾಣಾಯಮವನ್ನು ರೂಢಿಸಿಕೊಳ್ಳಬೇಕು. ಹಿಂದಿನ ಕಾಲದಲ್ಲಿ ಋಷಿಮುನಿಗಳು ಯೋಗ ಮತ್ತು ಪ್ರಾಣಾಯಮದಿಂದ ಆರೋಗ್ಯವನ್ನು ಗೆಲ್ಲುವದಕ್ಕೆ ಸಾಧ್ಯ ಎಂಬುದನ್ನು ಮನಗಂಡು ಸಾಧನೆಗೈದು ಇತರರಿಗೆ ಮಾದರಿಯಾಗಿದ್ದಾರೆ. ಗ್ರಾಮದ ಕೆರೆಗಳು ಜೀವಂತ ಆಗರಗಳು ಎನ್ನುವ ಪದಕ್ಕೆ ಗ್ರಾಮೀಣಾಭಿವೃದ್ಧಿ ಆಯುಕ್ತಾಲಯವು ಅಮೃತ ಸರೋವರ ದಡದಲ್ಲಿ ಯೋಗ ಮತ್ತು ಪ್ರಾಣಾಯಮ ಶಿಬಿರಗಳನ್ನು ಆಯೋಜಿಸಲು ನಿರ್ದೇಶನ ನೀಡಿರುವದು ಕೆರೆಯ ಮಹತ್ವಕ್ಕೆ ಆದ್ಯತೆ ನೀಡಿದೆ ಎಂದರು.

ಯೋಗ ಮತ್ತು ಪ್ರಾಣಾಯಮಕ್ಕೆ ಯಾವುದೇ ರೀತಿಯ ವಯಸ್ಸಿನ ಇತಿಮಿತಿ ಇರುವದಿಲ್ಲ. ಆದರೆ ಕ್ರಮಬದ್ದವಾಗಿ ಯೋಗಭ್ಯಾಸ ರೂಢಿಸಿಕೊಳ್ಳಬೇಕೆಂದರು. ಯೋಗ ಅಭ್ಯಾಸ ಮತ್ತು ಪ್ರಾಣಾಯವು ಭಂಗಿಗಳನ್ನು ಮಾರುತಿ ಚಿತ್ರಗಾರ ಮಾಹಿತಿ ನೀಡಿದರು.

ಬಳ್ಳಾರಿಯಲ್ಲಿ ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಆಕಸ್ಮಿಕ ದಾಳಿ: 5 ಮಕ್ಕಳ ರಕ್ಷಣೆ, ಮಾಲೀಕರ ವಿರುದ್ಧ ಪ್ರಕರಣ ದಾಖಲು



ಬಳ್ಳಾರಿ,ಜೂ.23

ನಗರದ ವಿವಿಧ ರಸ್ತೆಗಳು ಹಾಗೂ ಅಂಗಡಿ ಮುಂಗಟ್ಟುಗಳ ಮೇಲೆ ಸೋಮವಾರ ಟಾಸ್ಕ್ ಫೋರ್ಸ್ ಸಮಿತಿಯ ಅಧಿಕಾರಿಗಳು ಜಂಟಿಯಾಗಿ ಆಕಸ್ಮಿಕ ದಾಳಿ ನಡೆಸಿ, ಒಟ್ಟು ಐದು ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕರನ್ನು ರಕ್ಷಿಸಲಾಗಿದೆ.


ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾ ಬಾಲಕಾರ್ಮಿಕ ಯೋಜನೆ, ಕಂದಾಯ ಇಲಾಖೆ, ಕಾರ್ಮಿಕ ಇಲಾಖೆ, ಶಿಕ್ಷಣ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಪೊಲೀಸ್ ಇಲಾಖೆ ಹಾಗೂ ಚೈಲ್ಡ್ ಲೈನ್ ಸಂಘಟನೆಯ ಜಂಟಿ ಸಹಯೋಗದೊಂದಿಗೆ ಈ ಕಾರ್ಯಾಚರಣೆ ಕೈಗೊಳ್ಳಲಾಗಿತ್ತು. ಬಳ್ಳಾರಿ ನಗರದ ಪ್ರಮುಖ ವಲಯಗಳಾದ ಸಂಗಮ್ ಸರ್ಕಲ್, ರಾಧಿಕಾ ಟಾಕೀಸ್ ರಸ್ತೆ, ವಡ್ಡರ ಬಂಡೆ ಏರಿಯಾ, ಕಣೇಕಲ್ ಬಸ್ ನಿಲ್ದಾಣ ಹಾಗೂ ಆಂದ್ರಾಳ್ ಭಾಗಗಳಲ್ಲಿರುವ ಪಂಚರ್ ಶಾಪ್, ಟಿಂಕರಿಂಗ್ ಶಾಪ್, ಗ್ಯಾರೇಜ್, ವುಡ್ ವರ್ಕ್ಸ್ ಮತ್ತು ಮೆಕ್ಯಾನಿಕ್ ಶಾಪ್‌ಗಳ ಮೇಲೆ ಅಧಿಕಾರಿಗಳ ತಂಡ ದಾಳಿ ನಡೆಸಿತು.

ತಾಲೂಕು ಮಟ್ಟದ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ 1986 ರ ಅಡಿಯಲ್ಲಿ ನೇಮಕವಾಗಿರುವ ನಿರೀಕ್ಷಕರ ಟಾಸ್ಕ್ ಫೋರ್ಸ್ ಸಮಿತಿಯ ನೇತೃತ್ವದಲ್ಲಿ ಈ ಕ್ರಮ ಜರುಗಿಸಲಾಗಿದೆ.

ದಾಳಿಯ ವೇಳೆ ಕೆಲಸದಲ್ಲಿ ತೊಡಗಿದ್ದ ಐದು ಮಕ್ಕಳನ್ನು ರಕ್ಷಿಸಿ, ಮಕ್ಕಳ ಕಲ್ಯಾಣ ಸಮಿತಿಯ ಮುಂದೆ ಹಾಜರುಪಡಿಸಲಾಗಿದೆ. ಮಕ್ಕಳ ವಯಸ್ಸಿನ ಅಧಿಕೃತ ದಾಖಲಾತಿಗಳನ್ನು ಪರಿಶೀಲಿಸಿದ ನಂತರ, ಬಾಲಕಾರ್ಮಿಕರನ್ನು ಕೆಲಸಕ್ಕೆ ಇಟ್ಟುಕೊಂಡಿದ್ದ ಮಾಲೀಕರ ವಿರುದ್ಧ ಆಯಾ ವ್ಯಾಪ್ತಿಯ ಪೊಲೀಸ್ ಠಾಣೆಗಳಲ್ಲಿ ಕಾಯ್ದೆಯನ್ವಯ ಪ್ರಕರಣ ದಾಖಲಿಸಲು ಕ್ರಮ ಕೈಗೊಳ್ಳಲಾಗಿದೆ. ಇದೇ ಸಂದರ್ಭದಲ್ಲಿ ಅಂಗಡಿ ಮತ್ತು ಉದ್ದಿಮೆಗಳ ಮಾಲೀಕರಿಗೆ ಬಾಲಕಾರ್ಮಿಕರನ್ನು ನೇಮಿಸಿಕೊಳ್ಳದಂತೆ ಎಚ್ಚರಿಕೆ ನೀಡಿ, ಜಾಗೃತಿ ಪೋಸ್ಟರ್‌ಗಳನ್ನು ಹಂಚಲಾಯಿತು.

ಈ ಕಾರ್ಯಾಚರಣೆಯಲ್ಲಿ ಉಪತಹಶೀಲ್ದಾರ್ ಮಂಜುನಾಥ್, ಕಾರ್ಮಿಕ ನಿರೀಕ್ಷಕ (2ನೇ ವೃತ್ತ) ರಮೇಶ್, ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕ ಎ.ಮೌನೇಶ್, ಎಸ್.ಜೆ.ಪಿ.ಯು ನ ಲಲಿತಮ್ಮ, ಮಕ್ಕಳ ರಕ್ಷಣಾಧಿಕಾರಿಗಳಾದ ವಲಿಬಾಷಾ ಮತ್ತು ಹೊನ್ನೂರಪ್ಪ, ಕಂದಾಯ ಇಲಾಖೆಯ ಆಡಳಿತಾಧಿಕಾರಿ ಮಧುಸೂದನ್, ಆರೋಗ್ಯ ಇಲಾಖೆಯ ಮುಸ್ತಾಖ್ ಅಹಮ್ಮದ್, ಚೈಲ್ಡ್ ಲೈನ್ ಸಿಬ್ಬಂದಿ ಸುಶೀಲ ಹಾಗೂ ರೀಚ್ ಸಂಸ್ಥೆಯ ಹನುಮಂತಪ್ಪ ಹಾಜರಿದ್ದರು.

ಎನ್‌ಐ ಆ್ಯಕ್ಟ್ ವಿಶೇಷ ಲೋಕ ಅದಾಲತ್ ಸದ್ಬಳಕೆಗೆ ನ್ಯಾಯಾಧೀಶೆ ಕರೆ



ಆಳಂದ,

ಎನ್‌ಐ ಆ್ಯಕ್ಟ್ ಅಡಿ ಬಾಕಿ ಉಳಿದ ಚೆಕ್ ಬೌನ್ಸ್ ಪ್ರಕರಣಗಳ ತ್ವರಿತ ಇತ್ಯರ್ಥಕ್ಕಾಗಿ ವಿಶೇಷ ಲೋಕ ಅದಾಲತ್‌ನ್ನು ಸಮರ್ಥವಾಗಿ ಬಳಸಿಕೊಳ್ಳಬೇಕೆಂದು ಆಳಂದ ಪ್ರಧಾನ ಸಿವಿಲ್ ನ್ಯಾಯಾಲಯದ ನ್ಯಾಯಾಧೀಶೆ ಸುಮನ ಚಿತ್ತರಗಿ ಅವರು ವಕೀಲರಿಗೆ ಸಲಹೆ ನೀಡಿದರು. ಭಾರತ ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ ಆಳಂದ ಪ್ರಧಾನ ಸಿವಿಲ್ ನ್ಯಾಯಾಲಯದಲ್ಲಿ ಸೋಮವಾರ ಆಯೋಜಿಸಲಾಗಿದ್ದ ಎನ್‌ಐ ಆ್ಯಕ್ಟ್ ವಿಶೇಷ ಲೋಕ ಅದಾಲತ್ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಬರುವ ಜುಲೈ 18 ಹಾಗೂ ನವೆಂಬರ್ 21ರಂದು ನಡೆಯಲಿರುವ ವಿಶೇಷ ಲೋಕ ಅದಾಲತ್‌ನಲ್ಲಿ ಚೆಕ್ ಬೌನ್ಸ್ ಬಾಕಿ ಪ್ರಕರಣಗಳ ಇತ್ಯರ್ಥಕ್ಕಾಗಿ ಸಮಸ್ತ ವಕೀಲರು ತಮ್ಮ ಕಕ್ಷಿದಾರರನ್ನು ಮನವೊಲಿಸಿ ಸಂಧಾನದ ಮೂಲಕ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ಮುಂದಾಗಬೇಕು ಎಂದು ಅವರು ಸ್ಪಷ್ಟವಾಗಿ ತಿಳಿಸಿದರು.

ಲೋಕ ಅದಾಲತ್‌ನಲ್ಲಿ ಪ್ರಕರಣ ಇತ್ಯರ್ಥಗೊಳಿಸಿಕೊಳ್ಳುವುದರಿಂದ ಕಕ್ಷಿದಾರರಿಗೆ ಸಮಯ, ಹಣ ಹಾಗೂ ಮಾನಸಿಕ ಶ್ರಮ ಉಳಿತಾಯವಾಗಲಿದ್ದು, ಪರಸ್ಪರ ಒಪ್ಪಿಗೆಯ ಆಧಾರದ ಮೇಲೆ ದ್ರುತ ನ್ಯಾಯ ದೊರಕಿಸಿಕೊಡುವ ಈ ವ್ಯವಸ್ಥೆಯನ್ನು ವಕೀಲರು ಮಾರ್ಗದರ್ಶಿಗಳಾಗಿ ಸದ್ಬಳಕೆ ಮಾಡಿಕೊಳ್ಳಬೇಕೆಂದು ನ್ಯಾಯಾಧೀಶೆ ಒತ್ತಿ ಹೇಳಿದರು.

ಸಭೆಯಲ್ಲಿ ನ್ಯಾಯವಾದಿ ಸಂಘದ ಕಾರ್ಯದರ್ಶಿ ಬಿ.ಟಿ. ಸಿಂದೆ, ಸರ್ಕಾರಿ ವಕೀಲ ಜೋತಿಬಂದಿ, ಹಿರಿಯ ನ್ಯಾಯವಾದಿ ಡಬ್ಲ್ಯೂ ಅನ್ಸಾರಿ, ಎಸ್.ಡಿ. ಬೋಸಗೆ, ದೇವಾನಂದ ಹೋದಲೂರ, ಮಹಾದೇವ ಹತ್ತಿ, ಯು.ಕೆ. ಇನಾಮದಾರ, ಬಿ.ಎ. ಪವಾರ, ರಮೇಶ ತೋಳೆ, ಸುನಿತಾ ಗಡಬಳಿ, ಗೀತಾ ಹತ್ತರಕಿ, ಬಿ.ಜಿ. ಬೀಳಗಿ ಸೇರಿದಂತೆ ಹಲವು ವಕೀಲರು ಹಾಜರಿದ್ದರು.

ಕಣ್ಮನ ಸೆಳೆದ ಶ್ರೀಕೃಷ್ಣ ಸಂಧಾನ ನಾಟಕ, ಸಮೂಹ ನೃತ್ಯ



ಬಳ್ಳಾರಿ,ಜೂ.23-

ಕನ್ನಡ ನಾಡಿನ ಶ್ರೀಮಂತ ಕಲೆ ಮತ್ತು ಸಂಸ್ಕೃತಿಯನ್ನು ಉಳಿಸಿ, ಬೆಳೆಸುವ ನಿಟ್ಟಿನಲ್ಲಿ ಪ್ರೇಕ್ಷಕರು ಹೆಚ್ಚಿರುವ ಸ್ಥಳಗಳಿಗೇ ನೇರವಾಗಿ ತೆರಳಿ ಪ್ರದರ್ಶನ ನೀಡುವ ಕಲಾ ನಡಿಗೆ - ನಿಮ್ಮ ಬಳಿಗೆ' ಯೋಜನೆಗೆ ಚಾಲನೆ ನೀಡಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಅವರು ಹೇಳಿದರು.

ತಾಲೂಕಿನ ಬ್ಯಾಲಚಿಂತ ಗ್ರಾಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಜಿಲ್ಲಾ ಕಲಾವಿದರ ಸಂಘದ ಸಂಯುಕ್ತಾಶ್ರಯದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಕಲಾ ನಡಿಗೆ - ನಿಮ್ಮ ಬಳಿಗೆ ಸಾಂಸ್ಕೃತಿಕ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಇತ್ತೀಚಿನ ದಿನಗಳಲ್ಲಿ ಸಾಂಸ್ಕೃತಿಕ ವೇದಿಕೆಗಳಲ್ಲಿ ಪ್ರೇಕ್ಷಕರ ಭಾಗ ವಹಿಸುವಿಕೆ ಕಡಿಮೆಯಾಗುತ್ತಿದೆ. ಈ ಹಿನ್ನೆಲೆಯಲ್ಲಿ ಕಲಾವಿದರೇ ಜನರೆಡೆಗೆ ನಡೆದು ಬಂದು ಕಲಾ ನೈಪುಣ್ಯ ತೆಯನ್ನು ಪ್ರದರ್ಶಿಸುವ ವಿಭಿನ್ನ ಆಶಯವನ್ನು ಈ ಪ್ರಸಕ್ತ ಸಾಲಿನ ಯೋಜನೆ ಹೊಂದಿದೆ ಎಂದು ತಿಳಿಸಿದರು.

ಸಾಂಸ್ಕೃತಿಕ ವೈಭವ: ಕಾರ್ಯಕ್ರಮದ ಅಂಗವಾಗಿ ಬಳ್ಳಾರಿಯ ಕುಮಾರಿ ಸಮೀರಾ ಎಸ್.ಕೆ. ಮತ್ತು ಸಂಗಡಿಗರು ಪ್ರಸ್ತುತಪಡಿಸಿದ ಸಮೂಹ ನೃತ್ಯ ಪ್ರದರ್ಶನ ನೆರೆದಿದ್ದವರ ಗಮನ ಸೆಳೆಯಿತು. ತದನಂತರ ಸಿರುಗುಪ್ಪ ತಾಲ್ಲೂಕಿನ ಸಿರಿಗೇರಿ ಗ್ರಾಮದ ಧಾತ್ರಿ ರಂಗಸಂಸ್ಥೆ ವತಿಯಿಂದ ಪ್ರದರ್ಶನಗೊಂಡ ಶ್ರೀಕೃಷ್ಣ ಸಂಧಾನ ಹಾಸ್ಯ ಪೌರಾಣಿಕ ನಾಟಕವು ಪ್ರೇಕ್ಷಕರನ್ನು ಮಂತ್ರಮುಗ್ಧರನ್ನಾಗಿಸಿತು. ಕಲಾವಿದರ ಅದ್ಭುತ ಅಭಿನಯ, ಚುರುಕಿನ ಸಂಭಾಷಣೆ ಹಾಗೂ ಆಕರ್ಷಕ ರಂಗವಿನ್ಯಾಸಕ್ಕೆ ಜನರಿಂದ ಭರಪೂರ ಚಪ್ಪಾಳೆ ವ್ಯಕ್ತವಾಯಿತು. ಕಾರ್ಯಕ್ರಮದಲ್ಲಿ ಜಿಲ್ಲಾ ಕಲಾವಿದರ ಸಂಘದ ಅಧ್ಯಕ್ಷ ಯಲ್ಲನಗೌಡ ಶಂಕರಬಂಡೆ, ಗ್ರಾಮದ ಹಿರಿಯ ಮುಖಂಡ ಶಿವಶಂಕರಗೌಡ, ಹಿರಿಯ ನೃತ್ಯ ಕಲಾವಿದ ಎಸ್.ಕೆ.ಆರ್. ಜಿಲಾನಿ ಭಾಷ, ಬಯಲಾಟ ಕಲಾವಿದ ಮುದ್ದಟನೂರು ತಿಪ್ಪೇಸ್ವಾಮಿ ಹಾಗೂ ತೊಗಲುಗೊಂಬೆ ಕಲಾವಿದ ಸುಬ್ಬಣ್ಣ ಸೇರಿ ವಿದ್ಯಾರ್ಥಿಗಳು ಇತರರಿದ್ದರು.

ಒಂದನೇಯ ಪುಟದಿಂದ

ಶೀಘ್ರದಲ್ಲೇ ಕಾಂಗ್ರೆಸ್ ಜಿಲ್ಲಾಧ್ಯಕ್ಷರ ನೇಮಕಾತಿ -ಹರಿಪ್ರಸಾದ್

ಕೋರ್ಟ್‌ನ ಹಾಲಿ ನ್ಯಾಯಮೂರ್ತಿಯವರ ನೇತೃತ್ವದಲ್ಲಿ ಸಮಗ್ರ ತನಿಖೆ ನಡೆಯಬೇಕು. ಅಯೋಧ್ಯೆ ಚಳವಳಿಯಿಂದ ಸಾವಿರಾರು ಜನರು ಪ್ರಾಣ ಕಳೆದುಕೊಂಡಿದ್ದಾರೆ. ಈಗ ದೇವಸ್ಥಾನದ ಹಣವನ್ನೇ ಲೂಟಿ ಮಾಡಲಾಗುತ್ತಿದೆ. ಈ ವಿಚಾರದಲ್ಲಿ ಪ್ರಧಾನಿ ನರೇಂದ್ರ ಮೋದಿ ಹಾಗೂ ಕೇಂದ್ರ ಗೃಹ ಸಚಿವ ಅಮಿತ್ ಶಾ ನೈತಿಕ ಹೊಣೆ ಹೊರಬೇಕು ಎಂದು ಬಿ ಕೆ ಹರಿಪ್ರಸಾದ್ ಒತ್ತಾಯಿಸಿದರು.

ಕೆಂಪೇಗೌಡ ಜಯಂತಿ ಆಚರಣೆಗೆ ಅಗತ್ಯ ಸಿದ್ಧತೆಗೆ ಅಪರ ಜಿಲ್ಲಾಧಿಕಾರಿ ಶಿವಾನಂದ ಸೂಚನೆ

ಅರ್ಥಪೂರ್ಣವಾಗಿ ಆಚರಿಸಬೇಕು. ಜನಪ್ರತಿನಿಧಿಗಳು, ಜಿಲ್ಲಾ ಮಟ್ಟದ ಅಧಿಕಾರಿ, ಸಿಬ್ಬಂದಿ ಕಾರ್ಯಕ್ರಮದಲ್ಲಿ ತಪ್ಪದೇ ಪಾಲ್ಗೊಳ್ಳಬೇಕು. ಕಾರ್ಯಕ್ರಮದಲ್ಲಿ ನಾಡಪ್ರಭು ಕೆಂಪೇಗೌಡ ಅವರ ಬಗ್ಗೆ ಉಪನ್ಯಾಸ ಏರ್ಪಡಿಸಬೇಕು ಎಂದು ಸಲಹೆ ಮಾಡಿದರು.

ಕಾರ್ಯಕ್ರಮದಲ್ಲಿ ಕೆಂಪೇಗೌಡರ ವಿಚಾರಧಾರೆಗಳ ಕುರಿತು ಸಂಪನ್ಮೂಲ ವ್ಯಕ್ತಿಗಳಿಂದ ಉಪನ್ಯಾಸ, ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಸಾಧಕರಿಗೆ ಸನ್ಮಾನ ಹಾಗೂ ಎಸ್ಸೆಸ್ಸೆಲ್ಸಿ , ಪಿಯುಸಿಯಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಬೇಕು ಎಂದು ಇದೆ ವೇಳೆ ಸಮಾಜದ ಬಂಧುಗಳು ಮನವಿ ಮಾಡಿದರು.

ಇದೇ ಸಂದರ್ಭದಲ್ಲಿ ಮುಖಂಡರಾದ ಡಾ.ಬಿ.ವಿಜಯರಾಜೇಂದ್ರ, ನಾಗರಾಜ ವಕೀಲರು, ದೇವೇಂದ್ರಮ್ಮ ಟಿ.ಸಿ., ಕೆ.ಪಾರ್ವತಿ ಖಾಜಾನಗೌಡ, ಡಾ.ಶಾಂತಾ ಕುಲಕರ್ಣಿ, ರವೀಂದ್ರ ಪೊಲೀಸ್ ಪಾಟೀಲ್, ಮಹೇಶ ಬಿ. ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು ಇದ್ದರು.

ಕಾರಿನಲ್ಲೇ ತೆರಳುತ್ತಿರುವಾಗಲೇ ವಿಡಿಯೋ ಕಾನ್ಫರೆನ್ಸ್ ಮಾಡಿ ಅಧಿಕಾರಿಗಳಿಗೆ ಸಚಿವ ಕೃಷ್ಣ ಭೈರೇಗೌಡ ತರಾಟೆ

ಲೇನ್‌ಗಳನ್ನು ಬರೆಸಬೇಕು. ಇನ್ನು ರಸ್ತೆಗಳು ಕೆಲವೆಡೆ ಗುಂಡಿ ಬಿದ್ದಿದ್ದು, ಇದನ್ನು ತುರ್ತಾಗಿ ಮುಚ್ಚುವತ್ತ ಗಮನ ಹರಿಸಬೇಕು ಎಂದು ತಾಕೀತು ಮಾಡಿದರು.


4 ಮೀಟರ್‌ಗಿಂತ ಕಡಿಮೆ ಅಗಲವಿದ್ದರೂ ಸೆಂಟರ್ ಮಾರ್ಕಿಂಗ್ ಮಾಡಬೇಕು. ಶೀಘ್ರದಲ್ಲಿಯೇ ಗುಂಡಿಗಳನ್ನು ಮುಚ್ಚಿ ವರದಿ ನೀಡಿ ಎಂದು ಸಚಿವರು ಆದೇಶಿಸಿದ್ದಾರೆ.ಈಗಾಗಲೇ ಮಳೆಗಾಲ ಪ್ರಾರಂಭವಾಗಿರುವ ಹಿನ್ನೆಲೆಯಲ್ಲಿ ಹಲವೆಡೆ ರಸ್ತೆಗಳಲ್ಲಿ ನೀರು ನಿಂತು ಸಮಸ್ಯೆಯಾಗುತ್ತಿದೆ. ಕೆಲವೆಡೆ ಮೋರಿಗಳಲ್ಲಿ ಹೂಳು ತುಂಬಿ ಅಥವಾ ಕೆಲ ಕಟ್ಟಡಗಳನ್ನು ನಿರ್ಮಿಸುವುದರಿಂದ ಉಂಟಾಗುವ ತ್ಯಾಜ್ಯದಿಂದ ಈ ಪರಿಸ್ಥಿತಿ ನಿರ್ಮಾಣವಾಗುತ್ತಿದೆ. ಆಯಾ ವಾರ್ಡ್‌ನ ಎಇಗಳು ಕೂಡಲೇ ಇದರ ಬಗ್ಗೆ ಗಮನ ಹರಿಸಬೇಕು ಎಂದು ಹೇಳಿದರು.

ಈಗಾಗಲೇ ವಿಶೇಷ ಆಯುಕ್ತರು ಇದರ ಬಗ್ಗೆ ಸಾಕಷ್ಟು ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡಿದ್ದಾರೆ. ಅದಕ್ಕೆ ಸಹಮತವಿದೆ. ಆದರೆ ಕೂಡಲೇ ವಾರ್ಡ್ ಮಟ್ಟದಲ್ಲೇ ಪರಿಹಾರ ಕಂಡುಕೊಳ್ಳಬೇಕು ಎಂದು ತಿಳಿಸಿದರು.

ಪ್ರತಿಯೊಬ್ಬರ ಮತದಾನದ ಸಂವಿಧಾನಿಕ ಹಕ್ಕನ್ನು ಕಾಪಾಡಲು ಮನವಿ

ಜಾರಿಯಲ್ಲಿ, ಪಶ್ಚಿಮ ಬಂಗಾಳವನ್ನು ಹೊರತುಪಡಿಸಿದರೆ, ಬೇರಾವ ರಾಜ್ಯದಲ್ಲೂ ಜಾರಿ ಮಾಡದಿದ್ದ, 'ತಾರ್ಕಿಕ ವ್ಯತ್ಯಾಸ ( ) ಮಾನದಂಡವನ್ನು ಕರ್ನಾಟಕ ರಾಜ್ಯದಲ್ಲಿ ಚುನಾವಣಾ ಆಯೋಗ ಅಳವಡಿಸಿದೆ. ಇದರಿಂದ ರಾಜ್ಯದ ಮತದಾರ ಕ್ಷೇತ್ರಗಳನ್ನು ಗುರಿ ಮಾಡಿದಂತೆ ನಿರ್ದಿಷ್ಟ ಸಂಖ್ಯೆಯ ಮತದಾರರನ್ನು ಪಟ್ಟಿಯಿಂದ

ತುಂಗಭದ್ರಾ ಕ್ರಸ್ಟ್ ಗೇಟ್ ಉದ್ಘಾಟನೆ ಕಾರ್ಯಕ್ರಮಕ್ಕೆ ಚಂದ್ರಬಾಬು ನಾಯ್ಡುಗೆ ಆಹ್ವಾನ



ಸಿಂಧನೂರು,ಜೂ.23-

ರಾಯಚೂರು ಕೊಪ್ಪಳ.ಬಳ್ಳಾರಿ. ಮೂರು ಜಿಲ್ಲೆಗಳ ರೈತರ ಜೀವ ನಾಡಿಯಾದ ತುಂಗಭದ್ರ ಆಣೆಕಟ್ಟಿನ ನೂತನ ಗೇಟ್ ಗಳನ್ನು. ದಿನಾಂಕ. 25-062026. ರಂದು ಮೂರು ರಾಜ್ಯಗಳ ಮುಖ್ಯಮಂತ್ರಿಗಳ ಸಮ್ಮುಖದಲ್ಲಿ ಉದ್ಘಾಟನೆ ಮಾಡಲಿರುವುದರಿಂದ. ಈ ದಿನ ಆಂಧ್ರಪ್ರದೇಶದ ಮುಖ್ಯಮಂತ್ರಿ ಶ್ರೀ ಚಂದ್ರಬಾಬು ನಾಯ್ಡು ಅವರನ್ನು. ಕರ್ನಾಟಕ ಸರಕಾರದ ಮುಖ್ಯ ಮಂತ್ರಿಗಳ ಪರವಾಗಿ. ಮಾಜಿ ಸಚಿವರು ಕರ್ನಾಟಕ ವಿಧಾನ ಪರಿಷ ತ್ತಿನ ಸದಸ್ಯರಾದ. ಶ್ರೀ ಎನ್ ಎಸ್ ಬೋಸರಾಜು. ಯಲಬುರ್ಗಾ ವಿಧಾನಸಭಾ ಕ್ಷೇತ್ರದ ಶಾಸಕರಾದ. ಶ್ರೀ ಬಸವರಾಜ್ ರೆಡ್ಡಿ. ವಿಧಾನ ಪರಿಷತ್ತಿನ ಸದಸ್ಯರಾದ. ಶ್ರೀ ಬಸನಗೌಡ ಬಾದರ್ಲಿ. ಅವರ ನೇತೃತ್ವದಲ್ಲಿ. ಆಂಧ್ರಪ್ರದೇಶದ ಮುಖ್ಯಮಂತ್ರಿ ಶ್ರೀ ಚಂದ್ರಬಾಬು ನಾಯ್ಡು ಅವರಿಗೆ ಆಹ್ವಾನ ಪತ್ರಿಕೆಯನ್ನು ನೀಡಲಾಯಿತು. ಈ ಸಂದರ್ಭದಲ್ಲಿ ತುಂಗಭದ್ರಾ ಅಣೆಕಟ್ಟಿನ ಸುರಕ್ಷತೆಯನ್ನು. ಮತ್ತಷ್ಟು ಬಲಪಡಿಸುವ ಉದ್ದೇಶದಿಂದ. ಅಳವಡಿಸಲಾಗಿರುವ ನೂತನ ಕ್ರಸ್ಟ್ ಗೇಟ್ ಗಳ ಉದ್ಘಾಟನಾ ಸಮಾ ರಂಭದ ಮಹತ್ವವನ್ನು ನಿಯೋಗವು ವಿವರಿಸಿತು. ಆಮಂತ್ರಣ ಸ್ವೀಕರಿ ಸಿದ. ಮುಖ್ಯ ಮಂತ್ರಿ ಚಂದ್ರಬಾಬು ನಾಯ್ಡು ಅವರು ಜೂನ್ 25ರಂದು ಮುನಿರಾ ಬಾದ್ ನಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ ಭಾಗ ವಹಿ ಸುವುದಾಗಿ ಸಕಾರಾತ್ಮಕವಾಗಿ ಸ್ಪಂದಿಸಿ ನಿಯೋಗಕ್ಕೆ ಒಪ್ಪಿಗೆ ನೀಡಿದರು. ತುಂಗಭದ್ರಾ ಯೋಜನೆಯ ಪ್ರಮುಖ ಫಲಾನುಭವಿಗಳಲ್ಲಿ ಆಂಧ್ರಪ್ರದೇಶವು ಒಂದಾಗಿರುವ ಹಿನ್ನೆಲೆಯಲ್ಲಿ. ಚಂದ್ರಬಾಬು ನಾಯ್ಡು ಅವರ ಉಪಸ್ಥಿತಿಯು ಸಮಾರಂಭಕ್ಕೆ ವಿಶೇಷ ಮೆರುಗು ನೀಡಲಿದೆ ಎಂದು ನಿಯೋಗದ ಸದ ಸ್ಯರು ತಿಳಿಸಿದರು.

ಈ ವೇಳೆ ಆಂಧ್ರಪ್ರದೇಶ ಸರ್ಕಾರದ ಸಚಿವರಾದ. ರಾಮ್ ಮೋಹನ್ ನಾಯ್ಡು. ಹಾಗೂ ಪಿ. ಕೇಶವ. ಸೇರಿದಂತೆ ಇತರ ಗಣ್ಯರು ಉಪಸ್ಥಿತರಿದ್ದರು. ಜೂನ್ 25ರಂದು ನಡೆಯಲಿರುವ ಈ ಕಾರ್ಯಕ್ರಮದಲ್ಲಿ. ಕೇಂದ್ರ ಹಾಗೂ ವಿವಿಧ ರಾಜ್ಯಗಳ ಗಣ್ಯರು ಭಾಗವಹಿಸುವ ನಿರೀಕ್ಷೆ ಇದ್ದು. ತುಂಗಭದ್ರಾ ಜಲಾಶಯದ ನೂತನ ಗೇಟ್ ಗಳ ಉದ್ಘಾಟನೆ ಐತಿಹಾಸಿಕ ಕ್ಷಣವಾಗಲಿದೆ ಎಂದು ಮೂಲಗಳು ತಿಳಿಸಿವೆ.

ಮಾದಕ ವಸ್ತುಗಳ ಬಳಕೆ ಮತ್ತು ಅಕ್ರಮ ಸಾಗಾಣಿಕ ವಿರುದ್ಧ ಅಂತರಾಷ್ಟ್ರೀಯ ದಿನಾಚರಣೆ ಅಂಗವಾಗಿ ವಿದ್ಯಾರ್ಥಿಗಳಿಗೆ ಜಾಗೃತಿ.:ಪಿಎಸ್ಐ. ಕೃಷ್ಣ ಸುಬೇಧಾರ್

ಸುರಪುರ ,ಜೂ.23-

ಯಾದಗಿರಿ ಜಿಲ್ಲಾ ಪೊಲೀಸ್ ವತಿಯಿಂದ ಸುರಪುರ ಪೊಲೀಸ್ ಠಾಣೆಯ ಕೃಷ್ಣ ಸುಬೇದಾರ್ ಪಿಎಸ್ಐ ರವರು ವೀರಪ್ಪ ನಿಷ್ಠಿ ತಾಂತ್ರಿಕ ಮಹಾವಿದ್ಯಾಲಯ ವಿದ್ಯಾರ್ಥಿಗಳಿಗೆ

. ಮಾದಕ ವಸ್ತುಗಳ ದುರುಪಯೋಗ ಇಂದಿನ ಯುವ ಜನಾಂಗದಲ್ಲಿ ಹೆಚ್ಚುತ್ತಿದ್ದು ವೈದ್ಯಕೀಯ ಕಾರಣವಿಲ್ಲದೆ ಮಾದಕ ವಸ್ತುಗಳನ್ನು ಬಳಸುವುದು ಕಾನೂನಿನ ಪ್ರಕಾರ ಅಪರಾಧವಾಗುತ್ತದೆ

ಅನೇಕ ಯುವಕರು ಗಾಂಜಾ, ಅಫೀಮು, ಹೆರಾಯಿನ್, ಕೊಕೇನ್, ಸಿಂಥೆಟಿಕ್ ಡ್ರಗ್ಸ್ ಸೇವಿಸುವುದು ಮೈಗೂಡಿಸಿಕೊಳ್ಳುತ್ತಿದ್ದಾರೆ

ಇದರ ಪರಿಣಾಮವಾಗಿ ಆರೋಗ್ಯ ಹಾನಿ, ಮಾನಸಿಕ ಸಮಸ್ಯೆ, ಕುಟುಂಬ/ಸಾಮಾಜಿಕ ಸಮಸ್ಯೆ, ಅಪರಾಧ ಹೆಚ್ಚಳ ವಾಗುತ್ತಿದೆ

ಅನೇಕ ಮಹಾನಗರಗಳಲ್ಲಿ ಅಕ್ರಮ : ಕಾನೂನುಬಾಹಿರವಾಗಿ ಮಾದಕ ವಸ್ತುಗಳನ್ನು ಒಂದು ಸ್ಥಳದಿಂದ ಇನ್ನೊಂದು ಸ್ಥಳಕ್ಕೆ ಸಾಗಿಸುವುದು ಕಂಡುಬರುತ್ತಿದ್ದು

ಅನೇಕ ಕಡೆ ಅಕ್ರಮ ಸಾಗಾಟದಲ್ಲಿ ಸಿಲುಕಿಕೊಂಡು ಜೈಲಿಗೆ ಹೋಗುತ್ತಿದ್ದಾರೆ : 1985 ಕಠಿಣ ಶಿಕ್ಷೆ ಇದೆ. ಸಣ್ಣ ಪ್ರಮಾಣಕ್ಕೂ 10 ವರ್ಷ ಜೈಲು, ದೊಡ್ಡ ಪ್ರಮಾಣಕ್ಕೆ ಮರಣದಂಡನೆ ವರೆಗೂ ಇದೆ

ತಡೆಗಟ್ಟುವ ಕ್ರಮಗಳು ಡ್ರಗ್ ಸೇವಿಸದಂತೆ ಜಾಗೃತಿ ಕಾರ್ಯಕ್ರಮ, ಹಮ್ಮಿಕೊಂಡು ಯುವಕರಲ್ಲಿ ಜಾಗೃತಿ ಮೂಡಿಸಬೇಕು ಈಗಾಗಲೇ ಶಾಲಾ ಕಾಲೇಜುಗಳಲ್ಲಿ ನಮ್ಮ ಪೊಲೀಸ್ ಇಲಾಖೆಯಿಂದ ಜಾಗೃತಿ ಕಾರ್ಯಕ್ರಮ ಹಮ್ಮಿಕೊಂಡಿದ್ದು ಈ ಸಂದರ್ಭದಲ್ಲಿ ಪ್ರಾಂಶುಪಾಲರಾದ ಶರಣಬಸಪ್ಪ ಶಾಲಿ ಪೊಲೀಸ್ ಪೇದೆ ದಯಾನಂದ್ ಜಮಾದಾರ್ ಅನೇಕ ವಿದ್ಯಾರ್ಥಿನಿಯರು ಭಾಗವಹಿ ಸಿದ್ದರು.

ಬಳ್ಳಾರಿ ಜಿಲ್ಲಾ ನ್ಯಾಯಾಲಯದ ಆವರಣದಲ್ಲಿ ಅಂತರರಾಷ್ಟ್ರೀಯ ಯೋಗ ದಿನಾಚರಣೆ

ಯೋಗ ಜೀವನದ ಭಾಗವಾಗಲಿ: ನ್ಯಾ. ಸಿದ್ದಲಿಂಗ ಪ್ರಭು



ಬಳ್ಳಾರಿ,ಜೂ.23-

ಜಿಲ್ಲಾ ನ್ಯಾಯಾಲಯ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ವಕೀಲರ ಸಂಘ ಇವರ ಸಂಯುಕ್ತ ಆಶ್ರಯದಲ್ಲಿ ಭಾನುವಾರ ಜಿಲ್ಲಾ ನ್ಯಾಯಾಲಯದ ಆವರಣದಲ್ಲಿ 'ಅಂತರರಾಷ್ಟ್ರೀಯ ಯೋಗ ದಿನ' ಆಚರಿಸಲಾಯಿತು.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಸಿದ್ದಲಿಂಗ ಪ್ರಭು ಅವರು ಸಸಿಗೆ ನೀರೆರೆಯುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿದರು.

ಬಳಿಕ ಮಾತನಾಡಿದ ಅವರು, ನ್ಯಾಯಾಂಗ ಕ್ಷೇತ್ರದಲ್ಲಿ ಕೆಲಸ ಮಾಡುವ ಅಧಿಕಾರಿಗಳು, ವಕೀಲರು ಮತ್ತು ಸಿಬ್ಬಂದಿ ನಿರಂತರ ಮಾನಸಿಕ ಒತ್ತಡದಲ್ಲಿ ಕೆಲಸ ಮಾಡಬೇಕಾಗುತ್ತದೆ. ದಿನನಿತ್ಯ ಯೋಗಾಭ್ಯಾಸ ಮಾಡುವುದರಿಂದ ಮಾನಸಿಕ ಶಾಂತಿ, ದೈಹಿಕ ಆರೋಗ್ಯ ಮತ್ತು ಕೆಲಸದಲ್ಲಿ ಏಕಾಗ್ರತೆ ಹೆಚ್ಚುತ್ತದೆ. ಪ್ರತಿಯೊಬ್ಬರೂ ಯೋಗವನ್ನು ತಮ್ಮ ಜೀವನದ ಭಾಗವಾಗಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಪತಂಜಲಿ ಯೋಗ ಶಿಕ್ಷಣ ಸಮಿತಿ ಬಳ್ಳಾರಿ ಶಾಖೆಯ ಸದಸ್ಯರೂ ಹಾಗೂ ಬಳ್ಳಾರಿ ವಕೀಲರ ಸಂಘದ ಅಧ್ಯಕ್ಷರೂ ಆದ ರಾಮಬ್ರಹ್ಮಂ ಅವರು ಮಾತನಾಡಿ, ನ್ಯಾಯಾಲಯದ ವತಿಯಿಂದ ಇಂತಹ ಉತ್ತಮ ಆರೋಗ್ಯ ಪೂರಕ ಕಾರ್ಯಕ್ರಮ ಹಮ್ಮಿಕೊಂಡಿದ್ದಕ್ಕೆ ಧನ್ಯವಾದ ಸಮರ್ಪಿಸಿದರು. ದಿನನಿತ್ಯ ಯೋಗಾಭ್ಯಾಸ ಮಾಡುವುದರಿಂದ ದೈಹಿಕ ಹಾಗೂ ಮಾನಸಿಕ ಆರೋಗ್ಯ ಸುಧಾರಿಸುವುದರ ಜೊತೆಗೆ ಮಾನಸಿಕ ನೆಮ್ಮದಿ ಕಂಡುಕೊಳ್ಳಲು ಸಹಾಯವಾಗುತ್ತದೆ ಎಂದು ಅವರು ಈ ಸಂದರ್ಭದಲ್ಲಿ ತಿಳಿಸಿದರು.

ನೆರೆದಿದ್ದವರಿಗೆ ವಿವಿಧ ಯೋಗಾಸನಗಳು ಮತ್ತು ಪ್ರಾಣಾಯಾಮದ ಮಹತ್ವವನ್ನು ತಿಳಿಸಿಕೊಟ್ಟು, ಪ್ರಾಯೋಗಿಕವಾಗಿ ಯೋಗಾಭ್ಯಾಸ ಮಾಡಿಸಿದರು.

ಭಾಗವಹಿಸಿದವರೆಲ್ಲರೂ ದೇಹಕ್ಕೆ ಪೂರಕವಾದ ವಿವಿಧ ಆಸನಗಳು, ಮನಸ್ಸನ್ನು ಪ್ರಶಾಂತಗೊಳಿಸುವ ಅನುಲೋಮ-ವಿಲೋಮ, ಕಪಾಲಭಾತಿ ಪ್ರಾಣಾಯಾಮ ಮತ್ತು ಧ್ಯಾನವನ್ನು ಮಾಡಿದರು.

ಕಾರ್ಯಕ್ರಮದಲ್ಲಿ ಬಳ್ಳಾರಿ ನಗರದ 1 ನೇ ಅಪರ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾದ ಹೆಚ್.ಎ.ಮೋಹನ್, 2ನೇ ಅಪರ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾದ ಪ್ರಮೋದ.ಬಿ.ಜಿ., ಜಿಲ್ಲಾ ಕುಟುಂಬ ನ್ಯಾಯಾಲಯದ ಪ್ರಧಾನ ನ್ಯಾಯಾಧೀಶರಾದ ವೆಂಕಟೇಶ್, ಪ್ರಿನ್ಸಿಪಲ್ ಹಿರಿಯ ಸಿವಿಲ್ ನ್ಯಾಯಾಧೀಶರಾದ ಇಬ್ರಾಹಿಂ ಮುಜಾವರ್, ಒಂದನೇ ಅಪರ ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶೆ ನಸ್ರತ್ ಮುಖಾರ್ ಅಹ್ಮದ್ ಖಾನ್, ಎರಡನೇ ಅಪರ ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶರಾದ ಪ್ರಿಯಾಂಕ ಟಿ.ಕೆ., ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ, ಪ್ರಿನ್ಸಿಪಲ್ ಸಿವಿಲ್ ಹಾಗೂ ಜೆಎಂಎಫ್‌ಸಿ ನ್ಯಾಯಾಧೀಶರಾದ ನಾಗೇಶ್ ನಾಯ್ಕ, 1 ನೇ ಅಪರ ಸಿವಿಲ್ ನ್ಯಾಯಾಧೀಶರಾದ ಸಿದ್ದಲಿಂಗಯ್ಯ ಗಂಗಾಧರಮಠ, 2 ನೇ ಅಪರ ಸಿವಿಲ್ ನ್ಯಾಯಾಧೀಶರಾದ ದೇವರೆಡ್ಡಿ, 4 ನೇ ಅಪರ ಸಿವಿಲ್ ನ್ಯಾಯಾಧೀಶರಾದ ಲಕ್ಷ್ಮಿ ಭವಾನಿ ಶಂಕ್ರಪ್ಪ, 5 ನೇ ಅಪರ ಸಿವಿಲ್ ನ್ಯಾಯಾಧೀಶರಾದ ಕೌಶಲ್ ಸೇರಿದಂತೆ ಬಳ್ಳಾರಿ ವಕೀಲರ ಸಂಘದ ಪದಾಧಿಕಾರಿಗಳು, ಹಿರಿಯ ಮತ್ತು ಕಿರಿಯ ವಕೀಲರು ಹಾಗೂ ನ್ಯಾಯಾಲಯದ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಮತ್ತು ಪತಂಜಲಿ ಯೋಗ ಶಿಕ್ಷಣಾ ಸಮಿತಿ ಬಳ್ಳಾರಿ ಶಾಖೆಯ ಸದಸ್ಯರು ಮತ್ತು ಪದಾಧಿಕಾರಿಗಳು ಸಕ್ರಿಯವಾಗಿ ಪಾಲ್ಗೊಂಡು ಯೋಗಾಸನ ಮಾಡಿದರು.

ಜೂನ್ 28 ರಂದು ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮ ಬಳ್ಳಾರಿ ಜಿಲ್ಲೆಯಲ್ಲಿ 1.99 ಲಕ್ಷ ಮಕ್ಕಳಿಗೆ ಲಸಿಕೆ ಹಾಕುವ ಗುರಿ

ಬಳ್ಳಾರಿ,ಜೂ.23-

ಸಾಮಾನ್ಯವಾಗಿ ಮಕ್ಕಳಲ್ಲಿ ಶಾಶ್ವತ ಅಂಗವಿಕಲತೆ ಉಂಟು ಮಾಡುವ 'ಪೋಲಿಯೋ ಮೈಲಿಟಿಸ್' ವೈರಸ್ ನಿಯಂತ್ರಣಕ್ಕಾಗಿ 1995 ರಿಂದ ನಿರಂತರವಾಗಿ ಹಮ್ಮಿಕೊಳ್ಳುತ್ತಾ ಬರಲಾಗಿರುವ ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮವು ಈ ವರ್ಷ ಜೂನ್ 28ರ ಭಾನುವಾರದಂದು ಜಿಲ್ಲಾದ್ಯಂತ ಜರುಗಲಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ತಿಳಿಸಿದ್ದಾರೆ.

★ಬಳ್ಳಾರಿ ಜಿಲ್ಲೆಯ ಲಸಿಕಾ ಕಾರ್ಯಕ್ರಮದ ಒಂದು ನೋಟ:★

ಬಳ್ಳಾರಿ ಜಿಲ್ಲೆಯ ಒಟ್ಟು 5 ತಾಲ್ಲೂಕುಗಳಲ್ಲಿ ಬೃಹತ್ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಹುಟ್ಟಿನಿಂದ 5 ವರ್ಷದೊಳಗಿನ ಒಟ್ಟು 1,99,703 ಮಕ್ಕಳಿಗೆ ಲಸಿಕೆ ಹಾಕುವ ಗುರಿ ಹೊಂದಲಾಗಿದೆ. 615 ಮನೆ ಭೇಟಿ ತಂಡಗಳು, 50 ಟ್ರಾನ್ಸಿಟ್ ತಂಡಗಳು ಹಾಗೂ 15 ಸಂಚಾರಿ ತಂಡಗಳು ಸೇರಿದಂತೆ ಒಟ್ಟು 916 ತಂಡಗಳನ್ನು ನಿಯೋಜಿಸಲಾಗಿದೆ.

ಒಟ್ಟು 977 ಲಸಿಕಾ ಕಾರ್ಯಕರ್ತರು, 188 ಮೇಲುಸ್ತುವಾರಿ ತಂಡಗಳು ಮತ್ತು 5 ತಾಲ್ಲೂಕು ಉಸ್ತುವಾರಿ ಅಧಿಕಾರಿಗಳು ಕಾರ್ಯ ನಿರ್ವಹಿಸಲಿದ್ದಾರೆ. ಜಿಲ್ಲೆಯಲ್ಲಿ ಒಟ್ಟು 236 ಕ್ಲಿಷ್ಟಕರ ಸ್ಥಳಗಳನ್ನು ಗುರುತಿಸಲಾಗಿದ್ದು, ಒಟ್ಟು 3,10,143 ಡೋಸ್ ಲಸಿಕೆಯನ್ನು ಲಭ್ಯವಿಟ್ಟುಕೊಳ್ಳಲಾಗಿದೆ.

ಭಾರತ ಪೋಲಿಯೋ ಮುಕ್ತ,



ಆದರೆ ಜಾಗ್ರತೆ ಅಗತ್ಯ:★

ದೇಶದಲ್ಲಿ ಕೊನೆಯ ಪೋಲಿಯೋ ಪ್ರಕರಣವು 2011ರ ಜನವರಿ 13 ರಂದು ಪಶ್ಚಿಮ ಬಂಗಾಳದ ಹೌರಾ ಜಿಲ್ಲೆಯಲ್ಲಿ ವರದಿಯಾಗಿತ್ತು. ಅದಾದ ಬಳಿಕ ಯಾವುದೇ ಹೊಸ ಪ್ರಕರಣಗಳು ಕಂಡುಬಂದಿಲ್ಲ. ಈ ಹಿನ್ನೆಲೆಯಲ್ಲಿ ವಿಶ್ವ ಆರೋಗ್ಯ ಸಂಸ್ಥೆಯು 2014ರ ಫೆಬ್ರವರಿ 11 ರಂದು ಭಾರತವನ್ನು 'ಪೋಲಿಯೋ ಮುಕ್ತ ರಾಷ್ಟ್ರ' ಎಂದು ಘೋಷಿಸಿದೆ. ಆದರೆ, ಭಾರತವನ್ನು ನಿರಂತರವಾಗಿ ಪೋಲಿಯೋ ಮುಕ್ತವಾಗಿಡುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದು ಅವರು ತಿಳಿಸಿದ್ದಾರೆ.

ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ. ಹನುಮಂತಪ್ಪ ಅವರು, ಪೋಲಿಯೋ ವೈರಸ್‌ನಲ್ಲಿ 3 ವಿಧಗಳಿದ್ದು, ಅದರಲ್ಲಿ ಟೈಪ್ 2 ಮತ್ತು ಟೈಪ್ 3 ವೈರಸ್‌ಗಳು ಈಗಾಗಲೇ ನಿರ್ಮೂಲನೆಯಾಗಿವೆ. ಆದರೆ ಟೈಪ್ 1 ವೈರಸ್ ಪ್ರಕರಣಗಳು ಇಂದಿಗೂ ನೆರೆರಾಷ್ಟ್ರಗಳಲ್ಲಿ ಕಂಡುಬರುತ್ತಿರುವುದರಿಂದ ನಾವು ಸದಾ ಜಾಗರೂಕರಾಗಿರಬೇಕು ಎಂದು ಹೇಳಿದ್ದಾರೆ.

★ವಲಸೆ ಪ್ರದೇಶಗಳಿಗೆ ಹೆಚ್ಚಿನ ಆದ್ಯತೆ:★

ವಲಸೆ ಪ್ರದೇಶಗಳು, ಕೈಗಾರಿಕಾ ವಲಯಗಳು, ಇಟ್ಟಿಗೆ ಭಟ್ಟಿಗಳು, ಅಲೆಮಾರಿ ಕುರಿ ಸಾಕಾಣಿಕೆದಾರರ ತಾತ್ಕಾಲಿಕ ನಿವಾಸಿಗಳು, ತೋಟದ ಮನೆಗಳು ಹಾಗೂ ಕಟ್ಟಡ ನಿರ್ಮಾಣದ ಸ್ಥಳಗಳಲ್ಲಿರುವ ಮಕ್ಕಳನ್ನು ಗುರುತಿಸಿ ಲಸಿಕೆ ಹಾಕಲು ಕ್ರಿಯಾ ಯೋಜನೆಯಲ್ಲಿ ಹೆಚ್ಚಿನ ಆದ್ಯತೆ ನೀಡಲಾಗಿದೆ ಎಂದು ಡಾ. ಹನುಮಂತಪ್ಪ ತಿಳಿಸಿದ್ದಾರೆ.

★ಪಾಲಕರಲ್ಲಿ ಮನವಿ:★

ಜಿಲ್ಲೆಯ ಎಲ್ಲಾ ಸಾರ್ವಜನಿಕರು ಹಾಗೂ ಪಾಲಕರು ತಮ್ಮ ಹುಟ್ಟಿನಿಂದ 5 ವರ್ಷದೊಳಗಿನ ಎಲ್ಲಾ ಮಕ್ಕಳನ್ನು ತಪ್ಪದೇ ಹತ್ತಿರದ ಪೋಲಿಯೋ ಬೂತ್‌ಗಳಿಗೆ ಕರೆತಂದು, ಜೂನ್ 28, 2026ರ ಭಾನುವಾರದಂದು 'ಎರಡು ಹನಿ' ಪೋಲಿಯೋ ಲಸಿಕೆ ಕೊಡಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಅವರು ಮನವಿ ಮಾಡಿದ್ದಾರೆ.

ಮೆಣಸಿನಕಾಯಿ ಬೆಳೆಗಾರರೇ ಗಮನಿಸಿ: ತೋಟಗಾರಿಕೆ ಇಲಾಖೆಯ ಮುಂಜಾಗ್ರತಾ ಕ್ರಮ ಪಾಲನೆ ಕಡ್ಡಾಯ

ಬಳ್ಳಾರಿ,ಜೂ.23-

ಜಿಲ್ಲೆಯ ಮೆಣಸಿನಕಾಯಿ ಬೆಳೆಗಾರರು, ಬೀಜ ಮಾರಾಟಗಾರರು ಹಾಗೂ ನರ್ಸರಿ ಮಾಲೀಕರು ನಷ್ಟ ಮತ್ತು ಕಾನೂನು ಕ್ರಮಗಳಿಂದ ಪಾರಾಗಲು ಕಡ್ಡಾಯವಾಗಿ ತೋಟಗಾರಿಕೆ ಇಲಾಖೆಯ ಮುಂಜಾಗ್ರತಾ ಕ್ರಮಗಳನ್ನು ಅನುಸರಿಸಬೇಕು ಎಂದು ತೋಟಗಾರಿಕೆ ಜಂಟಿ ನಿರ್ದೇಶಕ ಶಶಿಕಾಂತ್ ಕೋಟಿಮನೆ ಅವರು ತಿಳಿಸಿದ್ದಾರೆ.

ಪ್ರಮುಖ ಸೂಚನೆಗಳು:

ನರ್ಸರಿಗಳಲ್ಲಿ ಉತ್ತಮವಾಗಿ ಬೀಜೋಪಚಾರ ಮಾಡಿ ಬೆಳೆಸಿದ ಸಸಿಗಳನ್ನು ಮಾತ್ರ ಖರೀದಿಸುವುದು ಸೂಕ್ತ. ಬೀಜ ಪರವಾನಗಿ ಮತ್ತು ಜಿ.ಎಸ್.ಟಿ. ನೋಂದಾಯಿತ ಬೀಜ ಮಳಿಗೆ ಅಥವಾ ನರ್ಸರಿಗಳ ಮೂಲಕವೇ ಸಸಿ/ಬೀಜಗಳನ್ನು ಖರೀದಿಸಬೇಕು. ಅಧಿಕೃತ ಕಂಪನಿ ಅಥವಾ ಮಾರಾಟಗಾರರಿಂದ ಖರೀದಿಸಿದ ಬೀಜಗಳ ಲಾಟ್ ನಂಬರ್ ನಮೂದಿಸಿರುವ ಮೂಲ ಬಿಲ್ಲನ್ನು ಪಡೆದು, ಬೆಳೆ ಮಾರಾಟವಾಗುವವರೆಗೂ ಸುರಕ್ಷಿತವಾಗಿ ಇಟ್ಟುಕೊಳ್ಳಬೇಕು. ಬೀಜ ಮತ್ತು ಸಸಿಗಳನ್ನು ಪಹಣಿಯಲ್ಲಿರುವ ರೈತರ ಹೆಸರಿನಲ್ಲೇ ಖರೀದಿಸಿ ಬಿಲ್ ಪಡೆಯಬೇಕು. ಯಾವುದೇ ಕಾರಣಕ್ಕೂ ಬಿಡಿ ಅಥವಾ ಅನಧಿಕೃತ ಮಾರಾಟಗಾರರಿಂದ ಬೀಜ/ಸಸಿಗಳನ್ನು ಖರೀದಿಸಬಾರದು. ಒಂದು ವೇಳೆ ಹಾಗೆ ಖರೀದಿಸಿ ನಷ್ಟ ಸಂಭವಿಸಿದರೆ ಅದಕ್ಕೆ ತೋಟಗಾರಿಕೆ ಇಲಾಖೆ ಅಥವಾ ಜಿಲ್ಲಾಡಳಿತ ಜವಾಬ್ದಾರಿಯಾಗುವುದಿಲ್ಲ.

ಬೀಜ ಮಾರಾಟಗಾರರು ಮತ್ತು ನರ್ಸರಿ ಮಾಲೀಕರು ಪಾಲಿಸಬೇಕಾದ ನಿಯಮಗಳು: ಜಿಲ್ಲೆಯ ಎಲ್ಲಾ ಬೀಜ/ಸಸಿ ಮಾರಾಟಗಾರರಿಗೆ ಜಿ.ಎಸ್.ಟಿ. ನೋಂದಣಿ ಹಾಗೂ ಬೀಜ ಮಾರಾಟಗಾರರಿಗೆ ಬೀಜ ಪರವಾನಗಿ ಪ್ರಮಾಣ ಪತ್ರ ಕಡ್ಡಾಯವಾಗಿರುತ್ತದೆ. ಅಧಿಕೃತ ಕಂಪನಿಗಳ ವಿತರಕರಾಗಿದ್ದರೆ, ಕೇವಲ ಆಯಾ ಕಂಪನಿಯ ಅಧಿಕೃತ ಬೀಜಗಳನ್ನು ಮಾತ್ರ ಮಾರಾಟ ಮಾಡಬೇಕು. ನರ್ಸರಿಗಳಲ್ಲಿ ಬಳಸುವ ಬೀಜ, ಗೊಬ್ಬರ, ರೋಗ ಮತ್ತು ಕೀಟನಾಶಕಗಳ ಸಂಪೂರ್ಣ ವಿವರಗಳನ್ನು ವಹಿಯಲ್ಲಿ ನಮೂದಿಸಿ ಕಟ್ಟುನಿಟ್ಟಾಗಿ ನಿರ್ವಹಿಸಬೇಕು. ರೈತರಿಂದ ಬೀಜ ಪಡೆದ ಮತ್ತು ಸಸಿ ವಿತರಿಸಿದ ದಿನಾಂಕಗಳ ವಹಿಯನ್ನೂ ಇಡಬೇಕು.

ಸಸಿಗಳನ್ನು ಉತ್ಪಾದಿಸಲು ಕೇವಲ ಶುದ್ಧೀಕರಿಸಿದ ತೆಂಗಿನ ನಾರನ್ನು ಮಾತ್ರ ಖರೀದಿಸಿ ಉಪಯೋಗಿಸಬೇಕು ಹಾಗೂ ಅದರ ಬಿಲ್ಲುಗಳ ವಿವರವನ್ನು ವಹಿಯಲ್ಲಿ ದಾಖಲಿಸಬೇಕು. ರೈತರು ತಂದುಕೊಡುವ ಬೀಜಗಳನ್ನು ನಾಟಿ ಮಾಡಿ ಸಸಿ ಸಿದ್ಧಪಡಿಸಿಕೊಡುವ ಮುನ್ನ, ರೈತರು ಯಾವ ಕಂಪನಿಯ ಬೀಜ ಖರೀದಿಸಿದ್ದಾರೆ ಎಂಬುದನ್ನು ಖಾತರಿಪಡಿಸಿಕೊಂಡು, ಆ ಖರೀದಿಯ ಬಿಲ್‌ನ ನಕಲು ಪ್ರತಿಯನ್ನು ಪಡೆದು ವಹಿಯಲ್ಲಿ ದಾಖಲಿಸುವುದು ಕಡ್ಡಾಯ.

ಯಾವುದೇ ಕಾರಣಕ್ಕೂ ಅನಧಿಕೃತವಾಗಿ ಬಿಡಿ ಬೀಜಗಳನ್ನು ಮಾರಾಟ ಮಾಡಬಾರದು. ಒಂದು ವೇಳೆ ನಿಯಮ ಉಲ್ಲಂಘಿಸಿ ಅನಧಿಕೃತ ಮಾರಾಟ ಮಾಡುವುದು ಕಂಡುಬಂದಲ್ಲಿ ಅಥವಾ ವರದಿಯಾದಲ್ಲಿ ಅಂತಹ ಮಾಲೀಕರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಅವರು ಪ್ರಕಟಣೆಯಲ್ಲಿ ಎಚ್ಚರಿಸಿದ್ದಾರೆ.



ಜೂನ್ 25 ರಂದು ಮಾನ್ಯ ಮುಖ್ಯಮಂತ್ರಿಗಳ ಕಾರ್ಯಕ್ರಮ: ಶಾಸಕರು, ಅಧಿಕಾರಿಗಳಿಂದ ಸ್ಥಳ ಪರಿಶೀಲನೆ

ಕೊಪ್ಪಳ ಜೂ.23-

ಜೂನ್ 25 ರಂದು ಕೊಪ್ಪಳ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ತುಂಗಭದ್ರಾ ಜಲಾಶಯಕ್ಕೆ ನೂತನವಾಗಿ ಅಳವಡಿಸಿರುವ 33 ಸ್ಪಿಲ್‌ವೇ ಗೇಟುಗಳ ಲೋಕಾರ್ಪಣೆ ಕಾರ್ಯಕ್ರಮಕ್ಕೆ ರಾಜ್ಯದ ಮುಖ್ಯಮಂತ್ರಿಗಳು ಹಾಗೂ ಬೇರೆ ರಾಜ್ಯಗಳ ಮುಖ್ಯಮಂತ್ರಿಗಳು, ಕೇಂದ್ರ ಸರ್ಕಾರದ ಸಚಿವರುಗಳು ಹಾಗೂ ಮೂರು ರಾಜ್ಯಗಳಿಗೆ ಸಂಬಧಪಟ್ಟ ಇಲಾಖೆ ಸಚಿವರುಗಳು ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ವೇದಿಕೆ ಕಾರ್ಯಕ್ರಮ ನಡೆಯುವ ಮುನಿರಾಬಾದ್‌ನ ಸರ್ಕಾರಿ ಶಾಲಾ ಆವರಣ ಹಾಗೂ ಐಆರ್‌ಬಿಯ ಹೆಲಿಪ್ಯಾಡ್‌ಗಳಿಗೆ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ, ಶಿವರಾಜ ತಂಗಡಗಿ ಅವರು ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಈ ಸಂದರ್ಭ ಮಾಜಿ ಸಚಿವರಾದ ಅಮರೇಗೌಡ ಪಾಟೀಲ ಬಯ್ಯಾಪೂರ, ಕೊಪ್ಪಳ ಜಿಲ್ಲಾಧಿಕಾರಿ ಡಾ.ಸುರೇಶ ಬಿ.ಇಟ್ನಾಳ, ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ರಾಮ್ ಎಲ್.ಅರಸಿದ್ದಿ, ವಿಜಯನಗರ ಜಿಲ್ಲಾಧಿಕಾರಿ ಕವಿತಾ ಮನ್ನಿಕೇರಿ, ವಿಜಯನಗರ ಜಿಲ್ಲಾ ಹೆಚ್ಚುವರಿ ಪೊಲೀಸ್ ಅಧೀಕ್ಷಕ ಜಿ.ಮಂಜುನಾಥ, ಕರ್ನಾಟಕ ನೀರಾವರಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ರಾಜೇಶ ಅಮ್ಮಿನಬಾವಿ, ಅಪೊಲೀಸ್ ಅಧಿಕಾರಿಗಳು ಉಪಸ್ಥಿತರಿದ್ದರು.

ಮತದಾರರ ಪಟ್ಟಿ ಪರಿಷ್ಕರಣೆಯಲ್ಲಿ ಎಲ್ಲರೂ ಪಾಲ್ಗೊಳ್ಳಿ: ವಿವಿ ಕುಲಸಚಿವ ಪ್ರೊ.ವಿ.ಲೋಕೇಶ್ ಕರೆ



ಬಳ್ಳಾರಿ,ಜೂ.23-

ಮತದಾನ ಎಂಬುದು ಪ್ರತಿ ನಾಗರಿಕರ ಮಹತ್ವದ ಹಕ್ಕು ಇದನ್ನು ಸಕ್ರೀಯವಾಗಿ ಚಲಾಯಿಸಲು ಕಾಲಕಾಲಕ್ಕೆ ಪರಿಷ್ಕರಣೆಯಲ್ಲಿ ಎಲ್ಲರೂ ಪಾಲ್ಗೊಳ್ಳಬೇಕು ಎಂದು ವಿವಿಯ ಕುಲಸಚಿವ ಪ್ರೊ.ವಿ ಲೋಕೇಶ್ ಕರೆ ನೀಡಿದರು.

ವಿಶ್ವವಿದ್ಯಾಲಯದ'ಲ್ಲಿ ಆಯೋಜಿಸಿದ್ದ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ ಜಾಗೃತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಮತದಾನದ ಹಕ್ಕು ಕೇವಲ ಸಂವಿಧಾನಾತ್ಮಕ ಹಕ್ಕಾಗಿರದೆ, ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿಯೂ ಆಗಿದೆ ಎಂದು ಅವರು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಅನ್ವಯಿಕ ವಿಜ್ಞಾನ ನಿಕಾಯದ ಡೀನ್ ಪ್ರೊ. ಹನು ಮೇಶ್ ವೈದ್ಯ, ಚುನಾವಣಾ ಸಾಕ್ಷರತಾ ಕ್ಲಬ್ ಚಟುವಟಿಕೆಗಳ ಸಂಯೋಜಕ ಡಾ.ವೀರಪ್ರಸಾದ್. ಎಂ., ವಿವಿಯ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಇದ್ದರು. ವೀರಶೈವ ಕಾಲೇಜಿನಲ್ಲಿ ಕಾರ್ಯಕ್ರಮ:★

ವಿಶ್ವವಿದ್ಯಾಲಯದ ಅಧೀನದ ವೀರಶೈವ ಕಾಲೇಜಿನಲ್ಲಿ ವಿಶೇಷ ಸಮಗ್ರ ಪರಿಷ್ಕರಣೆ ಜಾಗೃತಿ ಕಾರ್ಯಕ್ರಮಕ್ಕೆ ವಿಜಯನಗರ ಶ್ರೀಕೃಷ್ಣ ದೇವರಾಯ ವಿಶ್ವವಿದ್ಯಾಲಯದ ಕುಲಸಚಿವ ಪ್ರೊ.ವಿ ಲೋಕೇಶ್ ಚಾಲನೆ ನೀಡಿದರು.

ಪ್ರಜಾಪ್ರಭುತ್ವದ ಯಶಸ್ವಿ ಕಾರ್ಯನಿರ್ವಹಣೆಯಲ್ಲಿ ಮತದಾರರ ಜಾಗೃತಿ ಹಾಗೂ ಯುವಜನರ ಸಕ್ರಿಯ ಪಾಲ್ಗೊಳ್ಳುವಿಕೆಯ ಮಹತ್ವವನ್ನು ವಿದ್ಯಾರ್ಥಿಗಳಿಗೆ ವಿವರಿಸಿದರು.

ಕಾರ್ಯಕ್ರಮದ ಅಧ್ಯಕ್ಷೀಯ ಭಾಷಣವನ್ನು ವೀರಶೈವ ಮಹಾವಿದ್ಯಾಲಯದ ಆಡಳಿತ ಮಂಡಳಿಯ ಅಧ್ಯಕ್ಷ ಸಾಹುಕಾರ್ ಸತೀಶಬಾಬು ಅವರು ನೆರವೇರಿಸಿದರು. ಯುವಜನರು ಪ್ರಜಾಪ್ರಭುತ್ವದ ಮೌಲ್ಯಗಳನ್ನು ಅಳವಡಿಸಿಕೊಂಡು ಚುನಾವಣಾ ಪ್ರಕ್ರಿಯೆಯಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳುವ ಮೂಲಕ ರಾಷ್ಟ್ರ ನಿರ್ಮಾಣದಲ್ಲಿ ತಮ್ಮ ಪಾತ್ರವನ್ನು ಸಮರ್ಥವಾಗಿ ನಿರ್ವಹಿಸಬೇಕೆಂದು ಅವರು ಕರೆ ನೀಡಿದರು.

ವಿವಿಯ ರಾಜ್ಯಶಾಸ್ತ್ರ ವಿಭಾಗದ ಡಾ.ವೀರಪ್ರಸಾದ್ ಎಂ. ಹಾಗೂ ವೀರಶೈವ ಮಹಾವಿದ್ಯಾಲಯದ ಪ್ರಾಂಶುಪಾಲ ಡಾ. ಜಿ. ಮಲ್ಲನಗೌಡ ಕಾರ್ಯಕ್ರಮದಲ್ಲಿ ಇದ್ದರು.

ಕಾರ್ಯಕ್ರಮದಲ್ಲಿ 100 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಉತ್ಸಾಹದಿಂದ ಭಾಗವಹಿಸಿದ್ದರು. ಮಹಾವಿದ್ಯಾಲಯದ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ವರ್ಗದ ಸದಸ್ಯರು ಸಹ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದು, ಕಾರ್ಯಕ್ರಮದ ಯಶಸ್ಸಿಗೆ ಸಹಕರಿಸಿದರು.

ನಿಮ್ಮೂರು ಸುದ್ದಿ

ಸಂಪಾದಕೀಯ



ವಿದ್ಯಾರ್ಥಿಗಳ ಭವಿಷ್ಯದೊಂದಿಗೆ ಚೆಲ್ಲಾಟವಾಡುವ ಬಿಜೆಪಿ ಭಂಡರು

ಮೂರು ವಿದ್ಯಾರ್ಥಿಗಳ ಭವಿಷ್ಯದ ಬಗ್ಗೆ ತಲೆಕೆಡಿಸಿಕೊಳ್ಳುತ್ತಿರುವ ಬಿಜೆಪಿ ನಾಯಕರು, 23 ಲಕ್ಷ ವಿದ್ಯಾರ್ಥಿಗಳ ಭವಿಷ್ಯ ಬರಿದಾಗಿದ್ದರ ಬಗ್ಗೆ ಬಾಯಿ ಬಿಡದಿರುವುದು ಸೋಗಲಾಡಿತನವಲ್ಲವೇ? ಬಿಜೆಪಿಗರು ಆಡುವುದು ಒಂದು, ಮಾಡುವುದು ಇನ್ನೊಂದು. ಅವರ ಪಕ್ಷದ ಚಿಹ್ನೆಯಂತೆಯೇ, ಮೇಲೆ ಕಾಣುವುದು ಕಮಲ, ಒಳಗಿರುವುದು ಮಲ.

ಕಳೆದ ಭಾನುವಾರ ನಡೆದ ನೀಟ್ ಯುಜಿ-2026 ಮರುಪರೀಕ್ಷೆ ಸಂದರ್ಭದಲ್ಲಿ ಮೂವರು ವಿದ್ಯಾರ್ಥಿಗಳು ತಡವಾಗಿ ಬಂದಿದ್ದಕ್ಕೆ ಪ್ರವೇಶ ನಿರಾಕರಿಸಲಾಯಿತು. ಆ ಮೂವರು ವಿದ್ಯಾರ್ಥಿಗಳಲ್ಲಿ ಇಬ್ಬರು ತಡವಾಗಿ ಬಂದರು, ಮತ್ತೊಬ್ಬರು ಹಳೆಯ ಪರೀಕ್ಷಾ ಪ್ರವೇಶ ಪತ್ರ ತಂದಿದ್ದರು. ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆಯಾಗಬಾರದು ಎಂಬ ಕಾರಣಕ್ಕೆ ಕರ್ನಾಟಕ ಸರ್ಕಾರ ಮುಂಚಿತವಾಗಿಯೇ ಸಂಚಾರ ಸಲಹೆ ಹಾಗೂ ಸಹಾಯವಾಣಿಯನ್ನು ಬಿಡುಗಡೆ ಮಾಡಿತ್ತು.

ಆದರೆ, ಸರ್ಕಾರದ ಈ ಸಮಜಾಯಿಷಿಗೆ ತೃಪ್ತರಾಗದ ಬಿಜೆಪಿ ಸಂಸದ ತೇಜಸ್ವಿ ಸೂರ್ಯ, ಆ ಅವಘಡಕ್ಕೆ ಕಾಂಗ್ರೆಸ್ ರ್ಯಾಲಿಯಿಂದಾದ ಟ್ರಾಫಿಕ್ ಜಾಮ್ ಕಾರಣ ಎಂದು ದೂರಿದರು. ಅಷ್ಟೇ ಅಲ್ಲ, ಕಳೆದ ಹಲವು ವಾರಗಳಿಂದ ರಾಹುಲ್ ಗಾಂಧಿ ವಿದ್ಯಾರ್ಥಿಗಳು ಮತ್ತು ಪರೀಕ್ಷೆಗಳ ಬಗ್ಗೆ ಮೊಸಳೆ ಕಣ್ಣೀರು ಸುರಿಸುತ್ತಿದ್ದಾರೆ. ವಿದ್ಯಾರ್ಥಿಗಳಿಗೆ ರಾಜಕೀಯ ನಾಟಕವಲ್ಲ, ಸಂವೇದನಾಶೀಲತೆ ಬೇಕು. ವಿದ್ಯಾರ್ಥಿಗಳ ಬಗ್ಗೆ ಕಾಳಜಿ ದೆಹಲಿಯಲ್ಲಿ ಕೇವಲ ಘೋಷಣೆಯಾಗಿದ್ದು, ಬೆಂಗಳೂರಿನಲ್ಲಿ ತೊಂದರೆಯಾಗಿ ಪರಿಣಮಿಸಬಾರದು ಎಂದು ಕುಟುಕಿದರು.

ತೇಜಸ್ವಿ ಸೂರ್ಯ, ಬಿಜೆಪಿ ಸಂಸದ. ಆತ ರಾಜ್ಯ ಸರ್ಕಾರದ ವಿರುದ್ಧ ಟೀಕಿಸುತ್ತಿದ್ದಂತೆ, ಸಂಜೆಯೊಳಗೆ ಅದು ಇಡೀ ದೇಶವನ್ನು ವ್ಯಾಪಿಸಿತು. ಬಿಜೆಪಿಯ ಹಿರಿ-ಮರಿ-ಕಿರಿ ನಾಯಕರೆಲ್ಲ ತೇಜಸ್ವಿ ಸೂರ್ಯರೊಂದಿಗೆ ಸ್ವರ ಸೇರಿಸಿದರು. ಸಂಜೆಯ ವೇಳೆಗೆ ಸುದ್ದಿ ಸಂಚಲನ ಸೃಷ್ಟಿಸಿತು. ಅದಕ್ಕೇ ಕಾಯ್ದು ಕುಳಿದಿದ್ದ ಮಾರಿಕೊಂಡ ಮಾಧ್ಯಮಗಳು, ಸಾಕಷ್ಟು ಪ್ರಚಾರ ನೀಡಿ, ಜ್ವಲಂತ ಸಮಸ್ಯೆಯನ್ನಾಗಿಸಿದವು.

ವಿದ್ಯಾರ್ಥಿಗಳ ಬಗೆಗಿನ ಸಂಸದ ತೇಜಸ್ವಿ ಸೂರ್ಯ ಅವರ ಕಳಕಳಿ, ಕಾಳಜಿ ಪ್ರಶಂಸನೀಯ. ಆದರೆ, ಅದೇ ಕೆಲಸ- ಮೇ 3ರಂದು ನಡೆದ ನೀಟ್ ಪರೀಕ್ಷೆಯ ಪ್ರಶ್ನೆ ಪತ್ರಿಕೆ ಸೋರಿಕೆಯಿಂದಾದ ಅವಘಡಕ್ಕೆ, ನೊಂದ ವಿದ್ಯಾರ್ಥಿಗಳ ಪರ ನಿಂತ ರಾಹುಲ್ ಗಾಂಧಿ, ಸಹಾನುಭೂತಿ ವ್ಯಕ್ತಪಡಿಸಿ ಅವರಿಗೆ ನೈತಿಕ ಸ್ಥೈರ್ಯ ತುಂಬಿದರು. ಆಶ್ಚರ್ಯವೆಂದರೆ, ತೇಜಸ್ವಿ ಸೂರ್ಯರಿಗೆ ಅದು ಮೊಸಳೆ ಕಣ್ಣೀರು ಹಾಗೂ ರಾಜಕೀಯ ನಾಟಕದಂತೆ ಕಾಣಿಸಿತು!

ಕೇವಲ ಮೂವರು ವಿದ್ಯಾರ್ಥಿಗಳು ಪರೀಕ್ಷೆ ಬರೆಯದಿರುವುದಕ್ಕೆ ಇಲ್ಲಿನ ಕಾಂಗ್ರೆಸ್ ಸರ್ಕಾರವನ್ನು ದೂಷಿಸಿದ, ಅದನ್ನು ರಾಷ್ಟ್ರೀಯ ಸುದ್ದಿಯನ್ನಾಗಿಸಿದ ತೇಜಸ್ವಿ ಸೂರ್ಯ; ಬಿಜೆಪಿ ಸರ್ಕಾರವಿರುವ ದೆಹಲಿ, ಮಹಾರಾಷ್ಟ್ರ ಮತ್ತು ಮಧ್ಯಪ್ರದೇಶಗಳಲ್ಲೂ ವಿದ್ಯಾರ್ಥಿಗಳು ಪರೀಕ್ಷೆಗೆ ತಡವಾಗಿ ಬಂದದ್ದರ ಬಗ್ಗೆ ತುಟಿಕ್ ಪಿಟಿಕ್ ಎನ್ನಲಿಲ್ಲ. ಅವರು ಅವಕಾಶವಂಚಿತ ವಿದ್ಯಾರ್ಥಿಗಳಲ್ಲವೇ, ಅವರ ಭವಿಷ್ಯ ಹಾಳಾಗಿಲ್ಲವೇ?

ಕೇಂದ್ರ ಸರ್ಕಾರದ ಮೂಗಿನ ಕೆಳಗೆ ಮೇ 3ರಂದು ನಡೆದ ನೀಟ್ ಪರೀಕ್ಷೆಯ ಪ್ರಶ್ನೆಪತ್ರಿಕೆ ಸೋರಿಕೆಯಿಂದ ದೇಶದಾದ್ಯಂತ ವೈದ್ಯರಾಗುವ ಕನಸು ಕಾಣುತ್ತಿದ್ದ ಸುಮಾರು 23 ಲಕ್ಷ ವಿದ್ಯಾರ್ಥಿಗಳು ತೊಂದರೆಗೆ ಒಳಗಾದರು. ಅವರ ಅಪಾರ ಶ್ರಮ, ಸಮಯ, ಹಣ- ಒಂದೇ ದಿನದಲ್ಲಿ ವ್ಯರ್ಥವಾಯಿತು. ಅಂದಿನಿಂದ ಇಂದಿನವರೆಗೆ ಸುಮಾರು 12 ವಿದ್ಯಾರ್ಥಿಗಳು ಆತ್ಮಹತ್ಯೆ ಮಾಡಿಕೊಂಡರು. ಆದರೆ ನೀಟ್‌ನ ಸಂಪೂರ್ಣ ಜವಾಬ್ದಾರಿ ಹೊತ್ತ ರಾಷ್ಟ್ರೀಯ ಪರೀಕ್ಷಾ ಏಜೆನ್ಸಿ ()ಯ ಅಧ್ಯಕ್ಷರಾಗಲಿ, ಕೇಂದ್ರ ಸಚಿವ ಧರ್ಮೇಂದ್ರ ಪ್ರಧಾನ್‌ರಾಗಲಿ ರಾಜೀನಾಮೆ ಕೊಡಲಿಲ್ಲ. 50 ದಿನಗಳಾದರೂ ಪ್ರಧಾನಿ ಮೋದಿಯವರು ಬಾಯಿ ಬಿಡಲಿಲ್ಲ. ಇದು ಘನಘೋರ ಅಪರಾಧವಲ್ಲವೇ? ಆದ ಅವಘಡ ಕುರಿತು ದೇಶದ ಜನರ ಕ್ಷಮೆ ಕೇಳಬೇಕಲ್ಲವೇ? ಮೂರು ವಿದ್ಯಾರ್ಥಿಗಳ ಭವಿಷ್ಯದ ಬಗ್ಗೆ ತಲೆಕೆಡಿಸಿಕೊಳ್ಳುತ್ತಿರುವ ಬಿಜೆಪಿ ನಾಯಕರು, 23 ಲಕ್ಷ ವಿದ್ಯಾರ್ಥಿಗಳ ಭವಿಷ್ಯ ಬರಿದಾಗಿದ್ದರ ಬಗ್ಗೆ ಬಾಯಿ ಬಿಡದಿರುವುದು ಸೋಗಲಾಡಿತನವಲ್ಲವೇ? ಇರಲಿ.

ಇದೇ ಜೂನ್ 25ರಂದು ಮೈಸೂರು, ಹುಬ್ಬಳ್ಳಿ ಹಾಗೂ ಬೆಂಗಳೂರು ವಿಭಾಗಗಳ ಗೂಡ್ಸ್ ಟ್ರೇನ್ ಮ್ಯಾನೇಜರ್ ಹುದ್ದೆಗಳ ಭರ್ತಿಗೆ ಕಂಪ್ಯೂಟರ್ ಆಧಾರಿತ ಪರೀಕ್ಷೆ() ಜರುಗಲಿದೆ. ಆ ಪರೀಕ್ಷೆಯನ್ನು ಕೇವಲ ಇಂಗ್ಲಿಷ್ ಮತ್ತು ಹಿಂದಿ ಭಾಷೆಯಲ್ಲಿ ಮಾತ್ರ ನಡೆಸಲು ರೈಲ್ವೆ ಇಲಾಖೆ ನಿರ್ಧರಿಸಿದೆ.

ಈ ಹಿಂದೆ, ನೈಋತ್ಯ ರೈಲ್ವೆಯ ಮೈಸೂರು ವಿಭಾಗದಲ್ಲಿ ಸೆ. 25, 2025ರಂದು ಗೂಡ್ಸ್ ಟ್ರೇನ್ ಮ್ಯಾನೇಜರ್ 194 ಹುದ್ದೆ ಹಾಗೂ ನ. 5, 2025ರಂದು ಹುಬ್ಬಳ್ಳಿ ವಿಭಾಗದಲ್ಲಿ 101 ಮುಂಬಡ್ತಿ ಹುದ್ದೆಗಳಿಗೆ ಅಧಿಸೂಚನೆ ಹೊರಡಿಸಿತ್ತು. ಈ ಪರೀಕ್ಷೆ ಮಾ. 17, 2026ರಂದು ನಿಗದಿಯಾಗಿತ್ತು. ಪರೀಕ್ಷೆ ಕೇವಲ 4 ದಿನ ಇರುವಾಗ, ಇಂಗ್ಲಿಷ್ ಮತ್ತು ಹಿಂದಿ ಭಾಷೆಯಲ್ಲಿ ಮಾತ್ರ ಪರೀಕ್ಷೆ ಬರೆಯಲು ಅವಕಾಶ ಕಲ್ಪಿಸಲಾಗಿದೆ ಎಂದು ರೈಲ್ವೆ ಮಂಡಳಿ ತಿಳಿಸಿತು. ಆಗ ಕನ್ನಡಪರ ಸಂಘಟನೆಗಳು ತೀವ್ರ ಪ್ರತಿಭಟನೆಗಿಳಿದವು. ವಿರೋಧ ಮತ್ತು ಎಚ್ಚರಿಕೆಗೆ ಮಣಿದ ರೈಲ್ವೆ ಇಲಾಖೆ ಪರೀಕ್ಷೆಯನ್ನೇ ರದ್ದುಗೊಳಿಸಿತು.

ಆ ಸಂದರ್ಭದಲ್ಲಿ ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣನವರು ಪ್ರಧಾನಿ ನರೇಂದ್ರ ಮೋದಿಯವರು ಕನ್ನಡದಲ್ಲಿ ಪರೀಕ್ಷೆ ನಡೆಸಲು ಸಮ್ಮತಿಸಿದ್ದಾರೆ ಎಂದರು. ಮತ್ತೊಬ್ಬ ಕೇಂದ್ರ ಸಚಿವ ಪ್ರಲ್ಹಾದ ಜೋಶಿಯವರು ಮೋದಿಯವರನ್ನು ಬಾಯ್ತುಂಬ ಹಾಡಿ ಹೊಗಳಿದರು. ಆದರೆ, ಅದೇ ರೈಲ್ವೆ ಇಲಾಖೆ, ಕೇವಲ ಮೂರು ತಿಂಗಳ ಅಂತರದಲ್ಲಿ ಕನ್ನಡವನ್ನು ಮತ್ತೆ ತಿರಸ್ಕರಿಸಿ, ಅದೇ ಪರೀಕ್ಷೆಗಳನ್ನು ಹಿಂದಿ ಮತ್ತು ಇಂಗ್ಲಿಷ್‌ನಲ್ಲಿ ನಡೆಸಲು ಜೂ. 25ಕ್ಕೆ ದಿನಾಂಕ ನಿಗದಿಪಡಿಸಿದೆ. ಪ್ರಧಾನಿ ಮೋದಿಯವರ ಸೂಚನೆಯನ್ನು, ಸಚಿವರ ಸಲಹೆಗಳನ್ನು ಕಸದ ಬುಟ್ಟಿಗೆ ಹಾಕಿದೆ.

ಭಾರತವು ಬಹುಭಾಷಾ ಮತ್ತು ಬಹುಸಂಸ್ಕೃತಿಗಳ ದೇಶ. ಭಾರತೀಯ ಸಂವಿಧಾನವು ಎಲ್ಲಾ ಭಾಷೆಗಳಿಗೂ ಸಮಾನ ಗೌರವ ನೀಡುವುದನ್ನು ಒತ್ತಿಹೇಳುತ್ತದೆ. ಆ ಸಂವಿಧಾನಕ್ಕೆ ಹಣೆಹಚ್ಚಿ ನಮಸ್ಕರಿಸುವ ಪ್ರಧಾನಿ ನರೇಂದ್ರ ಮೋದಿಯವರ ಸರ್ಕಾರ, ರೈಲ್ವೆ ನೇಮಕಾತಿಯಲ್ಲಿ ಕನ್ನಡವನ್ನು ಕಡೆಗಣಿಸುತ್ತಿದೆ.

ವಿದ್ಯಾವಂತ ಯುವಜನತೆ ಉದ್ಯೋಗಕ್ಕಾಗಿ ಕೆಲವು ತಿಂಗಳಗಳ ಹಿಂದೆ ಬೀದಿಗಿಳಿದಿದ್ದರು. ಮಡುಗಟ್ಟಿದ ಆಕ್ರೋಶವನ್ನು ಹೊರಹಾಕಿದ್ದರು. ಈಗ ಕೇಂದ್ರ ಸರ್ಕಾರ ಉದ್ಯೋಗ ಕೊಡುವುದಿರಲಿ, ಕನ್ನಡದಲ್ಲಿ ಪರೀಕ್ಷೆ ಬರೆಯಲು ಕೂಡ ಅವಕಾಶ ಕೊಡದೆ ವಂಚಿಸುತ್ತಿದೆ. ಇದು ಕೇಂದ್ರ ಸರ್ಕಾರದ ತಾರತಮ್ಯ ನೀತಿಯಲ್ಲವೇ, ಕನ್ನಡಿಗರನ್ನು ದ್ವಿತೀಯ ದರ್ಜೆಯ ಪ್ರಜೆಗಳನ್ನಾಗಿ ಕಾಣುತ್ತಿಲ್ಲವೇ, ಕನ್ನಡಕ್ಕೆ ದ್ರೋಹ ಬಗೆಯುತ್ತಿಲ್ಲವೇ?

ಕೇಂದ್ರದಲ್ಲಿ ಸಚಿವರಾಗಿರುವ ಪ್ರಲ್ಹಾದ ಜೋಷಿ, ಶೋಭಾ ಕರಂದ್ಲಾಜೆ, ವಿ. ಸೋಮಣ್ಣನವರು ಯಾರಿಂದ ಗೆದ್ದು ಸಚಿವರಾಗಿದ್ದಾರೆ, ಸಂಸದರು ಯಾವ ರಾಜ್ಯವನ್ನು ಪ್ರತಿನಿಧಿಸುತ್ತಿದ್ದಾರೆ? ಇದು ಕೇವಲ ಪರೀಕ್ಷೆ ಬರೆಯುವ, ಉದ್ಯೋಗ ಗಿಟ್ಟಿಸುವ ಪ್ರಶ್ನೆಯಲ್ಲ; ಭಾಷಾ ಗೌರವ ಮತ್ತು ಸಾಮಾಜಿಕ ನ್ಯಾಯದ ಪ್ರಶ್ನೆ. ಸಂವಿಧಾನದ ಮೂಲ ತತ್ವಗಳನ್ನು ಹಾಗೂ ವಿಶೇಷವಾಗಿ ಭಾರತದ ಒಕ್ಕೂಟ ವ್ಯವಸ್ಥೆಯನ್ನು ಉಳಿಸಿ ಬೆಳೆಸುವ ಪ್ರಶ್ನೆ.

ಪ್ರಜಾಪ್ರಭುತ್ವದ ಈ ಮೂಲಮಂತ್ರವನ್ನೇ ಅರಿಯದ, ಅರಿತಿದ್ದರು ನಿರ್ಲಕ್ಷಿಸುವ ಬಿಜೆಪಿಯ ಈ ಭಂಡತನ ದಿನದಿಂದ ದಿನಕ್ಕೆ ಮೇರೆ ಮೀರುತ್ತಿದೆ. ಕೇವಲ ಮೂವರು ವಿದ್ಯಾರ್ಥಿಗಳು ಪರೀಕ್ಷೆ ಬರೆಯುವುದರಿಂದ ವಂಚಿತರಾಗಿದ್ದಕ್ಕೆ ರಾಹುಲ್ ಗಾಂಧಿಯವರನ್ನು ಎಳೆದು ತರುವ, ರಾಜಕಾರಣ ಬೆರೆಸುವ ಬಿಜೆಪಿಗರು, ತಮ್ಮದೇ ಪಕ್ಷದ ಹತ್ತು ಹಲವು ಹಳವಂಡಗಳ ಕುರಿತು ಏಕೆ ಮಾತನಾಡುವುದಿಲ್ಲ?

ಬಿಜೆಪಿಗರು ಆಡುವುದು ಒಂದು, ಮಾಡುವುದು ಇನ್ನೊಂದು. ಅವರ ಪಕ್ಷದ ಚಿಹ್ನೆಯಂತೆಯೇ, ಮೇಲೆ ಕಾಣುವುದು ಕಮಲ, ಒಳಗಿರುವುದು ಮಲ.

ಅಕ್ರಮ ಕಟ್ಟಡಗಳ ಅಗ್ನಿ ದುರಂತಗಳು; ಸಾಲು ಸಾಲು ಸಾವಿಗೆ ಹೊಣೆ ಯಾರು?



ತನ್ನ ಮಗುವನ್ನು ರಕ್ಷಿಸಿಕೊಳ್ಳಲಾಗದ ಅಸಹಾಯಕತೆಗಿಂತ ದೊಡ್ಡ ಶಿಕ್ಷೆ ಹೆತ್ತವರಿಗೆ ಮತ್ತೊಂದಿಲ್ಲ. ಆದರೆ, ಆ ಅಸಹಾಯಕತೆ ಉಂಟಾಗಿದ್ದು ಸುರಕ್ಷತೆಯನ್ನು ಗಾಳಿಗೆ ತೂರಿ, ಲಾಭದ ದುರಾಸೆಗೆ ಬಿದ್ದವರ ಕ್ರೌರ್ಯದಿಂದ. ಅಲ್ಲಿ ಅಸುನೀಗಿದವರ ಕೊನೆಯ ಕರೆ, ಇನ್ನು ಮುಂದೆ ವ್ಯವಸ್ಥೆಯ ನಿದ್ದೆಗೆಡಿಸಬೇಕಿದೆ. ''ಅಪ್ಪಾ ನನ್ನನ್ನು ಹೇಗಾದರೂ ಕಾಪಾಡು'' ಎಂದು ಗೋಗರೆದ ಮಗನೊಬ್ಬನ ಆಕ್ರಂದನ, ಆ ತಂದೆಯ ಕಿವಿಯಲ್ಲಿ ಮಾತ್ರವಲ್ಲ, ಇಡೀ ವ್ಯವಸ್ಥೆಯ ಆತ್ಮಸಾಕ್ಷಿಯಲ್ಲಿ ದಶಕಗಳ ಕಾಲ ಗುಂಯ್ ಗುಡುತ್ತಲೇ ಇರಬೇಕು.

ನಿನ್ನೆ ಉತ್ತರ ಪ್ರದೇಶದ ಲಖನೌನ ಅಲೀಗಂಜ್ ಪ್ರದೇಶದಲ್ಲಿ ನಡೆದ ಅಗ್ನಿ ದುರಂತದಲ್ಲಿ ಕೆಲವೇ ತಿಂಗಳಲ್ಲಿ ಮದುವೆಯಾಗಬೇಕಿದ್ದ ಜೋಡಿಯೂ ಸೇರಿ 15 ಮಂದಿ ಸಜೀವವಾಗಿ ದಹಿಸಿಹೋಗಿದ್ದಾರೆ. ಇದೂ ಕೂಡ ಎಂದಿನಂತೆ ಒಂದು ದಿನದ ಸುದ್ದಿಯಾಗಿ ಮುಗಿದುಹೋಗಿದೆ. ಬೆಂಕಿ ಆರಿಸಿದ ಮೇಲೆ ಅಗ್ನಿಶಾಮಕ ವಾಹನಗಳು ಹಿಂತಿರುಗಿವೆ, ಮಾಧ್ಯಮಗಳು ಮುಂದಿನ ಬ್ರೇಕಿಂಗ್‌ಗೆ ತಿರುಗಿವೆ. ಆದರೆ ಹೀಗೆ ಪದೇ ಪದೇ ಸಂಭವಿಸುತ್ತಿರುವ ಅವಘಡಗಳಿಗೆ ಕಾರಣಗಳೇನು? ತಪ್ಪಿತಸ್ಥರಾರು? ಅನಾಹುತಗಳು ಮರುಕಳಿಸದಂತೆ ಮಾಡಬೇಕಾದ ಮುಂದಿನ ಕ್ರಮಗಳೇನು? ಎಂಬುದರ ಕುರಿತು ಯಾರೂ ಉಸಿರೆತ್ತುತ್ತಿಲ್ಲ.

ಅಗ್ನಿಶಾಮಕ ಸಿಬ್ಬಂದಿ ಮತ್ತು ರಕ್ಷಣಾ ಪಡೆಗಳ ಪ್ರಯತ್ನದ ನಡುವೆಯೂ, ದಟ್ಟ ಹೊಗೆಯಿಂದಾಗಿ ಪ್ರಾಣ ಕಳೆದುಕೊಂಡವರಲ್ಲಿ ಹೆಚ್ಚಿನವರು ವಿದ್ಯಾರ್ಥಿಗಳು. ಆ ಪೈಕಿ 23 ವರ್ಷದ ಸುಖಮಣಿ ಸಿಂಗ್ ಅವರ ದುರಂತ ಅಂತ್ಯ ಕಣ್ಣು ತೇವಗೊಳಿಸುತ್ತದೆ. ಬೆಂಕಿ ಹತ್ತಿಕೊಂಡ ಕೂಡಲೇ ತನ್ನ ತಂದೆ ಪ್ರಭ್ಜೋತ್ ಸಿಂಗ್ ಅವರಿಗೆ ಕರೆ ಮಾಡಿದ್ದ ಸುಖಮಣಿ, ''ಅಪ್ಪಾ, ಕಟ್ಟಡದಲ್ಲಿ ಬೆಂಕಿ ಹೊತ್ತಿಕೊಂಡಿದೆ, ದಯವಿಟ್ಟು ನನ್ನನ್ನು ಹೇಗಾದರೂ ಉಳಿಸಿ'' ಎಂದು ಅಂಗಲಾಚಿದ್ದಾರೆ. ಆ ಕ್ಷಣದ ಅಸಹಾಯಕತೆಯನ್ನು ನೆನೆದು ತಂದೆ ಕಣ್ಣೀರಿಟ್ಟಿದ್ದಾರೆ. ಮತ್ತೊಂದೆಡೆ, ಮಗನನ್ನು ಕಳೆದುಕೊಂಡ ಆದಿತ್ಯ ಶ್ರೀವಾಸ್ತವ ಅವರ ತಾಯಿ, ರಕ್ಷಣಾ ಕಾರ್ಯದ ವಿಳಂಬದ ಬಗ್ಗೆ ಆಕ್ರೋಶ ವ್ಯಕ್ತಪಡಿಸಿದ್ದಾರೆ. ''ವೀಡಿಯೊ ಮಾಡುವ ಬದಲು ಮೊದಲೇ ನೆರವಾಗಿದ್ದರೆ ನನ್ನ ಮಗನನ್ನು ಉಳಿಸಬಹುದಿತ್ತು'' ಎಂದು ಅಳಲು ತೋಡಿಕೊಂಡಿದ್ದಾರೆ.

ಮೃತ ಅಬ್ದುಲ್ ರೆಹಮಾನ್ ಅವರ ಕಥೆಯಂತೂ ಇನ್ನಷ್ಟು ಹೃದಯ ವಿದ್ರಾವಕ. ಪಾರ್ಶ್ವವಾಯು ಪೀಡಿತ ತಂದೆ ಮತ್ತು ಗೃಹಿಣಿ ತಾಯಿಯಿದ್ದ ಕುಟುಂಬಕ್ಕೆ ಅಬ್ದುಲ್ ಒಬ್ಬನೇ ಆಧಾರವಾಗಿದ್ದ. 8-10 ತಿಂಗಳ ಹಿಂದಷ್ಟೇ ಕೆಲಸಕ್ಕೆ ಸೇರಿದ್ದ ಆತ, ಮನೆಯ ಭವಿಷ್ಯ ರೂಪಿಸುವ ಕನಸು ಕಂಡಿದ್ದ. ಆತನ ಅಗಲಿಕೆಯಿಂದಾಗಿ ವಯಸ್ಸಾದ ಪೋಷಕರು ಈಗ ಅನಾಥರು.

ಅಲಿಗಂಜ್‌ನ ಈ ಕಟ್ಟಡದಲ್ಲಿ ಕೋಚಿಂಗ್ ಸೆಂಟರ್, ಗೇಮಿಂಗ್ ವಲಯ ಹಾಗೂ ಪೆಟ್ ಶಾಪ್ ಕಾರ್ಯನಿರ್ವಹಿಸುತ್ತಿದ್ದವು. ಅಗ್ನಿ ಅವಘಡದ ವೇಳೆ ಸುಮಾರು ಎರಡು ಗಂಟೆಗಳ ಕಾಲ ಕಟ್ಟಡದೊಳಗೆ ದಟ್ಟ ಹೊಗೆ ಆವರಿಸಿತ್ತು. ಕೆಲವರು ಪ್ರಾಣಾಪಾಯದಿಂದ ಪಾರಾಗಲು ಕಿಟಕಿಯಿಂದ ಜಿಗಿದು ಪ್ರಾಣ ಉಳಿಸಿಕೊಂಡಿದ್ದರೆ, ಹೊಗೆಯಿಂದಾಗಿ ಉಸಿರುಗಟ್ಟಿ ಹಲವರು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಒಟ್ಟು 24 ಮಂದಿ ಗಾಯಗೊಂಡು ಆಸ್ಪತ್ರೆಗೆ ದಾಖಲಾಗಿದ್ದಾರೆ.

ಘಟನೆಯ ಕುರಿತು ಉನ್ನತ ಮಟ್ಟದ ತನಿಖೆ ನಡೆಸಲು ದ್ವಿಸದಸ್ಯ ವಿಶೇಷ ತನಿಖಾ ತಂಡವನ್ನು () ಯುಪಿ ಸರ್ಕಾರ ರಚಿಸಿದೆ. ಪೊಲೀಸರು ಈಗಾಗಲೇ ಪ್ರಕರಣ ದಾಖಲಿಸಿಕೊಂಡಿದ್ದು, ಕಟ್ಟಡದ ಜಂಟಿ ಮಾಲೀಕರಾದ ರಾಮ ಕೃಷ್ಣ ಉಪಾಧ್ಯಾಯ, ವೀರೇಂದ್ರ ಪ್ರಸಾದ್ ಶುಕ್ಲಾ, ತುಷಾರ್ ಕೃಷ್ಣ ಜೈಸ್ವಾಲ್ ಹಾಗೂ ಸುರೇಶ್ ಕುಮಾರ್ ಸಾಹು ಎಂಬುವವರನ್ನು ಬಂಧಿಸಿದ್ದಾರೆ.

ಅಲ್ಲದೆ, ಕರ್ತವ್ಯಲೋಪದ ಹಿನ್ನೆಲೆಯಲ್ಲಿ ಲಖನೌ ಅಭಿವೃದ್ಧಿ ಪ್ರಾಧಿಕಾರದ ಇಬ್ಬರು ಅಧಿಕಾರಿಗಳು, ಅಗ್ನಿಶಾಮಕ ಇಲಾಖೆ ಹಾಗೂ ವಿದ್ಯುತ್ ಇಲಾಖೆಯ ತಲಾ ಒಬ್ಬರು ಸೇರಿದಂತೆ ಒಟ್ಟು ನಾಲ್ವರು ಅಧಿಕಾರಿಗಳನ್ನು ಸೇವೆಯಿಂದ ಅಮಾನತುಗೊಳಿಸಲಾಗಿದೆ. ಭಾರತೀಯ ನ್ಯಾಯ ಸಂಹಿತೆ ಹಾಗೂ ಉತ್ತರ ಪ್ರದೇಶ ಅಗ್ನಿಶಾಮಕ ಕಾಯ್ದೆಯ ಅಡಿಯಲ್ಲಿ ಕಠಿಣ ಕ್ರಮ ಕೈಗೊಳ್ಳಲಾಗುತ್ತಿದೆ.

ಕೆಲವೇ ದಿನಗಳ ಹಿಂದಷ್ಟೆ ದಕ್ಷಿಣ ದೆಹಲಿಯ ಮಾಳವೀಯ ನಗರದಲ್ಲಿರುವ ರೆಸ್ಟೋರೆಂಟ್ ಒಂದರಲ್ಲಿ ಇಂಥದ್ದೇ ಭೀಕರ ಅಗ್ನಿ ಅವಘಡ ಸಂಭವಿಸಿತ್ತು. ಅದರಲ್ಲಿ ಕನಿಷ್ಠ 21 ಮಂದಿ ಸಾವನ್ನಪ್ಪಿದ್ದರು. ಮೃತಪಟ್ಟವರಲ್ಲಿ ಹಲವರು ವಿದೇಶಿ ಪ್ರಜೆಗಳಾಗಿದ್ದಾರು.

ಭಾರತದಲ್ಲಿ ಕಟ್ಟಡಗಳ ಅಗ್ನಿ ಸುರಕ್ಷತೆಯು ರಾಷ್ಟ್ರೀಯ ಕಟ್ಟಡ ಸಂಹಿತೆ ( ) ಮತ್ತು ಸ್ಥಳೀಯ ನಗರ ಅಭಿವೃದ್ಧಿ ಪ್ರಾಧಿಕಾರಗಳ ಉಪಕಾನೂನುಗಳ ಅಡಿಯಲ್ಲಿ ಕಟ್ಟುನಿಟ್ಟಾಗಿ ನಿರ್ಧರಿಸಲ್ಪಟ್ಟಿದೆ. ಯಾವುದೇ ವಾಣಿಜ್ಯ ಅಥವಾ ಸಾರ್ವಜನಿಕ ಕಟ್ಟಡ ನಿರ್ಮಿಸುವಾಗ ಅಗ್ನಿಶಾಮಕ ಇಲಾಖೆಯಿಂದ ಕಡ್ಡಾಯವಾಗಿ ನಿರಪೇಕ್ಷಣಾ ಪ್ರಮಾಣಪತ್ರ ( ) ಪಡೆಯುವುದು ಕಡ್ಡಾಯ. ಈ ಪ್ರಮಾಣಪತ್ರವನ್ನು ಪಡೆಯುವಾಗ ಕಟ್ಟಡದ ಎತ್ತರ, ವಿಸ್ತೀರ್ಣ ಮತ್ತು ಬಳಕೆಯ ಸ್ವರೂಪಕ್ಕೆ ಅನುಗುಣವಾಗಿ ಸುರಕ್ಷತಾ ವ್ಯವಸ್ಥೆಗಳನ್ನು ಅಳವಡಿಸುವುದು ಮಾಲೀಕರ ಜವಾಬ್ದಾರಿ. ಈ ಪ್ರಮಾಣಪತ್ರವನ್ನು ನಿಗದಿತ ಅವಧಿಗೊಮ್ಮೆ ನವೀಕರಿಸುವುದು ಕೂಡ ಕಾನೂನಿನ ಭಾಗ.

ಅಗ್ನಿ ಸುರಕ್ಷತಾ ನಿಯಮಗಳನ್ನು ನಿರ್ಲಕ್ಷಿಸುವುದು ಗಂಭೀರ ಅಪರಾಧವೆಂದು ಪರಿಗಣಿಸಲ್ಪಡುತ್ತದೆ. ಅಗ್ನಿ ದುರಂತ ಸಂಭವಿಸಿ ಜೀವಹಾನಿಯಾದ ಸಂದರ್ಭದಲ್ಲಿ, ತಪ್ಪಿತಸ್ಥರ ವಿರುದ್ಧ ಭಾರತೀಯ ನ್ಯಾಯ ಸಂಹಿತೆಯ () ಸೆಕ್ಷನ್ 106 (ನಿರ್ಲಕ್ಷ್ಯದಿಂದ ಸಾವು) ಮತ್ತು ಸೆಕ್ಷನ್ 105 (ಮಾನವ ಜೀವಕ್ಕೆ ಅಪಾಯ ಉಂಟುಮಾಡುವುದು) ಅಡಿಯಲ್ಲಿ ಪ್ರಕರಣ ದಾಖಲಿಸಲು ಅವಕಾಶವಿದೆ. ಅಲ್ಲದೆ, ಸಾರ್ವಜನಿಕ ಸುರಕ್ಷತೆಗೆ ಧಕ್ಕೆ ತಂದ ಆರೋಪದ ಮೇಲೆ ಸೆಕ್ಷನ್ 290 ಅಡಿಯಲ್ಲಿಯೂ ಕ್ರಮ ಕೈಗೊಳ್ಳಬಹುದು. ಈ ಸೆಕ್ಷನ್‌ಗಳ ಅಡಿಯಲ್ಲಿ ಅಪರಾಧಿಗಳಿಗೆ ದೀರ್ಘಕಾಲೀನ ಜೈಲು ಶಿಕ್ಷೆ ವಿಧಿಸುವ ಅವಕಾಶ ಕಾನೂನಿನಲ್ಲಿದೆ.

ನೆಲಮಾಳಿಗೆಯ () ಬಳಕೆಯ ಕುರಿತು ಕಾನೂನು ಸ್ಪಷ್ಟವಾದ ನಿರ್ಬಂಧಗಳನ್ನು ವಿಧಿಸಿದೆ. ಕಾನೂನಿನ ಪ್ರಕಾರ, ನೆಲಮಾಳಿಗೆಯನ್ನು ವಸತಿ ಅಥವಾ ವಿದ್ಯಾರ್ಥಿಗಳು ಪಾಠ ಕೇಳುವ ತರಗತಿಗಳಿಗಾಗಿ ಬಳಸಬಾರದು. ಇದನ್ನು ಕೇವಲ ವಾಹನ ನಿಲುಗಡೆ ಅಥವಾ ಸಾಮಗ್ರಿಗಳನ್ನು ಸಂಗ್ರಹಿಸಲು ಮಾತ್ರ ಬಳಸಬೇಕು. ಒಂದು ವೇಳೆ ನೆಲಮಾಳಿಗೆಯಲ್ಲಿ ಜನಸಂದಣಿ ಇರುವ ಚಟುವಟಿಕೆಗಳನ್ನು ನಡೆಸಿದರೆ, ಅದನ್ನು ಅಕ್ರಮ ನಿರ್ಮಾಣ ಮತ್ತು ನಿಯಮ ಉಲ್ಲಂಘನೆ ಎಂದು ಪರಿಗಣಿಸಲಾಗುತ್ತದೆ. ಇಂತಹ ಸಂದರ್ಭಗಳಲ್ಲಿ ಕಟ್ಟಡದ ಮಾಲೀಕರು ಮಾತ್ರವಲ್ಲದೆ, ಅಕ್ರಮಕ್ಕೆ ಅವಕಾಶ ನೀಡಿದ ಅಧಿಕಾರಿಗಳ ವಿರುದ್ಧವೂ ಕರ್ತವ್ಯಲೋಪದ ಆರೋಪದ ಮೇಲೆ ಕ್ರಿಮಿನಲ್ ಪ್ರಕರಣ ದಾಖಲಿಸಲು ಮತ್ತು ಅವರನ್ನು ಅಮಾನತುಗೊಳಿಸಲು ಕಾನೂನಿನಲ್ಲಿ ಅವಕಾಶವಿದೆ.

ಸದ್ಯ ಅಲಿಗಂಜ್‌ನ ಈ ಕಟ್ಟಡ 1980ರ ಜುಲೈ 11ರಂದು ಲಾಟರಿ ವ್ಯವಸ್ಥೆಯಡಿ ವಿಜಯ್ ಕುಮಾರ್ ಎಂಬುವವರಿಗೆ ಹಂಚಿಕೆಯಾಗಿತ್ತು. 2005ರಲ್ಲಿ ವಿಜಯ್ ಕುಮಾರ್ ಮತ್ತು ಅವರ ಪತ್ನಿ ಉಷಾ ಅವರ ಹೆಸರಿಗೆ ಮಾರಾಟ ಪತ್ರದ ಮೂಲಕ ನೋಂದಣಿಯಾಗಿತ್ತು. ನಂತರ 2013ರ ಜನವರಿ 19ರಂದು ಈ ಆಸ್ತಿಯನ್ನು ವೀರೇಂದ್ರ ಪ್ರತಾಪ್ ಶುಕ್ಲಾ ಮತ್ತು ಸುರೇಂದ್ರ ಪ್ರತಾಪ್ ಶುಕ್ಲಾ ಅವರಿಗೆ ಮಾರಾಟ ಮಾಡಲಾಯಿತು. 2014ರ ಆಗಸ್ಟ್ 7ರಂದು ಲಖನೌ ಅಭಿವೃದ್ಧಿ ಪ್ರಾಧಿಕಾರ () ಖಾತಾ ಬದಲಾವಣೆ ಪ್ರಕ್ರಿಯೆಯನ್ನು ಅಧಿಕೃತವಾಗಿ ಪೂರ್ಣಗೊಳಿಸಿತ್ತು.

2014ರ ಆಗಸ್ಟ್ 20ರಂದು ಈ ಕಟ್ಟಡಕ್ಕೆ ವಸತಿ ಬಳಕೆಯ ನಕ್ಷೆ ಅಡಿಯಲ್ಲಿ ಅನುಮೋದನೆ ದೊರೆತಿದ್ದು, ಇದು ಕೇವಲ 1,992 ಚದರ ಅಡಿ ವಿಸ್ತೀರ್ಣಕ್ಕೆ ಸೀಮಿತವಾಗಿತ್ತು. ಆದರೆ, ವಾಸ್ತವದಲ್ಲಿ ಇಲ್ಲಿ ವಸತಿ ಉದ್ದೇಶದ ಬದಲು ವಾಣಿಜ್ಯ ಚಟುವಟಿಕೆಗಳು ಅನಧಿಕೃತವಾಗಿ ನಡೆಯುತ್ತಿದ್ದವು. ಈ ಬಗ್ಗೆ ಲಖನೌ ಅಭಿವೃದ್ಧಿ ಪ್ರಾಧಿಕಾರವು ವೀರೇಂದ್ರ ಪ್ರತಾಪ್ ಶುಕ್ಲಾ ವಿರುದ್ಧ ಪ್ರಕರಣ ದಾಖಲಿಸಿತ್ತು ಎಂಬುದು ದಾಖಲೆಗಳಿಂದ ಸಾಬೀತಾಗಿದೆ.

ಕಟ್ಟಡದಲ್ಲಿನ ಅಕ್ರಮ ನಿರ್ಮಾಣವನ್ನು ಗುರುತಿಸಿದ್ದ ಲಖನೌ ಅಭಿವೃದ್ಧಿ ಪ್ರಾಧಿಕಾರವು, 2016ರ ಮೇ 10ರಂದು ಅದನ್ನು ತೆರವುಗೊಳಿಸುವಂತೆ ಆದೇಶ ಹೊರಡಿಸಿತ್ತು. ಆದರೆ, ಇಡೀ ಪ್ರಕರಣಕ್ಕೆ ತಿರುವು ಸಿಕ್ಕಿದ್ದು 2016ರ ಜುಲೈ 5ರಂದು. ತೆರವು ಆದೇಶ ನೀಡಿದ ಕೇವಲ ಎರಡು ತಿಂಗಳಲ್ಲೇ, ಆ ಆದೇಶವನ್ನು ಇದ್ದಕ್ಕಿದ್ದಂತೆ ರದ್ದುಗೊಳಿಸಲಾಯಿತು. ಯಾವ ಕಾರಣಕ್ಕಾಗಿ, ಯಾರ ಒತ್ತಡಕ್ಕೆ ಮಣಿದು ಈ ಅಕ್ರಮ ತೆರವು ಆದೇಶವನ್ನು ಹಿಂಪಡೆಯಲಾಗಿತ್ತು ಎಂಬುದು ಈಗ ದೊಡ್ಡ ಪ್ರಶ್ನೆ.

ಅಂದು ತೆರವು ಆದೇಶವನ್ನು ರದ್ದುಗೊಳಿಸದಿದ್ದರೆ, ಬಹುಶಃ ಇಂದಿನ ಈ ಅಗ್ನಿ ದುರಂತ ನಡೆಯುತ್ತಿರಲಿಲ್ಲವೇನೋ? ಅಂದು ಅಕ್ರಮಕ್ಕೆ ಮಣೆ ಹಾಕಿದ ಅಧಿಕಾರಿಗಳೇ ಇಂದಿನ 15 ಜೀವಗಳ ಸಾವಿಗೆ ಪರೋಕ್ಷ ಕಾರಣರು. ಸದ್ಯ ಈ ನಿಗೂಢ ಆದೇಶ ರದ್ದತಿಯ ಕುರಿತು ಉನ್ನತ ಮಟ್ಟದ ತನಿಖೆ ನಡೆಯಬೇಕಾದ ಅನಿವಾರ್ಯತೆ ಇದೆ.

''ಅಪ್ಪಾ ನನ್ನನ್ನು ಹೇಗಾದರೂ ಕಾಪಾಡು'' ಎಂದು ಸಾವಿನ ದವಡೆಯಲ್ಲಿ ಸಿಲುಕಿದ್ದ ಆ ಮಗನ ಆಕ್ರಂದನ, ಆ ತಂದೆಯ ಕಿವಿಯಲ್ಲಿ ಮಾತ್ರವಲ್ಲ, ಇಡೀ ವ್ಯವಸ್ಥೆಯ ಆತ್ಮಸಾಕ್ಷಿಯಲ್ಲಿ ದಶಕಗಳ ಕಾಲ ಗುಂಯ್ ಗುಡುತ್ತಲೇ ಇರಬೇಕು. ಒಂದು ಮಗುವನ್ನು ರಕ್ಷಿಸಿಕೊಳ್ಳಲಾಗದ ಅಸಹಾಯಕತೆಗಿಂತ ದೊಡ್ಡ ಶಿಕ್ಷೆ ಹೆತ್ತವರಿಗೆ ಮತ್ತೊಂದಿಲ್ಲ; ಆದರೆ, ಆ ಅಸಹಾಯಕತೆ ಉಂಟಾಗಿದ್ದು ಸುರಕ್ಷತೆಯನ್ನು ಗಾಳಿಗೆ ತೂರಿ ಲಾಭದ ದುರಾಸೆಗೆ ಬಿದ್ದವರ ಕ್ರೌರ್ಯದಿಂದ. ಅಲ್ಲಿ ಅಸುನೀಗಿದವರ ಕೊನೆಯ ಕರೆ, ಇನ್ನು ಮುಂದೆ ವ್ಯವಸ್ಥೆಯ ನಿದ್ದೆಗೆಡಿಸಬೇಕಿದೆ.

ಇಂತಹ ದುರಂತಗಳಿಗೆ ನೆಪ ಮಾತ್ರದ ತನಿಖೆಗಳು, ಪರಿಹಾರಗಳು ಮತ್ತು ಬಂಧನಗಳು ತಾತ್ಕಾಲಿಕ ಪರಿಹಾರಗಳಷ್ಟೇ. ಇನ್ನು ಮುಂದಾದರೂ ಅಮಾಯಕರ ಕೂಗಿಗೆ ಪ್ರತಿಯಾಗಿ ಸುರಕ್ಷತೆಯ ಭರವಸೆ ಸಿಗಲಿ. ತಪ್ಪಿತಸ್ಥರಿಗೆ ಮುಲಾಜಿಲ್ಲದೆ ಕಠಿಣ ಶಿಕ್ಷೆಯಾಗಲಿ.

ಬಿಹಾರ ಪೊಲೀಸರಿಂದ ಕೊಲೆಯಾದ ಭರತ್ ತಿವಾರಿ: 'ಯುಪಿ ಮಾಡೆಲ್'ನ ಹೊಸ ಆಯಾಮವೇ?

ಬಿಹಾರದ ನಕಲಿ ಎನ್‌ಕೌಂಟರ್‌ನಲ್ಲಿ ಮುಸ್ಲಿಂ ವ್ಯಕ್ತಿಯೊಬ್ಬನ ಹತ್ಯೆಯಾಗಿದ್ದರೆ ಇಷ್ಟೊಂದು ಆಕ್ರೋಶ ನಾವು ನೋಡಲು ಸಿಗುತ್ತಿತ್ತೆ? ಬಿಜೆಪಿ ನಾಯಕರು ಈ ಎನ್‌ಕೌಂಟರ್ ಅನ್ನು ಖಂಡಿಸಿ ಹೇಳಿಕೆ ನೀಡುತ್ತಿದ್ದರೆ? ಉತ್ತರ ಪ್ರದೇಶದ ಎನ್‌ಕೌಂಟರ್ ಮಾದರಿಯೇ ಈ ನಕಲಿ ಎನ್‌ಕೌಂಟರ್‌ಗೆ ಪ್ರೇರಣೆಯಲ್ಲವೇ?

ವಾಸ್ತವದಲ್ಲಿ ಎನ್‌ಕೌಂಟರ್ ಸಂಸ್ಕೃತಿಯೇ ಸಂವಿಧಾನ ವಿರೋಧಿ. ಆದರೂ ಸಾಮಾನ್ಯವಾಗಿ ಎನ್‌ಕೌಂಟರ್‌ಗಳು ಎಂದರೆ ಕಟುಕ ಅಪರಾಧಿಗಳು, ಉಗ್ರಗಾಮಿಗಳು ಅಥವಾ ಸಮಾಜ ಕಂಟಕರ ವಿರುದ್ಧ ನಡೆಯುವ ಪೊಲೀಸ್ ಕಾರ್ಯಾಚರಣೆ ಎಂಬ ಭಾವನೆ ಜನರದ್ದು. ಆದರೆ ಹಲವು ಪ್ರಕರಣಗಳಲ್ಲಿ ನಡೆಯುತ್ತಿರುವುದೇ ಬೇರೆ. ಈಗ ಅಪರಾಧ ಹಿನ್ನೆಲೆ ಇಲ್ಲದವರೂ ಈ ನಕಲಿ ಎನ್‌ಕೌಂಟರ್‌ಗಳಿಗೆ ಬಲಿಯಾಗುತ್ತಿದ್ದಾರೆ. ಅಂತಹ ಘಟನೆಗಳನ್ನು ಬಿಹಾರದ ಬಿಲೌತಿ ಗ್ರಾಮದಲ್ಲಿ ಇತ್ತೀಚೆಗೆ ನಡೆದ 28ರ ಯುವಕ ಭರತ್ ಭೂಷಣ್ ತಿವಾರಿ ಎನ್‌ಕೌಂಟರ್ ಪ್ರಕರಣವೂ ಒಂದು.

ಜೂನ್ 17ರಂದು ಭರತ್ ಭೂಷಣ್ ತಿವಾರಿ ಅವರ ನಕಲಿ ಎನ್‌ಕೌಂಟರ್ ನಡೆದಿದೆ. ಯಾವುದೇ ಅಪರಾಧ ಹಿನ್ನೆಲೆ ಇಲ್ಲದ, ಸಾಮಾಜಿಕ ಕಾರ್ಯಗಳಲ್ಲಿ ತೊಡಗಿಕೊಂಡಿದ್ದ ವ್ಯಕ್ತಿಯ ಎನ್‌ಕೌಂಟರ್ ನಡೆದಿರುವುದು ಸದ್ಯ ತೀವ್ರ ಆಕ್ರೋಶಕ್ಕೆ ಕಾರಣವಾಗಿದೆ. ಅದರಲ್ಲೂ ತಿವಾರಿ ತನ್ನ ಕೈಯಲ್ಲಿದ್ದ ಪಿಸ್ತೂಲನ್ನು ಪೊಲೀಸರತ್ತ ಎಸೆದು ಶರಣಾದ ನಂತರವೇ ಪೊಲೀಸರು ಗುಂಡು ಹಾರಿಸಿರುವುದು ಸ್ಪಷ್ಟವಾಗಿ ಕೊಲೆ. ಈ ಘಟನೆ ಬಗ್ಗೆ ಪೊಲೀಸರು ಹೆಣೆದ ಕತೆಗಳು ಹತ್ತಾರು. ಆದರೆ ಘಟನೆ ವೇಳೆಯ ವಿಡಿಯೋ ಎಲ್ಲವನ್ನೂ ಬಹಿರಂಗಪಡಿಸಿದೆ. ಸದ್ಯ ಈ ಬಗ್ಗೆ ಬಿಹಾರ ಸರ್ಕಾರ ನ್ಯಾಯಾಂಗ ತನಿಖೆಗೆ ಆದೇಶಿಸಿದೆ.

ಅಷ್ಟಕ್ಕೂ ಯಾರು ಈ ಭರತ್ ಭೂಷಣ್ ತಿವಾರಿ?

ಭರತ್ ಭೂಷಣ್ ತಿವಾರಿ ಬಿಹಾರದ ಭೋಜಪುರ ಜಿಲ್ಲೆಯ ಷಹಪುರ ಪೊಲೀಸ್ ಠಾಣಾ ವ್ಯಾಪ್ತಿಯ ಬಿಲೌತಿ ಗ್ರಾಮದ ಬಿಎಸ್‌ಸಿ ಪದವೀಧರ ಯುವಕ. ಸ್ಥಳೀಯರ ಮತ್ತು ಕುಟುಂಬದ ಪ್ರಕಾರ, ಈತ ಯಾವುದೇ ಅಪರಾಧ ಹಿನ್ನೆಲೆ ಹೊಂದಿರದ, ಸಮಾಜ ಕಲ್ಯಾಣದಲ್ಲಿ ತೊಡಗಿಸಿಕೊಂಡಿದ್ದ ಒಬ್ಬ ಸಾಮಾಜಿಕ ಕಾರ್ಯಕರ್ತ. ಕಳೆದ ವರ್ಷ ಬಿಹಾರದಲ್ಲಿ ಸಂಭವಿಸಿದ ಪ್ರವಾಹದಿಂದಾಗಿ ಮನೆ-ಮಠ ಕಳೆದುಕೊಂಡು ಸಂಕಷ್ಟಕ್ಕೀಡಾಗಿದ್ದ ಬಡವರು, ದಲಿತರು ಹಾಗೂ ವಂಚಿತ ವರ್ಗಗಳ ಪುನರ್ವಸತಿಗಾಗಿ ಈತ ನಿರಂತರವಾಗಿ ಧ್ವನಿ ಎತ್ತುತ್ತಿದ್ದ.

ಪ್ರವಾಹ ಪೀಡಿತರಿಗೆ ಸರ್ಕಾರ ಹಾಗೂ ಅಧಿಕಾರಿಗಳು ನೀಡಿದ ಭರವಸೆಗಳನ್ನು ಈಡೇರಿಸದಿದ್ದಕ್ಕೆ ಭರತ್ ವ್ಯವಸ್ಥೆಯ ವಿರುದ್ಧ ತೀವ್ರ ಅಸಮಾಧಾನ ಹೊಂದಿದ್ದ. ಈ ಸಂಬಂಧ ಫೇಸ್‌ಬುಕ್ ಹಾಗೂ ಇತರ ಸಾಮಾಜಿಕ ಜಾಲತಾಣಗಳ ಮೂಲಕ ನಿರಂತರವಾಗಿ ಧ್ವನಿ ಎತ್ತುತ್ತಿದ್ದ. ತನ್ನನ್ನು ಕ್ರಾಂತಿಕಾರಿ ಎಂದು ಕರೆದುಕೊಳ್ಳುತ್ತಿದ್ದ. ಇದರಿಂದಾಗಿ ಸ್ಥಳೀಯವಾಗಿ ಜನಪ್ರಿಯವಾಗಿದ್ದ ಯುವಕ ಭರತ್ ತಿವಾರಿ.

ಜೂನ್ 16ರಂದು ಭರತ್ ಭೂಷಣ್ ಕೈಯಲ್ಲಿ ಪಿಸ್ತೂಲ್ ಹಿಡಿದುಕೊಂಡು ಫೇಸ್‌ಬುಕ್ ಲೈವ್ ಬಂದು ಅಧಿಕಾರಿಗಳ ವಿರುದ್ಧ ಆಕ್ರೋಶ ಹೊರಹಾಕಿದ್ದ. ಜನಪ್ರತಿನಿಧಿಗಳು ಭರವಸೆ ಈಡೇರಿಸದಿದ್ದರೆ ಕಠಿಣ ಹಾದಿ ಹಿಡಿಯುವುದಾಗಿ ಎಚ್ಚರಿಸಿದ್ದ. ಜೂನ್ 16ರಂದು ಪೊಲೀಸರು ಆತನ ಮನೆಗೆ ಹೋದಾಗ ಪೊಲೀಸರತ್ತ ಆತ ಪಿಸ್ತೂಲ್ ತೋರಿಸಿದ್ದ ಎಂಬ ಆರೋಪವಿದೆ. ತಾಯಿ ಮಧ್ಯಪ್ರವೇಶಿಸಿ ಪರಿಸ್ಥಿತಿ ತಿಳಿಗೊಳಿಸಿದ್ದರು. ಅದೇ ದಿನ ಪೊಲೀಸರು ಪ್ರಕಟಣೆ ಹೊರಡಿಸಿ, ''ಭರತ್ ಮಾನಸಿಕವಾಗಿ ಅಸ್ವಸ್ಥನಾಗಿದ್ದು, ಆತನನ್ನು ಚಿಕಿತ್ಸೆ ಗೆ ಸೇರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ'' ಎಂದಿದ್ದರು.

ಜೂನ್ 17ರಂದು ಬೆಳಗ್ಗೆ ಭರತ್ ತಂಗಿದ್ದ ಜಾಗವನ್ನು ಭಾರಿ ಸಂಖ್ಯೆಯ ಮತ್ತು ಪೊಲೀಸರು ಸುತ್ತುವರೆದರು. ಭರತ್ ತನ್ನ ಕೊನೆಯ ಫೇಸ್‌ಬುಕ್ ಲೈವ್‌ನಲ್ಲಿ ''ಅಧಿಕಾರಿಗಳು ನನ್ನ ಬೇಡಿಕೆಗಳನ್ನು ಈಡೇರಿಸುವುದಾದರೆ ಶಸ್ತ್ರಾಸ್ತ್ರಗಳನ್ನು ಕೆಳಗಿಡಲು ನನಗೆ ಯಾವುದೇ ಅಭ್ಯಂತರವಿಲ್ಲ'' ಎಂದು ಹೇಳಿದ್ದ.

ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿರುವ ವಿಡಿಯೋಗಳನ್ನು ನಾವು ಗಮನಿಸಿದಾಗ ಭರತ್ ತನ್ನ ಪಿಸ್ತೂಲನ್ನು ದೂರ ಎಸೆದಿದ್ದ, ಪೊಲೀಸರ ಮುಂದೆ ಶರಣಾಗಲು ಸಿದ್ಧವಾಗಿದ್ದ. ಆದರೆ, ಅದೇ ಸಂದರ್ಭದಲ್ಲಿ ಪೊಲೀಸರು ಆತನ ಕಾಲಿಗೆ ಗುಂಡು ಹಾರಿಸಿದ್ದಾರೆ. ಅದೂ ನಾಲ್ಕು ಗುಂಡುಗಳನ್ನು ಹಾರಿಸಲಾಗಿದೆ. ಆತನನ್ನು ಪಟನಾದ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಗೆ () ದಾಖಲಿಸಲಾಗಿತ್ತು. ಆದರೆ ಚಿಕಿತ್ಸೆ ಫಲಕಾರಿಯಾಗದೆ ಆತ ಮೃತಪಟ್ಟಿದ್ದಾನೆ.

ಭರತ್ ಸಾರ್ವಜನಿಕವಾಗಿ ಗಾಳಿಯಲ್ಲಿ ಗುಂಡು ಹಾರಿಸುತ್ತಿದ್ದ ಮತ್ತು ಶರಣಾಗಲು ಸೂಚಿಸಿದರೂ ಪೊಲೀಸರ ಮೇಲೆಯೇ ಗುಂಡು ಹಾರಿಸಿದ. ಆತ್ಮರಕ್ಷಣೆಗಾಗಿ ತಾವು ತಿರುಗಿ ಬಿದ್ದಿದ್ದಾಗಿ ಪೊಲೀಸರು ಹೇಳಿಕೊಂಡಿದ್ದಾರೆ. ಆದರೆ ಭರತ್ ತಾನಾಗಿಯೇ ಪಿಸ್ತೂಲ್ ಎಸೆದು ಶರಣಾಗುತ್ತಿದ್ದರೂ ಪೊಲೀಸರು ಗುಂಡು ಹಾರಿಸಿರುವುದು ವಿಡಿಯೋದಲ್ಲಿ ಸೆರೆಯಾಗಿದೆ. ಆಡಳಿತಾರೂಢ ಬಿಜೆಪಿ ಮತ್ತು ಜೆಡಿಯು ನಾಯಕರು ಸೇರಿದಂತೆ ಹಲವು ನಾಯಕರು ಪೊಲೀಸರ ಕ್ರಮವನ್ನು ತೀವ್ರವಾಗಿ ಖಂಡಿಸಿದ್ದಾರೆ.

ಆಡಳಿತಾರೂಢ ಬಿಜೆಪಿ ಮತ್ತು ಜೆಡಿಯು ನಾಯಕರು ಸೇರಿದಂತೆ ಹಲವು ರಾಜಕಾರಣಿಗಳು ಪೊಲೀಸರ ಕ್ರಮವನ್ನು ತೀವ್ರವಾಗಿ ಖಂಡಿಸಿದ್ದಾರೆ. ''ಭರತ್ ಬಡವರ ಧ್ವನಿಯಾಗಿದ್ದ, ಆತ ಶರಣಾದ ಮೇಲೆಯೂ ಗುಂಡಿಕ್ಕಿರುವುದು ಪ್ರಜಾಪ್ರಭುತ್ವಕ್ಕೆ ಕಪ್ಪು ಚುಕ್ಕೆ'' ಎಂದು ಮಾಜಿ ಕೇಂದ್ರ ಸಚಿವ ಅಶ್ವಿನಿ ಚೌಬೆ ಸೇರಿದಂತೆ ಹಲವರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಆರ್‌ಜೆಡಿ ನಾಯಕ ತೇಜಸ್ವಿ ಯಾದವ್, ಸೇರಿದಂತೆ ಬಿಹಾರದ ವಿರೋಧ ಪಕ್ಷಗಳು ಈ ಘಟನೆಯನ್ನು ಖಂಡಿಸಿದ್ದಾರೆ.

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR